ಸಂಪುಟ: 06 ಸಂಚಿಕೆ: 29 ಪುಟಗಳು: 08 ಸೋಮವಾರ 13 ಏಪ್ರಿಲ್ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ದಿನದಲ್ಲಿ ಒಮ್ಮೆಯಾದರೂ ನಿಮ್ಮೊಂದಿಗೆ ಮಾತನಾಡಿ. ಇಲ್ಲವಾದಲ್ಲಿ ವಿಶ್ವದ ಅತ್ಯುತ್ತಮ ವ್ಯಕ್ತಿಯನ್ನು ಭೇಟಿಯಾಗುವ ಅವಕಾಶದಿಂದ ವಂಚಿತರಾಗುತ್ತೀರಿ.

## ತೃತೀಯ ಭಾಷೆ ಗ್ರೇಡಿಂಗ್: ಆಕ್ಷೇಪಣೆ ಸಲ್ಲಿಸಲು ಎ.17ರ ವರೆಗೆ ಅವಕಾಶ

• ಉದಯವಾಹಿನಿ, ಕೊಚ್ಚಿ

ರಾಜ್ಯ ಸರಕಾರವು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಿಂದಿ ಸೇರಿದಂತೆ ತೃತೀಯ ಭಾಷೆಗೆ ಅಂಕಗಳ ಬದಲಿಗೆ ಶ್ರೇಣಿ ಗ್ರೇಡಿಂಗ್ ಪದ್ಧತಿಯನ್ನು ನೀಡುವ ಸಂಬಂಧ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಕಾಯ್ದೆಗೆ ತಿದ್ದುಪಡಿ ತಂದಿದ್ದು, ಸಾರ್ವಜನಿಕರ ಸಲಹೆ, ಆಕ್ಷೇಪಣೆಗಳನ್ನು ಪಡೆಯಲು ತಿದ್ದುಪಡಿಯ ಕರಡು ಅಧಿಸೂಚನೆಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿದೆ. ಪ್ರತಿ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಆರು ವಿಷಯಗಳಿಗೆ ಒಟ್ಟು 625 ಅಂಕಗಳಿಗೆ ನಡೆಸಲಾಗುತ್ತದೆ. ಆದರೆ 2025-26ನೇ ಸಾಲಿನಿಂದ ತೃತೀಯ ಭಾಷೆ ಮತ್ತು ಎನ್‌ಎಸ್‌ಕ್ಯೂಎಫ್ ವಿಷಯಗಳಲ್ಲಿ ಪಡೆದ ಅಂಕಗಳನ್ನು ಶ್ರೇಣಿಗಳ (ಗ್ರೇಡ್) ರೂಪದಲ್ಲಿ ಪ್ರಕಟಿಸಲಾಗುತ್ತದೆ. ಈ ವಿಷಯಗಳನ್ನು ಅಂಕಪಟ್ಟಿಯಲ್ಲಿ ಹೆಚ್ಚುವರಿ ವಿಷಯಗಳಾಗಿ ನಮೂದಿಸಬೇಕು. ಈ ವಿಷಯಗಳನ್ನು ಉತ್ತೀರ್ಣರಾಗಲು ಪರಿಗಣನೆ ಆಗುವುದಿಲ್ಲ. ಹೀಗಾಗಿ ಇನ್ನು ಮುಂದೆ ಪರೀಕ್ಷೆಯನ್ನು ಒಟ್ಟು 525 ಅಂಕಗಳಿಗೆ ನಡೆಸಲಾಗುತ್ತದೆ ಎಂದು ತಿಳಿಸಿದೆ. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ತೃತೀಯ ಭಾಷೆಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಎ, ಬಿ, ಸಿ ಶ್ರೇಣಿಗಳನ್ನು ನೀಡಲಾಗುತ್ತದೆ. ಅದರಂತೆ, ಈ ವಿಷಯದಲ್ಲಿ ಶೇ.80 ರಿಂದ ಶೇ.100 ಅಂಕ ಪಡೆದರೆ 'ಎ' ಶ್ರೇಣಿ, ಶೇ.50ರಿಂದ ಶೇ.79ರವರೆಗೆ 'ಬಿ' ಮತ್ತು ಶೇ.49ರವರೆಗೆ 'ಸಿ ಶ್ರೇಣಿಗಳನ್ನು ನೀಡಲಾಗುವುದು ಎಂದು ಕರಡು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಅಭ್ಯರ್ಥಿಗಳು ಆಂತರಿಕ ಮೌಲ್ಯಮಾಪನ ಮತ್ತು ಬಾಹ್ಯ ಪರೀಕ್ಷೆಯಲ್ಲಿ ಒಟ್ಟಾರೆಯಾಗಿ ಶೇ.33 ಅಂಕಗಳನ್ನು ಪಡೆಯಬೇಕು. ಒಟ್ಟು 525 ಅಂಕಗಳಲ್ಲಿ ಕನಿಷ್ಟ 173 ಅಂಕಗಳನ್ನು ಗಳಿಸುವುದರೊಂದಿಗೆ ಆಯಾ ವಿಷಯದ ಒಟ್ಟು ಅಂಕಗಳಲ್ಲಿ ಪ್ರತಿ ವಿಷಯದಲ್ಲಿ ಕನಿಷ್ಟ 30 ಪ್ರತಿಶತ ಅಂಕಗಳನ್ನು ಗಳಿಸಿದರೆ ಅಂತಹ ಅಭ್ಯರ್ಥಿಗಳನ್ನು ಉತ್ತೀರ್ಣರೆಂದು ಘೋಷಿಸಲಾಗುವುದು ಎಂದು ಕರಡು ಅಧಿಸೂಚನೆಯಲ್ಲಿ ಉಲ್ಲೇಖಿಸಲಾಗಿದೆ.

## ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಬಿಸಿಗಾಳಿ; ಯೆಲ್ಲೋ ಅಲರ್ಟ್ ಘೋಷಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ದಿನೇ ದಿನೇ ಬಿಸಿಲಿನ ತೀವ್ರತೆ ಹೆಚ್ಚಾಗುತ್ತಿದ್ದು ಹವಾಮಾನ ಇಲಾಖೆಯು ರಾಜ್ಯ ವಿವಿಧ ಜಿಲ್ಲೆಗಳಲ್ಲಿ ಮುಂದಿನ ನಾಲ್ಕು ದಿನಗಳ ಕಾಲ ಒಣ ಹವೆಯ ಯೆಲ್ಲೋ ಅಲರ್ಟ್ ಅನ್ನು ಘೋಷಣೆ ಮಾಡಿದೆ. ರವಿವಾರದಂದು ಕಲಬುರಗಿಯಲ್ಲಿ ಅತ್ಯಾಧಿಕ ಉಷ್ಣಾಂಶ ದಾಖಲಾಗಿದ್ದು, ಗರಿಷ್ಟ ತಾಪಮಾನವು 41.6 ಸೆಲ್ಸಿಯಸ್‌ಗೆ ಏರಿಕೆಯಾಗಿದೆ. ಎ.13ರಂದು ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಕೊಡಗು, ಹಾಸನ, ಮೈಸೂರು ಮತ್ತು ಚಾಮರಾಜನಗರ, ಎ.14ರಂದು ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಕೊಡಗು, ಚಿಕ್ಕಮಗಳೂರು, ಮೈಸೂರು, ಮಂಡ್ಯ ಮತ್ತು ಚಾಮರಾಜನಗರ, ಎ.15ರಂದು ದಕ್ಷಿಣ ಕನ್ನಡ, ಹಾಸನ, ಮೈಸೂರು, ಚಾಮರಾಜನಗರ, ಬಾಗಲಕೋಟೆ, ಗದಗ ಮತ್ತು ಧಾರವಾಡ, ಎ.16ರಂದು ಉಡುಪಿ, ದಕ್ಷಿಣ ಕನ್ನಡ, ಕೊಡಗು, ಹಾಸನ, ಚಿಕ್ಕಮಗಳೂರು, ಮೈಸೂರು, ಮಂಡ್ಯ, ಚಾಮರಾಜನಗರ, ಬಾಗಲಕೋಟೆ, ಗದಗ ಮತ್ತು ಧಾರವಾಡ ಜಿಲ್ಲೆಗಳಿಗೆ ತಾಪಮಾನ ಹೆಚ್ಚಳದ ಯೆಲ್ಲೋ ಅಲರ್ಟ್ ನೀಡಲಾಗಿದೆ.

## ದಾವಣಗೆರೆಲಿ ರಿಸಲ್ಟ್‌ಗೂ ಮುನ್ನವೇ ಸೋಲೊಪ್ಪಿಕೊಂಡ ಕಾಂಗ್ರೆಸ್

• ಉದಯವಾಹಿನಿ, ಬೆಂಗಳೂರು

ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಫಲಿತಾಂಶ ಹೊರಬೀಳುವ ಮುನ್ನವೇ ಕಾಂಗ್ರೆಸ್ ಸೋಲೊಪ್ಪಿಕೊಂಡಿದೆ. ಈ ಫಲಿತಾಂಶವು ರಾಜ್ಯ ರಾಜಕೀಯ ಚಿತ್ರಣ ಬದಲಾಯಿಸಲಿದೆ ಎಂದು ಸ್ವಾಭಿಮಾನಿ ಬಳಗದ ರಾಜ್ಯ ಘಟಕದ ಅಧ್ಯಕ್ಷ ಜಿ.ಬಿ. ವಿನಯ್ ಕುಮಾರ್ ತಿಳಿಸಿದರು. ಬಿಜೆಪಿ ಅಭ್ಯರ್ಥಿ ಟಿ. ಶ್ರೀನಿವಾಸ ದಾಸಕರಿಯಪ್ಪ ಅವರನ್ನು ಬೆಂಬಲಿಸಿದ ಸ್ವಾಭಿಮಾನಿ ಬಳಗವು ಗ್ರಾಮೀಣ ಪ್ರದೇಶದಲ್ಲಿ ಪಾದಯಾತ್ರೆ ನಡೆಸಿ ಮತಯಾಚಿಸಿತ್ತು. ಈ ಮತಗಟ್ಟೆಗಳಲ್ಲಿ ಹೆಚ್ಚು ಮತದಾನವಾಗಿದ್ದು, ಬಿಜೆಪಿ ಮುನ್ನಡೆ ಸಾಧಿಸುವ ವಿಶ್ವಾಸ ಮೂಡಿದೆ. ಬಿಜೆಪಿ ರಾಜ್ಯ ನಾಯಕರು ನಡೆಸಿದ ಪ್ರಚಾರದಿಂದ ಪಕ್ಷದ ಸಾಂಪ್ರದಾಯಿಕ ಮತಗಳು ಚದುರಿಲ್ಲ ಎಂದು ಭಾನುವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಅಹಿಂದ ವರ್ಗವನ್ನು ಕಾಂಗ್ರೆಸ್ ಕೇವಲ ಮತಬ್ಯಾಂಕ್ ಆಗಿ ಮಾಡಿಕೊಂಡಿದೆ. ಕಾಂಗ್ರೆಸ್ ಆತ್ಮಾವಲೋಕನ ಮಾಡಿಕೊಳ್ಳುವಂತಹ ಫಲಿತಾಂಶವನ್ನು ದಕ್ಷಿಣ ವಿಧಾನಸಭಾ ಕ್ಷೇತ್ರದ ಮತದಾರರು ನೀಡಿದ್ದಾರೆ. ಕಾಂಗ್ರೆಸ್ ಮುಖಂಡರ ಹೇಳಿಕೆ, ಬಹಿರಂಗ ಆರೋಪ ಪ್ರತ್ಯಾರೋಪಗಳು ಇದನ್ನು ದೃಢಪಡಿಸಿವೆ. ಶೋಷಿತ ವರ್ಗಗಳ ಸ್ವಾಭಿಮಾನದ ಚುನಾವಣೆ ಇದಾಗಿದ್ದು, ಕಾಂಗ್ರೆಸ್ ದುರಾಡಳಿತದ ವಿರುದ್ಧವಾಗಿ ಜನರು ಆಕ್ರೋಶ ಹೊರಹಾಕಿದ್ದಾರೆ ಎಂದರು. ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ನಗುತ್ತ ಚುನಾವಣೆ ಮಾಡುವಂತೆ ನೀಡಿದ್ದ ಸಂದೇಶ ಪಾಲಿಸಿದ್ದೇವೆ. ಬಿಜೆಪಿ ನಾಯಕರು, ಸ್ವಾಭಿಮಾನಿ ಬಳಗದ ಮುಖಂಡರು ನಗುತ್ತ ಚುನಾವಣೆ ಮಾಡಿದ್ದೇವೆ. ಮುಸ್ಲಿಂ ಸಮುದಾಯ ಕೂಡ ಹರ್ಷದಿಂದ ಹಕ್ಕು ಚಲಾವಣೆ ಮಾಡಿದೆ.


## ಇರಾನ್ ಮೇಲೆ ಮತ್ತೆ ದಾಳಿ ಮಾಡುವುದಾಗಿ ಟ್ರಂಪ್ ಬೆದರಿಕೆ | ಇರಾನ್ ವಿರುದ್ಧ ಮಿಲಿಟರಿ ಕಾರ್ಯಾಚರಣೆಯ ಸನ್ನದ್ಧತೆ

# ಮತ್ತೆ ಯುದ್ಧದ ಆತಂಕ

## ಎದ್ದುನಿಂತ ಟ್ರಂಪ್ ಕಿರಾತಕ

ಜಲಸಂಧಿಯನ್ನು ಮುಕ್ತಗೊಳಿಸುವುದಾಗಿ ಹೇಳಿರುವುದು ಯುದ್ಧದ ಮುನ್ಸೂಚನೆ

ಟ್ರಂಪ್ ಹೇಳಿಕೆಯ ಹಿನ್ನೆಲೆಯಲ್ಲಿ ಅಂತಾರಾಷ್ಟ್ರೀಯ ತೈಲ ಬೆಲೆಗಳು ಏರಿಕೆ




**ಚೀನಾಗೆ ಟ್ರಂಪ್ ವಾರ್ನಿಂಗ್**

ಚೀನಾ ಶೀಘ್ರದಲ್ಲೇ ಇರಾನ್‌ಗೆ ವಾಯು ರಕ್ಷಣಾ ವ್ಯವಸ್ಥೆಯನ್ನು ಒದಗಿಸಲು ಸಿದ್ಧತೆ ನಡೆಸುತ್ತಿದೆ ಎಂದು ಅಮೆರಿಕದ ಗುಪ್ತಚರ ವರದಿಗಳು ತಿಳಿಸಿವೆ.ಇದರ ಬೆನ್ನಲ್ಲೇ, ಜಿನ್‌ಪಿಂಗ್ ಅವರೇ, ಇರಾನ್‌ಗೆ ಶಸ್ತ್ರಾಸ್ತ್ರ ನೀಡುವ ಸಾಹಸ ಮಾಡಬೇಡಿ, ಇಲ್ಲದಿದ್ದರೆ ನೀವು ಊಹಿಸಲಾಗದ ಸಂಕಷ್ಟಕ್ಕೆ ಸಿಲುಕುತ್ತೀರಿ ಎಂದು ಅಮೇರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚೀನಾಕ್ಕೆ ನೇರ ಎಚ್ಚರಿಕೆ ಕೊಟ್ಟಿದ್ದಾರೆ.

**ಒಪ್ಪಂದ ಮಾಡಿಕೊಳ್ಳದಿರುವುದು ದುರಾದೃಷ್ಟಕರ**

ಅಮೆರಿಕದ ಅತ್ಯುತ್ತಮ ಆಫರ್‌ಗಳನ್ನು ಇರಾನ್ ತಿರಸ್ಕರಿಸಿರುವುದು ದುರಾದೃಷ್ಟಕರ ಎಂದು ಟ್ರಂಪ್ ಬಣ್ಣಿಸಿದ್ದಾರೆ. ನಾವು ಸ್ನೇಹದ ಹಸ್ತವನ್ನು ಚಾಚಿದ್ದೆವು. ಆದರೆ ಅವರು ಕೈಕೊಡಲಿಲ್ಲ. ಅವರ ನಿರ್ಧಾರ ಅತ್ಯಂತ ದುರದೃಷ್ಟಕರ ಎಂದು ಹೇಳಿದರು. ತಮ ಆಡಳಿತದಲ್ಲಿ ಇರಾನ್ ವಿರುದ್ಧ ಗರಿಷ್ಠ ಒತ್ತಡ ನೀತಿಯನ್ನು ಮುಂದುವರಿಸುವುದಾಗಿ ಸ್ಪಷ್ಟಪಡಿಸಿದರು.

• ಉದಯವಾಹಿನಿ, ಮಂಗಳೂರು

ಪಾಕಿಸ್ತಾನದ ಇಸ್ಲಾಮಾಬಾದ್‌ನಲ್ಲಿ ನಡೆದ ಅಮೆರಿಕ-ಇರಾನ್ ಮಾತುಕತೆ ವಿಫಲಗೊಂಡ ಬೆನ್ನಲ್ಲೇ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್ ಮೇಲೆ ಮತ್ತೆ ದಾಳಿ ನಡೆಸುವ ಬೆದರಿಕೆಯೊಡ್ಡಿದ್ದಾರೆ. ಮಾತುಕತೆ ವಿಫಲವಾದರೆ ಯುದ್ಧವೇ ಪರ್ಯಾಯ ಎಂದು ಮೊದಲೇ ಟ್ರಂಪ್ ಹೇಳಿದ್ದರು. ಹಾರ್ಮುಜ್ ಜಲಸಂಧಿಯನ್ನು ಅಮೆರಿಕವೇ ಮುಕ್ತಗೊಳಿಸುತ್ತದೆ ಎಂದು ಹೇಳಿದ್ದಾರೆ. ಒಪ್ಪಂದ ಮಾಡಿಕೊಳ್ಳದಿರುವ ಇರಾನ್‌ನ ನಿಲುವನ್ನು ದುರಾದೃಷ್ಟಕರ ಎಂದು ಕರೆದಿರುವ ಟ್ರಂಪ್ ಮತ್ತೆ ದಾಳಿಯ ಸುಳಿವು ನೀಡಿದ್ದಾರೆ.

ಇಸ್ಲಾಮಾಬಾದ್ ಮಾತುಕತೆ ವಿಫಲವಾದ 24 ಗಂಟೆಗಳೊಳಗೇ ಟ್ರಂಪ್ ಈ ಹೇಳಿಕೆ ನೀಡಿದ್ದಾರೆ. ಇದನ್ನು ಇರಾನ್ ವಿರುದ್ಧದ ಮಿಲಿಟರಿ ಕಾರ್ಯಾಚರಣೆಯ ಸನ್ನದ್ಧತೆ ಎಂದೇ ಅರ್ಥೈಸಲಾಗುತ್ತಿದೆ. ಪೆಂಟಗನ್ ಈಗಾಗಲೇ ಆ ಪ್ರದೇಶದಲ್ಲಿ ಹೆಚ್ಚುವರಿ ನೌಕಾ ಮತ್ತು ವಾಯುಪಡೆಯನ್ನು ನಿಯೋಜಿಸಿದೆ ಎಂಬ ವರದಿಗಳಿವೆ. ಅಲ್ಲದೆ, ಇಸ್ರೇಲ್ ಕೂಡ ಇರಾನ್ ವಿರುದ್ಧ ಸ್ವತಂತ್ರ ಕಾರ್ಯಾಚರಣೆಗೆ ಸಿದ್ಧತೆ ನಡೆಸುತ್ತಿರುವ ಸೂಚನೆಗಳಿವೆ. ಮಾತುಕತೆಗಳು ಯಾವುದೇ ಫಲಿತಾಂಶಗಳನ್ನು ನೀಡದ ನಂತರ ಅಧ್ಯಕ್ಷರು ಟೆಹ್ರಾನ್ ವಿರುದ್ಧ ಯಾವ ಕ್ರಮಗಳನ್ನು ತೆಗೆದುಕೊಳ್ಳಬಹುದು ಎಂಬುದರ ಕುರಿತು ಬೆಳಕು ಚೆಲ್ಲುವ ಜಸ್ಟ್ ದಿ ನ್ಯೂಸ್ ವೆಬ್‌ಸೈಟ್‌ನಿಂದ ಬಂದ ಲೇಖನವನ್ನು ಟ್ರಂಪ್ ಟ್ರುತ್ ಸೋಶಿಯಲ್‌ಗೆ ಮರು ಪೋಸ್ಟ್ ಮಾಡಿದ್ದಾರೆ. ಹಾರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸುವ ಟ್ರಂಪ್ ಹೇಳಿಕೆಯ ಹಿನ್ನೆಲೆಯಲ್ಲಿ ಅಂತಾರಾಷ್ಟ್ರೀಯ ತೈಲ ಬೆಲೆಗಳು ಏರಿಕೆಯಾಗಿವೆ. ವಿಶ್ವಸಂಸ್ಥೆ ಮತ್ತು ಯುರೋಪಿಯನ್ ಒಕ್ಕೂಟ ತಕ್ಷಣ ಶಾಂತಿ ಮಾತುಕತೆಗೆ ಕರೆ ನೀಡಿವೆ. ಆದರೆ ಟ್ರಂಪ್ ಸದ್ಯಕ್ಕೆ ಯಾವುದೇ ಮತ್ತೊಂದು ಸಂಧಾನದ ಸಾಧ್ಯತೆಯನ್ನು ತಳ್ಳಿಹಾಕಿದ್ದಾರೆ. ಇರಾನ್ ನಮ್ಮ ಷರತ್ತುಗಳನ್ನು ಒಪ್ಪುವವರೆಗೆ ಯಾವುದೇ ಮಾತುಕತೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇರಾನ್ ಕಡೆಯಿಂದ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ, ಅಲ್ಲಿನ ವರಿಷ್ಠ ನಾಯಕ ಅಯಾತೊಲ್ಲಾ ಖಮೇನಿ ಅವರು ಯಾವುದೇ ಬೆದರಿಕೆಗೆ ಸಮರ್ಪಕವಾಗಿ ಪ್ರತಿಕ್ರಿಯಿಸುವುದಾಗಿ ಹೇಳಿದ್ದಾರೆ. ಇಸ್ಲಾಮಾಬಾದ್ ಮಾತುಕತೆಗೆ ಮುನ್ನವೇ ಟ್ರಂಪ್ ಅವರು, ಇರಾನ್ ಪರಮಾಣು ಒಪ್ಪಂದಕ್ಕೆ ಬರದಿದ್ದರೆ ಮಿಲಿಟರಿ ಕಾರ್ಯಾಚರಣೆ ಅನಿವಾರ್ಯ ಎಂದು ಎಚ್ಚರಿಕೆ ನೀಡಿದ್ದರು. ಈಗ ಮಾತುಕತೆ ವಿಫಲಗೊಂಡ ಹಿನ್ನೆಲೆ ತಮ ನಿಲುವನ್ನು ಮತ್ತೊಮೆ ಸ್ಪಷ್ಟಪಡಿಸಿದ್ದಾರೆ. ನಾನು ಮೊದಲೇ ಹೇಳಿದ್ದೆ, ಸಂಧಾನ ವಿಫಲವಾದರೆ ಯುದ್ಧ. ಅದೇ ಈಗ ನಡೆಯಲಿದೆ ಎಂದು ಎಚ್ಚರಿಸಿದ್ದಾರೆ.

**ಸಂಪೂರ್ಣವಾಗಿ ನಾಶಪಡಿಸುತ್ತೇವೆ**

ವಾಷಿಂಗ್ಟನ್‌ನಲ್ಲಿರುವ ಚೀನಾ ರಾಯಭಾರ ಕಚೇರಿ ಈ ಆರೋಪಗಳನ್ನು ಬಲವಾಗಿ ತಿರಸ್ಕರಿಸಿದೆ. ಚೀನಾ ಯಾವುದೇ ದೇಶಕ್ಕೂ ಶಸ್ತ್ರಾಸ್ತ್ರಗಳನ್ನು ಒದಗಿಸುತ್ತಿಲ್ಲ. ಸಂಘರ್ಷವನ್ನು ಶಮನಗೊಳಿಸಲು ನಿರಂತರವಾಗಿ ಪ್ರಯತ್ನಿಸುತ್ತಿದೆ ಎಂದು ಚೀನಾ ಹೇಳಿದೆ. ಅಮೆರಿಕ ಆಧಾರರಹಿತ ಆರೋಪಗಳನ್ನು ಮಾಡುತ್ತಿದೆ ಎಂದು ಚೀನಾ ಆರೋಪಿಸಿದೆ. ಚೀನಾ ಇರಾನ್‌ನೊಂದಿಗೆ ತನ್ನ ಆರ್ಥಿಕ ಮತ್ತು ಇಂಧನ ಸಂಬಂಧಗಳನ್ನು ಕಾಪಾಡಿಕೊಳ್ಳಲು ಬಯಸುತ್ತದೆ. ಆದರೆ ಸಂಘರ್ಷದಲ್ಲಿ ಬಹಿರಂಗವಾಗಿ ಭಾಗಿಯಾಗಲು ಬಯಸುವುದಿಲ್ಲ ಎಂದು ತಜ್ಞರು ಹೇಳಿದ್ದಾರೆ. ಅಮೆರಿಕ-ಇರಾನ್ ನಡುವಿನ ಉದ್ವಿಗ್ನತೆ ಈಗಾಗಲೇ ಹೆಚ್ಚಿದೆ. ಇದರ ನಡುವೆ ಚೀನಾ ಪ್ರವೇಶಿಸುತ್ತಿರುವುದು ಪರಿಸ್ಥಿತಿಯನ್ನು ಇನ್ನಷ್ಟು ಸಂಕೀರ್ಣಗೊಳಿಸುತ್ತಿದೆ. ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ಹೊಸ ಸಂಘರ್ಷ ಉಂಟಾಗುವ ಅಪಾಯ ಹೆಚ್ಚಿದೆ. ಯಾರು ಎಷ್ಟೇ ಬಲಪ್ರಯೋಗ ಮಾಡಿದರೂ ಇರಾನ್ ವಿರುದ್ಧದ ಯುದ್ಧದಲ್ಲಿ ಅಮೆರಿಕವೇ ಗೆಲ್ಲಲಿದೆ. ಇರಾನ್ ರಾಜಿ ಮಾಡಿಕೊಳ್ಳಲು ಮಾತ್ರ ಅಸ್ತಿತ್ವದಲ್ಲಿದೆ. ಅದು ಒಪ್ಪದಿದ್ದರೆ ನಾವು ಅದನ್ನು ಸಂಪೂರ್ಣವಾಗಿ ನಾಶಪಡಿಸುತ್ತೇವೆ ಎಂದು ಟ್ರಂಪ್ ಎಚ್ಚರಿಸಿದ್ದಾರೆ.

ತಮ ಹೇಳಿಕೆಯಲ್ಲಿ ಪ್ರಮುಖವಾಗಿ ಹಾರ್ಮುಜ್ ಜಲಸಂಧಿ ಪ್ರಸ್ತಾಪಿಸಿರುವ ಟ್ರಂಪ್, ಹಾರ್ಮುಜ್ ಜಲಸಂಧಿಯನ್ನು ನಾವೇ ಮುಕ್ತ ಮಾಡುತ್ತೇವೆ ಎಂದು ಹೇಳಿದ್ದಾರೆ. ಜಾಗತಿಕ ತೈಲ ಸಾಗಣೆ ನಡೆಯುವ ಈ ಜಲಮಾರ್ಗದ ಮೇಲೆ ಇರಾನ್ ಪ್ರಭಾವ ಹೊಂದಿದೆ.

**ಚೀನಾದ ಬೆಂಬಲದಿಂದಾಗಿ ಜಾಗತಿಕ ಶಾಂತಿಗೆ ಭಂಗ**

ಅಮೆರಿಕದ ಯುದ್ಧ ವಿಮಾನಗಳು ಎಲ್ಲಿದ್ದವು ಎಂಬ ನಿಖರ ಮಾಹಿತಿಯನ್ನು ಚೀನಾ ಇರಾನ್‌ಗೆ ಒದಗಿಸುತ್ತಿದೆ. ಇದರಿಂದಾಗಿ ಇರಾನ್ ಅಮೆರಿಕದ ವಿಮಾನಗಳ ಮೇಲೆ ಗುರಿ ಇಡಲು ಸಾಧ್ಯವಾಗುತ್ತಿದೆ. ಮುಂದಿನ ವಾರ ಚೀನಾ ಇರಾನ್‌ಗೆ ಅತ್ಯಾಧುನಿಕ ವಾಯು ರಕ್ಷಣಾ ವ್ಯವಸ್ಥೆಗಳನ್ನು ನೀಡಲಿದೆ. ಚೀನಾದ ತಂತ್ರಜ್ಞಾನದಿಂದ ಇರಾನ್ ಈಗ ಈ ಸಾಹಸ ಮಾಡುತ್ತಿದೆ. ಮಾರ್ಚ್ 2026 ರಲ್ಲಿ ಚೀನಾ ಎರಡು ಹಡಗುಗಳ ಮೂಲಕ ರಾಕೆಟ್ ಇಂಧನಕ್ಕೆ ಬಳಸುವ ಸೋಡಿಯಂ ಪರ್ಕ್ಲೋರೇಟ್ ಅನ್ನು ಇರಾನ್‌ಗೆ ರವಾನಿಸಿರುವುದು ಪತ್ತೆಯಾಗಿದೆ. ಇರಾನ್ ತನ್ನ ಪರಮಾಣು ಹಠ ಮತ್ತು ಚೀನಾದ ಬೆಂಬಲದಿಂದಾಗಿ ಜಾಗತಿಕ ಶಾಂತಿಗೆ ಭಂಗ ತರುತ್ತಿದೆ ಎಂದು ಅಮೆರಿಕ ಆರೋಪಿಸಿದೆ.

ಇತ್ತೀಚೆಗೆ ಇರಾನ್ ಹಾರ್ಮುಜ್ ಜಲಸಂಧಿಯಲ್ಲಿ ಹಲವಾರು ತೈಲ ಟ್ಯಾಂಕರ್‌ಗಳನ್ನು ತಡೆದಿದೆ ಎಂಬ ಆರೋಪವಿದೆ. ಈಗ ಅಮೆರಿಕ ತನ್ನ ಸೈನ್ಯದ ಮೂಲಕ ಜಲಸಂಧಿಯನ್ನು ಮುಕ್ತಗೊಳಿಸುವುದಾಗಿ ಹೇಳಿರುವುದು ಯುದ್ಧದ ಮುನ್ಸೂಚನೆಯಾಗಿದೆ.

# ಅಬ್ದುಲ್ ಜಬ್ಬಾರ್ ಆಯ್ತು ಕಾಂಗ್ರೆಸ್‌ನಲ್ಲಿ ಶೀಘ್ರ ಮತ್ತೊಂದು ತಲೆದಂಡ!

## ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ರಾಜೀನಾಮೆ ಬಗ್ಗೆ ಸ್ವತಃ ಸಿಎಂ ಸಿದ್ದರಾಮಯ್ಯ ಸುಳಿವು

• ಉದಯವಾಹಿನಿ, ಬೆಂಗಳೂರು

ಕೆಪಿಸಿಸಿ ಅಲ್ಪಸಂಖ್ಯಾತ ಘಟಕಕ್ಕೆ ಎಂಎಲ್‌ಸಿ ಅಬ್ದುಲ್ ಜಬ್ಬಾರ್ ರಾಜೀನಾಮೆ ನೀಡಿದ ಬೆನ್ನಲ್ಲೆ ಮತ್ತಷ್ಟು ತಲೆದಂಡವಾಗಲಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಸದ್ಯ ತಮ್ಮ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ರಾಜೀನಾಮೆ ಬಗ್ಗೆ ಸ್ವತಃ ಸಿಎಂ ಸಿದ್ದರಾಮಯ್ಯ ಸುಳಿವು ಕೊಟ್ಟಿದ್ದಾರೆ.

ಕಾಂಗ್ರೆಸ್‌ನಲ್ಲಿ ಬಂಡಾಯ ಜೋರಾಗಿದ್ದು, ದಾವಣಗೆರೆ ದಕ್ಷಿಣ ಉಪ ಚುನಾವಣೆ ಬೆಂಬಲ ನೀಡಿದ ಅಲ್ಪಸಂಖ್ಯಾತ ಮುಖಂಡರ ವಿರುದ್ಧ ಹೈಕಮಾಂಡ್ ಕ್ರಮಕ್ಕೆ ಮುಂದಾಗಿದೆ. ಸದ್ಯ ಕೆಪಿಸಿಸಿ ಅಲ್ಪಸಂಖ್ಯಾತ ಘಟಕಕ್ಕೆ ಎಂಎಲ್‌ಸಿ ಅಬ್ದುಲ್ ಜಬ್ಬಾರ್ ರಾಜೀನಾಮೆ ನೀಡಿ ಅದನ್ನು ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅಂಗೀಕಾರ ಮಾಡಿ ಆ ಘಟಕವನ್ನೇ ವಿಸರ್ಜನೆ ಮಾಡಿದರು. ಇನ್ನು ನಸೀರ್ ಅಹ್ಮದ್ ಶೀಘ್ರದಲ್ಲಿಯೇ ರಾಜೀನಾಮೆ ನೀಡುವ ಸಾಧ್ಯತೆಗಳಿವೆ ಎಂಬ ಮಾತು ಕೇಳಿಬಂದಿದ್ದವು. ಸದ್ಯ ಸಿಎಂ ಮಾತನಾಡಿದ್ದಾರೆ.



**ನಸೀರ್ ಬಗ್ಗೆ ಸಿಎಂ ಸಿದ್ದರಾಮಯ್ಯ ಏನಂದ್ರು:** ಚಿಕ್ಕಮಗಳೂರಿನ ಎನ್‌ಆರ್ ಪುರ ಪ್ರವಾಸಿ ಮಂದಿರದಲ್ಲಿ ಭಾನುವಾರ ಮಾಧ್ಯಮದವರೊಂದಿಗೆ ಸಿಎಂ ಸಿದ್ದರಾಮಯ್ಯ ಮಾತನಾಡಿದರು. ಕಾಂಗ್ರೆಸ್ ನಲ್ಲಿ ಪಕ್ಷ ವಿರೋಧಿಗಳ ರಾಜೀನಾಮೆ ಪರ್ವ ಆರಂಭವಾಗಿದೆಯೇ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ಅವರು ಇದುವರೆಗೆ ರಾಜೀನಾಮೆ ನೀಡಿಲ್ಲ. ನೀಡಬಹುದೇನೋ ಎಂದರು.

**ಉಪ ಚುನಾವಣೆ ಕಾಂಗ್ರೆಸ್ ಗೆಲುವು ಸಾಧಿಸುವುದು ಖಂಡಿತ**

ಉಪ ಚುನಾವಣೆ ಫಲಿತಾಂಶದ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿಎಂ, ಕಾಂಗ್ರೆಸ್ ಪಕ್ಷ ಸೋಲನ್ನು ಒಪ್ಪಿಕೊಂಡಿಲ್ಲ. ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸುವುದು ಖಂಡಿತ. ತಲೆದಂಡಕ್ಕೆ ಚುನಾವಣೆಯ ಸೋಲು ಗೆಲುವು ಕಾರಣವಲ್ಲ. ಸಲೀಂ ಅಹ್ಮದ್ ಅವರು ಪಕ್ಷದ ಮುಖಂಡರು. ಅವರು, ದಾವಣಗೆರೆ ದಕ್ಷಿಣ ಉಪ ಚುನಾವಣೆಯಲ್ಲಿ ಕೆಲವರ ಪಕ್ಷ ವಿರೋಧಿ ಕಾರ್ಯಗಳ ಬಗ್ಗೆ ಹೇಳಿಕೆ ನೀಡಿ ಅಸಮಾಧಾನ ವ್ಯಕ್ತಪಡಿಸಿದ್ದಾರೆಯೇ ಹೊರತು, ಉಪಚುನಾವಣೆಯಲ್ಲಿ ಕಾಂಗ್ರೆಸ್ ಪರಾಜಿತವಾಗಲಿದೆ ಎಂದು ಅವರು ಹೇಳಿರುವುದಿಲ್ಲ. ಪಕ್ಷ ವಿರೋಧಿ ಚಟುವಟಿಕೆಗಳ ನಡುವೆಯೂ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಲಿದೆ ಎಂದರು.

**ಸಚಿವ ಸ್ಥಾನ ಆಕಾಂಕ್ಷಿಗಳು ದೆಹಲಿಗೆ ಭೇಟಿ ನೀಡುವುದು ತಪ್ಪಲ್ಲ**


ಸಚಿವ ಆಕಾಂಕ್ಷಿ ಶಾಸಕರು ನವದೆಹಲಿಗೆ ಭೇಟಿ ನೀಡುತ್ತಿರುವ ಬಗ್ಗೆ ಪ್ರತಿಕ್ರಿಯಿಸಿ, ಸಚಿವ ಆಕಾಂಕ್ಷಿ ಶಾಸಕರು ನವದೆಹಲಿಗೆ ಭೇಟಿ ನೀಡುವುದರಲ್ಲಿ ಯಾವುದೇ ತಪ್ಪಿಲ್ಲ. ಪುನರ್‌ರಚನೆ ಕಾರ್ಯ ಬಾಕಿಯಿದೆ. ಐದು ರಾಜ್ಯಗಳ ಚುನಾವಣೆ, ಬಜೆಟ್ ಅಧಿವೇಶನ ಸಂಪುಟ ಪುನರ್‌ರಚನೆ ವಿಳಂಬಕ್ಕೆ ಕಾರಣವಿರಬಹುದು ಎಂದರು.

# ಸಚಿವ ಸಂಪುಟ ಪುನಾರಚನೆ: ನನಗೂ ಸಚಿವ ಸ್ಥಾನ ಕೊಡಿ, ಆಕಾಂಕ್ಷಿಗಳ ಪಟ್ಟು

## ■ ದೆಹಲಿಗೆ ತೆರಳಿದ 25 ಕ್ಕೂ ಅಧಿಕ ಕಾಂಗ್ರೆಸ್ ಶಾಸಕರು ■ ಶಾಸಕರಿಂದ ಸಚಿವ ಸ್ಥಾನಕ್ಕಾಗಿ ಲಾಬಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಉಪ ಚುನಾವಣೆ ಮುಕ್ತಾಯ ಬೆನ್ನಲ್ಲೆ ಸಂಪುಟ ಪುನಾರಚನೆಯ ಚರ್ಚೆಗಳು ಗರಿಗೆದರಿವೆ. ಸದ್ಯ ಸಚಿವ ಸ್ಥಾನದ ಆಕಾಂಕ್ಷಿಯಾಗಿರುವ ಕಾಂಗ್ರೆಸ್‌ನ ಸುಮಾರು 25 ರಿಂದ 30 ಹಿರಿಯ ಶಾಸಕರ ದಂಡು ಭಾನುವಾರ ಮಧ್ಯಾಹ್ನ ದೆಹಲಿಗೆ ಪ್ರಯಾಣ ಬೆಳೆಸಿದೆ.





ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಹೈಕಮಾಂಡ್ ಭೇಟಿಗೆ ತೆರಳುವ ಮುನ್ನವೇ ಈ ಶಾಸಕರ ಗುಂಪು ದೆಹಲಿಗೆ ತೆರಳಿರುವುದು ರಾಜ್ಯ ರಾಜಕೀಯದಲ್ಲಿ ತೀವ್ರ ಕುತೂಹಲ ಕೆರಳಿಸಿದೆ.

ಕನಿಷ್ಠ ಮೂರಕ್ಕಿಂತ ಹೆಚ್ಚು ಬಾರಿ ಗೆದ್ದಿರುವ ಹಾಗೂ ಸಚಿವ ಸ್ಥಾನದ ನಿರೀಕ್ಷೆಯಲ್ಲಿರುವ ಈ ಹಿರಿಯ ಶಾಸಕರು, ಮೂರ್ನಾಲ್ಕು ದಿನಗಳ ಕಾಲ ದೆಹಲಿಯಲ್ಲಿಯೇ ಮೊಕ್ಕಾಂ ಹೂಡಲಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿ ತಮ್ಮ ಬೇಡಿಕೆ ಮಂಡಿಸಲಿರುವ ಶಾಸಕರು, ರಾಹುಲ್ ಗಾಂಧಿ ಅವರ ಭೇಟಿಗೂ ಸಮಯಾವಕಾಶ ಕೇಳಿದ್ದಾರೆ.

ಮಂಗಳವಾರ (ಏಪ್ರಿಲ್ 14 ರಂದು) ತಮ್ಮ-ತಮ್ಮ ಕ್ಷೇತ್ರಗಳಲ್ಲಿ ನಡೆಯುವ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣೆಯಲ್ಲಿ ಭಾಗವಹಿಸಬೇಕಿರುವ ಹಿನ್ನೆಲೆಯಲ್ಲಿ, ಸೋಮವಾರ ಸಂಜೆಯೇ ಈ ತಂಡ ರಾಜ್ಯಕ್ಕೆ ಮರಳುವ ಲೆಕ್ಕಾಚಾರದಲ್ಲಿದೆ. ಸೋಮವಾರ ಬೆಳಗಿನ ಜಾವವೂ ಮತ್ತಷ್ಟು ಶಾಸಕರು ದೆಹಲಿಗೆ ತೆರಳಿ ಈ ಗುಂಪನ್ನು ಸೇರಿಕೊಳ್ಳುವ ನಿರೀಕ್ಷೆಯಿದೆ.



**ಟಿಬಿ ಜಯಚಂದ್ರ, ಹೇಳಿದ್ದೇನು:** ದೆಹಲಿಗೆ ತೆರಳುವ ಮುನ್ನ ಮಾತನಾಡಿದ ಹಿರಿಯ ಶಾಸಕ ಟಿಬಿ ಜಯಚಂದ್ರ, ಸಂಪುಟ ಪುನಾರಚನೆ ಮಾಡುವಂತೆ ಹೈಕಮಾಂಡ್‌ಗೆ ಪ್ರಸ್ತಾವನೆ ಸಲ್ಲಿಸಲಾಗುವುದು. 2028ರ ವಿಧಾನಸಭಾ ಚುನಾವಣೆಗೆ ಇನ್ನು ಎರಡು ವರ್ಷಗಳಿದ್ದು, ಆ ಹೊತ್ತಿಗೆ ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯ ಮೂಡದಂತೆ ತಡೆಯಲು ಇತರರಿಗೂ ಸಚಿವ ಸಂಪುಟದಲ್ಲಿ ಅವಕಾಶ ನೀಡಬೇಕು ಎಂಬುದು ನಮ್ಮ ಪ್ರಮುಖ ಬೇಡಿಕೆಯಾಗಿದೆ. ಈ ವಿಚಾರವನ್ನು ಮಲ್ಲಿಕಾರ್ಜುನ ಖರ್ಗೆ ಅವರ ಗಮನಕ್ಕೆ ತರಲಿದ್ದೇವೆ ಎಂದು ಸ್ಪಷ್ಟಪಡಿಸಿದರು.



ರಾಜ್ಯದಲ್ಲಿ ಚನ್ನಪಟ್ಟಣ, ಸಂಡೂರು ಮತ್ತು ಶಿಗ್ಗಾವಿ ಉಪಚುನಾವಣೆಯ ಅಬ್ಬರ ಮುಗಿದಿದೆ.

ಆದರೆ, ರಾಷ್ಟ್ರಮಟ್ಟದಲ್ಲಿ ಮಹಾರಾಷ್ಟ್ರ ಮತ್ತು ಜಾರ್ಖಂಡ್‌ನಂತಹ ಬೃಹತ್ ರಾಜ್ಯಗಳ ವಿಧಾನಸಭಾ ಚುನಾವಣೆ ನಡೆಯುತ್ತಿದೆ. ಇಂತಹ ಬಿಕ್ಕಟ್ಟಿನ ಸಮಯದಲ್ಲಿ ರಾಜ್ಯದ ಹಿರಿಯ ಶಾಸಕರ ಸಂಪುಟ ಪುನಾರಚನೆಯ ಬೇಡಿಕೆಗೆ ಹೈಕಮಾಂಡ್ ಒಲವು ತೋರುತ್ತದೆಯೇ ಅಥವಾ ಚುನಾವಣೆ ಮುಗಿಯುವವರೆಗೆ ಕಾಯುವಂತೆ ಸೂಚಿಸುತ್ತದೆಯೇ ಎಂಬುದು ಈಗಿನ ದೊಡ್ಡ ಪ್ರಶ್ನೆಯಾಗಿದೆ.

**ಡಿಕೆಶಿ ಬೆಂಬಲಿಗರ ಗೈರು, ಕುತೂಹಲ ಮೂಡಿಸಿದ ನಡೆ**

ಸಚಿವ ಸ್ಥಾನದ ಆಕಾಂಕ್ಷಿಗಳಾಗಿ ದೆಹಲಿಗೆ ತೆರಳಲು ಒಟ್ಟು 40 ಶಾಸಕರ ಪಟ್ಟಿ ಸಿದ್ಧವಾಗಿತ್ತು. ಆದರೆ, ಅಂತಿಮ ಕ್ಷಣದಲ್ಲಿ ಉಪಮುಖ್ಯಮಂತ್ರಿ, ಡಿಕೆ ಶಿವಕುಮಾರ್ ಬಣದ ಸುಮಾರು 15 ರಿಂದ 18 ಶಾಸಕರು ದೆಹಲಿ ವಿಮಾನ ಹತ್ತುವುದರಿಂದ ಹಿಂದೇಟು ಹಾಕಿದ್ದಾರೆ. ಸದ್ಯದ ಪರಿಸ್ಥಿತಿಯನ್ನು 'ಕಾದು ನೋಡುವ' ತಂತ್ರಕ್ಕೆ ಈ ಶಾಸಕರು ಶರಣಾಗಿದ್ದು, ಬಹುತೇಕ ಬೆಂಬಲಿಗರು ದೆಹಲಿಗೆ ತೆರಳದೆ ಇರುವುದು ಅಚ್ಚರಿಗೆ ಕಾರಣವಾಗಿದೆ.

**ದೆಹಲಿಗೆ ತೆರಳಿದ ಪ್ರಮುಖ ಶಾಸಕರು ಯಾರು**

● ಟಿ.ಬಿ. ಜಯಚಂದ್ರ ಶಿರಾ ● ಅಶೋಕ್ ಪಟ್ಟಣ್ ರಾಮದುರ್ಗ ● ಎಸ್.ಎನ್. ಸುಬ್ಬಾರೆಡ್ಡಿ ಬಾಗೇಪಲ್ಲಿ ● ಸಿ. ಪುಟ್ಟರಂಗಶೆಟ್ಟಿ ಚಾಮರಾಜನಗರ ● ಹಂಪನಗೌಡ ಬಾದರ್ಲಿ ಸಿಂಧನೂರು ● ಡಿ.ಜಿ. ಶಾಂತನಗೌಡ ಹೊನ್ನಾಳಿ ● ಬಸವರಾಜ್ ಶಿವಣ್ಣನವರ್ ಬ್ಯಾಡಗಿ ● ಎ.ಆರ್. ಕೃಷ್ಣಮೂರ್ತಿ ಕೊಳ್ಳೇಗಾಲ ● ಪ್ರಸಾದ್ ಅಬ್ಬಯ್ಯ ಹುಬ್ಬಳ್ಳಿ ಧಾರವಾಡ ಪೂರ್ವ ● ಯು.ಬಿ. ಬಣಕರ್ ಹಿರೇಕೆರೂರು ● ಜಿ.ಎಸ್. ಪಾಟೀಲ್ ರೋಣ ● ಯಶವಂತರಾಯಗೌಡ ಪಾಟೀಲ್ ಇಂಡಿ ● ಕೆ. ಷಡಕ್ಷರಿ ತಿಪಟೂರು ● ಎಸ್.ಎನ್. ನಾರಾಯಣಸ್ವಾಮಿ ಬಂಗಾರಪೇಟೆ ● ಲಕ್ಷ್ಮಣ ಸವದಿ ಅಥಣಿ ● ಅಪ್ಪಾಜಿ ನಾಡಗೌಡ ಮುದ್ದೇಬಿಹಾಳ ● ಪ್ರಿಯಕೃಷ್ಣ ಗೋವಿಂದರಾಜನಗರ ● ರಮೇಶ್ ಬಂಡಿಸಿದ್ದೇಗೌಡ ಶ್ರೀರಂಗಪಟ್ಟಣ ● ಬಿ. ಶಿವಣ್ಣ ಆನೇಕಲ್ ● ರಾಘವೇಂದ್ರ ಹಿಟ್ನಾಳ್ ಕೊಪ್ಪಳ ● ಗೋಪಾಲಕೃಷ್ಣ ಸಾಗರ

**ಈ ದಿನದ ದರ** ಪೆಟ್ರೋಲ್: 103.33 ₹/L ಡೀಸೆಲ್ : 91.55 ₹/L ಬಂಗಾರ: ₹15,284/Gram24ct ₹14,010/Gram22ct ಬೆಳ್ಳಿ: ₹260.00/Gram

## ಸಮಗ್ರ ಮಹಾಭಾರತ ಪ್ರವಚನ

• ಉದಯವಾಹಿನಿ, ಬೆಂಗಳೂರು



ಪೂರ್ಣಪ್ರಜ್ಞ ಪ್ರತಿಷ್ಠಾನದ ವತಿಯಿಂದ ಏಪ್ರಿಲ್ 13 ರಿಂದ 19ರ ವರೆಗೆ ಪ್ರತಿದಿನ ಸಂಜೆ 6-30ಕ್ಕೆ ಡಾ. ವ್ಯಾಸನಕೆರೆ ಪ್ರಭಂಜನಾಚಾರ್ಯರಿಂದ ಸಮಗ್ರ ಮಹಾಭಾರತ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ಪೂರ್ಣಪ್ರಜ್ಞ ವಿದ್ಯಾಪೀಠ, ಕತ್ರಿಗುಪ್ಪೆ ಮುಖ್ಯರಸ್ತೆ, ಬೆಂಗಳೂರು-560028.

## ಶ್ರೀಮದ್ರಾಮಾಯಣ ಪ್ರವಚನ

• ಉದಯವಾಹಿನಿ, ಬೆಂಗಳೂರು



ವಯ್ಯಾಲಿಕಾವಲ್ ಎಕ್ಸಟೆನ್ಶನ್ಅಸೋಸಿಯೇಷನ್ ವತಿಯಿಂದ ಏಪ್ರಿಲ್ 13 ಮತ್ತು 14 ರಂದು ಸಂಜೆ 6-30ಕ್ಕೆ ಶ್ರೀ ಕಲ್ಲಾಪುರ ಪವಮಾನಾಚಾರ್ಯರಿಂದ ಶ್ರೀಮದ್ರಾಮಾಯಣ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ: ಶ್ರೀ ರಾಮ ಮಂದಿರ, 9ನೇ ಮುಖ್ಯರಸ್ತೆ, 14ನೇ ಅಡ್ಡರಸ್ತೆ, ವಯ್ಯಾಲಿಕಾವಲ್, ಬೆಂಗಳೂರು ಸರ್ವರಿಗೂ ಆತ್ಮೀಯ ಸುಸ್ವಾಗತ.

## ಹುಡುಗಿಗೆ ಕೊನೆಯ ವಿಡಿಯೋ ಕಾಲ್ ಮಾಡಿ ಪ್ರಿಯಕರ ಆತ್ಮಹತ್ಯೆ

• ಉದಯವಾಹಿನಿ, ಬೆಂಗಳೂರು

ಪ್ರೀತಿಸುತ್ತಿದ್ದ ಹುಡುಗಿ ನನ್ನಿಂದ ದೂರವಾಗುತ್ತಿದ್ದಾಳೆ ಎಂದು ಯುವಕನೊಬ್ಬ ಆಕೆಗೆ ವಿಡಿಯೋ ಕಾಲ್ ಮಾಡಿ ನಂತರ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಯಲಹಂಕ ನ್ಯೂ ಟೌನ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಬಿಕಾಂ ಪದವೀದರ ಅಭಿಷೇಕ್(23) ಆತಹತ್ಯೆ ಮಾಡಿಕೊಂಡ ಯುವಕ. ಯಲಹಂಕ ನ್ಯೂ ಟೌನ್‌ನ ಅಟ್ಟೂರು ಲೇಔಟ್‌ನಲ್ಲಿ ವಾಸವಾಗಿದ್ದ ಈತ ಖಾಸಗಿ ಕಂಪನಿಯಲ್ಲಿ ಡೆಲಿವರಿ ಬಾಯ್ ಆಗಿ ಕೆಲಸ ಮಾಡುತ್ತಿದ್ದ. ಅಭಿಷೇಕ್‌ಯುವತಿಯೊಬ್ಬಳನ್ನು ಪ್ರೀತಿಸುತ್ತಿದ್ದ. ಆದರೆ ಆಕೆಯ ಮನೆಯವರು ಇದಕ್ಕೆ ವಿರೋಧ ವ್ಯಕ್ತಪಡಿಸಿ ಪೊಲೀಸರಿಗೆ ದೂರು ನೀಡಿದ್ದರು. ನಂತರ ಪೊಲೀಸರು ಆತನನ್ನು ಠಾಣೆಗೆ ಕರೆಸಿ ಬುದ್ಧಿ ಮಾತು ಹೇಳಿ ಆಕೆಯ ತಂಟೆಗೆ ಹೋಗದಂತೆ ಎಚ್ಚರಿಕೆ ಸಹ ನೀಡಿದ್ದರು. ನಂತರ ಯುವತಿ ಅಭಿಷೇಕ್‌ನಿಂದ ದೂರಾಗಿ ಮಾತುಕತೆ ನಿಲ್ಲಿಸಿದ್ದಳು. ಇದರಿಂದ ನೊಂದ ಅಭಿಷೇಕ್ ಯುವತಿಗೆ ವಿಡಿಯೋ ಕಾಲ್ ಮಾಡಿ ತಾನು ಸಾಯುತ್ತಿರುವುದಾಗಿ ತಿಳಿಸಿದ್ದ. ನಂತರ ಮೆಸೇಜ್ ಸಹ ಮಾಡಿ, ಡೆತ್‌ನೋಟ್ ಬರೆದಿಟ್ಟು ಮನೆಯ ಕಿಟಕಿಯ ಗ್ರಿಲ್‌ಗೆ ವೈರ್‌ನಿಂದ ನೇಣು ಹಾಕಿಕೊಂಡು ಆತಹತ್ಯೆ ಮಾಡಿಕೊಂಡಿದ್ದಾನೆ. ಮನೆಯವರಿಗೆ ಗೊತ್ತಿಲ್ಲದೆ ಮದುವೆಯಾಗಿದ್ದಾಗಿ ಅಭಿಷೇಕ್ ಡೆತ್‌ನೋಟ್‌ನಲ್ಲಿ ಬರೆದಿದ್ದಾನೆ ಎಂದು ತಿಳಿದುಬಂದಿದೆ. ಈ ಬಗ್ಗೆ ಯಲಹಂಕ ನ್ಯೂ ಟೌನ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಸಿಇಟಿ-2026 : ಪ್ರವೇಶ ಪತ್ರ ಬಿಡುಗಡೆ

• ಉದಯವಾಹಿನಿ, ಬೆಂಗಳೂರು

ಇಂಜಿನಿಯರಿಂಗ್ ಸೇರಿದಂತೆ ಇತರ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಸಂಬಂಸಿದಂತೆ ಏ.23 ಮತ್ತು 24 ರಂದು ನಡೆಯುವ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ), ಏ.22ರಂದು ನಡೆಯುವ ಕನ್ನಡ ಭಾಷಾ ಪರೀಕ್ಷೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರವೇಶ ಪತ್ರ ಬಿಡುಗಡೆ ಮಾಡಿದೆ. ಅರ್ಜಿ ಸಲ್ಲಿಸಿ, ಶುಲ್ಕ ಪಾವತಿಸಿರುವ ಅರ್ಹ ಅಭ್ಯರ್ಥಿಗಳು ಕೆಇಎ ವೆಬ್‌ಸೈಟ್‌ಗೆ ಭೇಟಿ ನೀಡಿ, ನಿಗದಿತ ಲಿಂಕ್ ಮೂಲಕ ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಳ್ಳಬಹುದು ಎಂದು ಪ್ರಾಧಿಕಾರದ ಪ್ರಕಟಣೆ ತಿಳಿಸಿದೆ. ಪ್ರವೇಶ ಪತ್ರದ ಜತೆಗೆ ಅಭ್ಯರ್ಥಿಗಳಿಗೆ ನೀಡಲಾಗುವ ಸೂಚನೆಗಳನ್ನು ಡೌನ್ ಲೋಡ್ ಮಾಡಿಕೊಳ್ಳಲು, ಮಾರ್ಗದರ್ಶನಗಳನ್ನು/ಕಾರ್ಯವಿಧಾನಗಳನ್ನು ತಪ್ಪದೇ ಅನುಸರಿಸಲು ಸೂಚಿಸಲಾಗಿದೆ. ಹೊರನಾಡು, ಗಡಿನಾಡು ಅಭ್ಯರ್ಥಿಗಳಿಗೆ ಕನ್ನಡ ಭಾಷೆ ಪರೀಕ್ಷೆಯನ್ನು ಬೆಂಗಳೂರು, ಬೆಳಗಾವಿ, ಮಂಗಳೂರು ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುತ್ತದೆ ಎಂದು ಹೇಳಿದೆ.

## ಮಾನವೀಯತೆ ಮೆರೆದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ

• ಉದಯವಾಹಿನಿ, ಬೆಂಗಳೂರು

ಖಾಸಗಿ ಕಾರ್ಯಕ್ರಮದ ನಿಮಿತ್ತ ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿಯವರು ಹಾಸನಕ್ಕೆ ತೆರಳುವಾಗ ಬೆಂಗಳೂರು-ಹಾಸನ ಹೆದ್ದಾರಿಯಲ್ಲಿ ಆಟೋ ಮತ್ತು ಕಾರು ನಡುವೆ ಸಂಭವಿಸಿದ್ದ ರಸ್ತೆ ಅಪಘಾತದಲ್ಲಿ ಗಾಯಗೊಂಡಿದ್ದ ವ್ಯಕ್ತಿಯೊಬ್ಬರನ್ನು ಸಚಿವರು ಆಸ್ಪತ್ರೆಗೆ ದಾಖಲಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಅಪಘಾತದಲ್ಲಿ ಗಾಯಗೊಂಡಿದ್ದ ವ್ಯಕ್ತಿಯನ್ನು ಅರ್ಧ ಗಂಟೆಯಿಂದ ಯಾರೂ ಗಮನಿಸದೆ ರಸ್ತೆಯಲ್ಲಿಯೇ ಇದ್ದಿದ್ದನ್ನು ನೋಡಿ ಪೊಲೀಸ್ ವಾಹನದಲ್ಲಿ ಆದಿಚುಂಚನಗಿರಿ ಆಸ್ಪತ್ರೆಗೆ ಕಳುಹಿಸಿ, ಸೂಕ್ತ ಚಿಕಿತ್ಸೆನೀಡುವಂತೆ ಅಲ್ಲಿನ ವೈದ್ಯರಿಗೆ ದೂರವಾಣಿ ಕರೆ ಮಾಡಿ ತಕ್ಷಣ ಸ್ಪಂದಿಸುವಂತೆ ಸಚಿವರು ತಿಳಿಸಿದ್ದಾರೆ. ಅಪಘಾತದಲ್ಲಿ ತೀವ್ರ ಗಾಯಗೊಂಡಿದ್ದ ವಿಕ್ರಂ ನರಳಾಡುತ್ತಿದ್ದರು, ಇದೇ ಮಾರ್ಗವಾಗಿ ತೆರಳುತ್ತಿದ್ದ ಕೇಂದ್ರ ಸಚಿವರು ತಮ್ಮ ಕಾರನ್ನು ನಿಲ್ಲಿಸಿ ಹೆದ್ದಾರಿ ಗಸ್ತು ಅವರಿಗೆ ದೂರವಾಣಿ ಕರೆಮಾಡಿ, ಅವರನ್ನು ಆದಿಚುಂಚನಗಿರಿ ಆಸ್ಪತ್ರೆಗೆ ಕಳುಹಿಸಿಕೊಟ್ಟರು. ಜೊತೆಗೆ ಖುದ್ದು ಸಚಿವರೇ ವೈದ್ಯರಿಗೆ ಕರೆಮಾಡಿ ಸ್ಪಂದಿಸುವಂತೆ ತಿಳಿಸಿದರು. ಸಚಿವರ ಮಾನವೀಯತೆ ಕಾರ್ಯಕ್ಕೆ ಗಾಯಾಳು ಕೃತಜ್ಞತೆ ಸಲ್ಲಿಸಿದ್ದಾರೆ.

## ಸೌಜನ್ಯ ಪ್ರಕರಣ ಮರು ತನಿಖೆ ಸಾರ್ವಜನಿಕವಾಗಿ ಬೆಂಬಲ ನೀಡುವಂತೆ ಆಗ್ರಹ

• ಉದಯವಾಹಿನಿ, ಬೆಂಗಳೂರು

ಸೌಜನ್ಯ ಪ್ರಕರಣದ ಬಗ್ಗೆ ನಿಷ್ಪಕ್ಷಪಾತ ಹಾಗೂ ನ್ಯಾಯಯುತವಾಗಿ ಮರು ತನಿಖೆ ನಡೆಸುವುದರ ಜೊತೆ ಸಾರ್ವಜನಿಕವಾಗಿ ಬೆಂಬಲ ನೀಡಬೇಕು ಎಂದು 'ಕೊಂದವರು ಯಾರು ಆಂದೋಲನ' ಆಗ್ರಹಿಸಿದೆ.



ನಡೆದ ಸುದ್ದಿಗೋಷ್ಠಿಯಲ್ಲಿ ಹಿರಿಯ ವಕೀಲ ಬಾಲನ್, ಆಂದೋಲನದ ಮುಖಂಡರಾದ ಗೌರಮ್ಮ, ಎ. ಜ್ಯೋತಿ, ಮಲ್ಲಿಗೆ ಸಿರಿಮನೆ, ಮಧು ಭೂಷಣ್, ಮಮತಾ ಯಜಮಾನ್ ಅವರು ಸೌಜನ್ಯ ಅವರ ತಾಯಿ ಕುಸುಮಾವತಿಯವರ ಹೋರಾಟಕ್ಕೆ ಬೆಂಬಲ ಸೂಚಿಸುವ ಪತ್ರವನ್ನು ಬಿಡುಗಡೆಗೊಳಿಸಿದರು.

ನಂತರ ಮಾತನಾಡಿದ ಬಾಲನ್, 'ಕುಸುಮಾವತಿ ಅವರು 14 ವರ್ಷಗಳ ಹೋರಾಟದ ಫಲವಾಗಿ ಸುಪ್ರೀಂ ಕೋರ್ಟ್‌ನಲ್ಲಿ ಸೌಜನ್ಯ ಪ್ರಕರಣದ ಅರ್ಜಿಯನ್ನು ವಿಚಾರಣೆ ನಡೆಸಲು ಅನುಮತಿ ನೀಡಿದ್ದು, ರಾಜ್ಯ ಸರ್ಕಾರ ಸಿಬಿಐಗೆ ನೋಟಿಸ್ ಜಾರಿ ಮಾಡಿದೆ' ಎಂದರು.

'ಧರ್ಮಸ್ಥಳ ಸುತ್ತಮುತ್ತಲು 74 ಮಹಿಳೆಯರ ಅತ್ಯಾಚಾರ, ಕೊಲೆ, ನಾಪತ್ತೆ ಅಸಹಜ ಸಾವುಗಳಿಗೆ ಸಂಬಂಧಿಸಿದ ಎಲ್ಲಾ ಮಾಹಿತಿಯನ್ನು ತ್ವರಿತವಾಗಿ ಹೈಕೋರ್ಟ್‌ಗೆ ಸಲ್ಲಿಸಬೇಕು. ಇದರ ಜೊತೆಗೆ ಸಾರ್ವಜನಿಕ ಪರಿಶೀಲನೆಗೂ ಅವಕಾಶ ನೀಡಬೇಕು' ಎಂದು ಆಗ್ರಹಿಸಿದರು.

**'ವ್ಯವಸ್ಥೆಯ ವೈಫಲ್ಯ'**: ಧರ್ಮಸ್ಥಳದಲ್ಲಿ ವ್ಯಾಪ್ತಿಯಲ್ಲಿ ನಡೆದ ದೌರ್ಜನ್ಯಗಳ ಪ್ರಕರಣಗಳ ವಿಚಾರದಲ್ಲಿ ವ್ಯವಸ್ಥೆಯ ವೈಫಲ್ಯವಿದೆ. ಸ್ಥಳೀಯ ಪೊಲೀಸ್, ಸಿಐಡಿ, ಸಿಬಿಐ ಎಲ್ಲರೂ ತನಿಖೆ ಮಾಡಿದ್ದಾರೆ. ಆದರೆ ಎಲ್ಲವೂ ವಿಫಲವಾಗಿವೆ' ಎಂದು ವಕೀಲ ಬಾಲನ್ ತಿಳಿಸಿದರು.

ಒಂದೆಡೆ ತಾಂಡವವಾಡುತ್ತಿರುವ ನಿರುದ್ಯೋಗ, ಇನ್ನೊಂದೆಡೆ ಸರಕಾರಿ ಹುದ್ದೆ ಆಕಾಂಕ್ಷಿಗಳು ಚಾತಕ ಪಕ್ಷಿಯಂತೆ ಕಾಯುತ್ತಿರುವ ನೇಮಕಾತಿ ಪ್ರಕ್ರಿಯೆ. ಹೌದು ಪರೀಕ್ಷೆಗಳನ್ನು ಪಾಸ್ ಆದರೂ ಸಂದರ್ಶನದ ಹಂತದಲ್ಲಿ ವಿದ್ಯಾರ್ಥಿಗಳ ಭವಿಷ್ಯವೂ ನಿಲುಗಡೆ ಆಗಿದೆ.

# ಕೆಎಎಸ್ ಸಂದರ್ಶನ ಕೆಪಿಎಸ್‌ಸಿಗೆ ಕಗ್ಗಂಟು

### ಗೊಂದಲಕ್ಕೀಡಾದ ಕೆಎಎಸ್ ಗೆಜೆಟೆಡ್ ಪ್ರೊಬೆಷನರ್ ಗ್ರೂಪ್ ಎ-ಬಿ ವೃಂದದ 384 ಹುದ್ದೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗ
Karnataka Public Service Commission



ಕೆಎಎಸ್ ಮುಖ್ಯ ಪರೀಕ್ಷೆಯ ಫಲಿತಾಂಶದ ನಂತರ ಅರ್ಹ ಅಭ್ಯರ್ಥಿಗಳ ಸಂದರ್ಶನಕ್ಕೆ ಕರ್ನಾಟಕ ಲೋಕಸೇವಾ ಆಯೋಗ ದೊಡ್ಡ 'ಕಗ್ಗಂಟು' ಎದುರಿಸುತ್ತಿದೆ. ಪ್ರಿಲಿಮಿನರಿ ಪರೀಕ್ಷೆಯ ಅನುವಾದದಲ್ಲಿ ಮಾಡಿದ್ದ ಎಡವಟ್ಟುಗಳಿಂದಾಗಿ ಸುಮಾರು 306 ಅಭ್ಯರ್ಥಿಗಳು ಕೊನೆ ಕ್ಷಣದಲ್ಲಿ ಹೈಕೋರ್ಟ್‌ನಿಂದ ಮಧ್ಯಂತರ ಆದೇಶ ಪಡೆದು ಮುಖ್ಯ ಪರೀಕ್ಷೆ ಬರೆದಿದ್ದರು. ಆ ಪೈಕಿ 6 ಮಂದಿ ಮುಖ್ಯ ಪರೀಕ್ಷೆಯಲ್ಲೂ ತೇರ್ಗಡೆಯಾಗಿ ಇದೀಗ ಸಂದರ್ಶನಕ್ಕೂ ಅರ್ಹರಾಗಿದ್ದಾರೆ. ಆದರೆ, ಇವರ್ಯಾರೂ ಪ್ರಾಥಮಿಕ ಪರೀಕ್ಷೆಯಲ್ಲಿ ಪಾಸಾಗಿಲ್ಲ. ಆದರೆ, ಆ ಆರು ಮಂದಿ ಪ್ರಿಲಿಮಿನರಿ ಪರೀಕ್ಷೆಯಲ್ಲಿ ಪಾಸಾಗಿದ್ದರೆಂದು ಪರಿಗಣಿಸುವಂತೆ ಹೈಕೋರ್ಟ್ ಆದೇಶ ನೀಡಿದೆ.

ಮರು ಪರೀಕ್ಷೆಗೆ ನಿರಾಕರಣೆ

ಇದು ಕರ್ನಾಟಕ ಲೋಕಸೇವಾ ಆಯೋಗವನ್ನು ಗೊಂದಲಕ್ಕೆ ದೂಡಿದೆ. ಕೆಪಿಎಸ್‌ಸಿ ಪರೀಕ್ಷಾ ನಿಯಮಗಳ ಪ್ರಕಾರ, ಮುಖ್ಯ ಪರೀಕ್ಷೆಗೆ ಅರ್ಹರಾಗಬೇಕಾದರೆ ಪ್ರಿಲಿಮಿನರಿ ಪರೀಕ್ಷೆ ಪಾಸಾಗಿರಲೇಬೇಕು. ಆದರೆ, ಪ್ರಿಲಿಮಿನರಿ ಪಾಸಾಗದ ಆರು ಮಂದಿ ಮುಖ್ಯ ಪರೀಕ್ಷೆ ಬರೆದು, ಉತ್ತಮ ಅಂಕ ಗಳಿಸಿ ಸಂದರ್ಶನಕ್ಕೆ ಅರ್ಹತೆ ಪಡೆದಿದ್ದಾರೆ. ಅವರಿಗೆ ಹೇಗೆ ಸಂದರ್ಶನ ನಡೆಸಬೇಕು ಎಂಬುದು ಆಯೋಗಕ್ಕೆ ಪ್ರಶ್ನೆಯಾಗಿ ಕಾಡುತ್ತಿದೆ ಹಾಗಾಗಿ, ಆಯೋಗ ಕಳೆದ ಮಾ.10ರಂದು ಕೆಎಎಸ್ ಗೆಜೆಟೆಡ್ ಪ್ರೊಬೆಷನರ್ ಗ್ರೂಪ್ 'ಎ', 'ಬಿ' ವೃಂದದ 384 ಹುದ್ದೆಗಳಿಗೆ ಮಾ.23ರಿಂದ ನಿಗದಿಪಡಿಸಿದ್ದ ವ್ಯಕ್ತಿತ್ವ ಪರೀಕ್ಷೆಯ ವೇಳಾಪಟ್ಟಿಯನ್ನು ಆಡಳಿತಾತ್ಮಕ ಕಾರಣ ನೀಡಿ ಮಾ.12ರಂದು ಹಿಂಪಡೆದಿದೆ.

**ನಿಜಕ್ಕೂ ಆಗಿದ್ದೇನು?**: 2023-24ನೇ ಸಾಲಿನಲ್ಲಿ 384 ಗ್ರೂಪ್ 'ಎ' ಮತ್ತು 'ಬಿ' ಹುದ್ದೆಗಳ ಕೆಎಎಸ್ ನೇಮಕಕ್ಕೆ ಕೆಪಿಎಸ್‌ಸಿ 2024ರ ಫೆ.26ರಂದು ಅಧಿಸೂಚನೆ ಹೊರಡಿಸಿತ್ತು. ಮೊದಲಿಗೆ 2024ರ ಆಗಸ್ಟ್‌ನಲ್ಲಿ ನಡೆದ ಪ್ರಾಥಮಿಕ ಪರೀಕ್ಷೆ ಪ್ರಶ್ನೆ ಪತ್ರಿಕೆಯ ಅನುವಾದದಲ್ಲಿ ಭಾರಿ ಪ್ರಮಾದಗಳಾಗಿದ್ದರಿಂದ ಸರಕಾರ ಪ್ರಿಲಿಮಿನರಿ ಪರೀಕ್ಷೆ ರದ್ದುಗೊಳಿಸಿ, ಹೊಸದಾಗಿ ಪರೀಕ್ಷೆ ನಡೆಸುವಂತೆ ಆಯೋಗಕ್ಕೆ ಸೂಚಿಸಿತ್ತು. ಅದರಂತೆ ಆಯೋಗ 2024ರ ಡಿ.29ಕ್ಕೆ ಮರು ಪರೀಕ್ಷೆ ನಡೆಸಿತ್ತು. ಆ ಪರೀಕ್ಷೆಯ ಪ್ರಶ್ನೆಪತ್ರಿಕೆಗಳ ಅನುವಾದದಲ್ಲಿಯೂ ಎಡವಟ್ಟುಗಳಾಗಿದ್ದವು. ಆದರೆ, ಕೆಎಟಿ ಮರು ಪರೀಕ್ಷೆಗೆ ನಿರಾಕರಿಸಿತ್ತು. ಆನಂತರ 384 ಹುದ್ದೆಗಳಿಗೆ 1:15ರ ಅನುಪಾತದಲ್ಲಿ ಸುಮಾರು 5760 ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆಗೆ ಅವಕಾಶ ಕಲ್ಪಿಸಲಾಗಿತ್ತು.

- ಆ ಆರು ಮಂದಿ ಪ್ರಿಲಿಮಿನರಿ ಪರೀಕ್ಷೆಯಲ್ಲಿ ಪಾಸಾಗಿದ್ದರೆಂದು ಪರಿಗಣಿಸುವಂತೆ ಹೈಕೋರ್ಟ್ ಆದೇಶ ನೀಡಿದೆ. ಇದು ಕರ್ನಾಟಕ ಲೋಕಸೇವಾ ಆಯೋಗವನ್ನು ಗೊಂದಲಕ್ಕೆ ದೂಡಿದೆ.
- ಕಳೆದೊಂದು ತಿಂಗಳಿಂದ ಕಗ್ಗಂಟು ಪರಿಹರಿಸುವ ಕಾರ್ಯದಲ್ಲಿ ಆಯೋಗ ಕಾರ್ಯೋನ್ಮುಖವಾಗಿದೆ.
- ಇದೀಗ ಗೊಂದಲ ಬಗೆಹರಿಸಲು ಕಾನೂನು ಇಲಾಖೆ, ಅಡ್ವೋಕೇಟ್ ಅಭಿಪ್ರಾಯ ಪಡೆದು ಪರಿಹಾರ ಕಂಡುಕೊಳ್ಳಲು ಮುಂದಾಗಿದೆ.

### ಆಯೋಗ ಮುಂದಿನ ತೀರ್ಮಾನ

**ಆನಂತರ ಕಳೆದೊಂದು ತಿಂಗಳಿಂದ ಕಗ್ಗಂಟು ಪರಿಹರಿಸುವ ಕಾರ್ಯದಲ್ಲಿ ಆಯೋಗ ಕಾರ್ಯೋನ್ಮುಖವಾಗಿದೆ. ಈ ಗೊಂದಲದಿಂದ ಹೇಗೆ ಹೊರಬರಬೇಕೆಂದು ದಾರಿ ಹುಡುಕುತ್ತಿರುವ ಆಯೋಗ, ಮೂಲತಃ ಸಂದರ್ಶನಕ್ಕೆ ಅರ್ಹರಾ ಆಗಿರುವ 1,152 ಮಂದಿಗೆ ಸಂದರ್ಶನ ನಡೆಸಿ, ನ್ಯಾಯಾಲಯದ ಆದೇಶದಿಂದಾಗಿ ಅರ್ಹತೆ ಗಿಟ್ಟಿಸಿರುವ ಆರು ಮಂದಿಗೆ ಪ್ರತ್ಯೇಕ ಸಂದರ್ಶನ ನಡೆಸುವುದೇ ಅಥವಾ ನ್ಯಾಯಾಲಯದಿಂದಲೇ ಸ್ಪಷ್ಟನೆ ಕೋರುವುದೇ ಎಂಬ ಜಿಜ್ಞಾಸೆಯಲ್ಲಿ ಮುಳುಗಿತ್ತು. ಇದೀಗ ಗೊಂದಲ ಬಗೆಹರಿಸಲು ಕಾನೂನು ಇಲಾಖೆ ಮತ್ತು ಅಡ್ವೋಕೇಟ್ ಅಭಿಪ್ರಾಯ ಪಡೆದು ಪರಿಹಾರ ಕಂಡುಕೊಳ್ಳಲು ಮುಂದಾಗಿದೆ. ಈಗಾಗಲೇ ಅಭಿಪ್ರಾಯಗಳನ್ನೂ ಸ್ವೀಕರಿಸಿದ್ದು, ಶೀಘ್ರವೇ ಆಯೋಗ ಮುಂದಿನ ತೀರ್ಮಾನ ಕೈಗೊಳ್ಳಲಿದೆ.**

ನಂತರ 306 ಅಭ್ಯರ್ಥಿಗಳು ನ್ಯಾಯಾಲಯದ ಮೊರೆ ಹೋಗಿ ಮಧ್ಯಂತರ ಆದೇಶ ಪಡೆದು ಕೊನೆ ಕ್ಷಣದಲ್ಲಿ ಮುಖ್ಯ ಪರೀಕ್ಷೆಗೆ ಅನುಮತಿ ಗಿಟ್ಟಿಸಿದ್ದರು.

2025ರ ಮೇ ನಲ್ಲಿ ಮುಖ್ಯ ಪರೀಕ್ಷೆಗಳು ನಡೆದಿದ್ದವು. ಆಯೋಗ ಮುಖ್ಯ ಪರೀಕ್ಷಾ ಫಲಿತಾಂಶ ಪ್ರಕಟಿಸಿ, 1:3ರ ಅನುಪಾತದಲ್ಲಿ 1152 ಅಭ್ಯರ್ಥಿಗಳನ್ನು ವ್ಯಕ್ತಿತ್ವ ಪರೀಕ್ಷೆಗೆ ಆಯ್ಕೆ ಮಾಡಿ ಮಾ.2ರಂದು ಪಟ್ಟಿ ಪ್ರಕಟಿಸಿತ್ತು. ಆನಂತರ ಹೈಕೋರ್ಟ್‌ನ ವಿಭಾಗೀಯ ಪೀಠ ಮಾ.6ರಂದು ಅರ್ಜಿಗಳನ್ನು ವಿಲೇವಾರಿ ಮಾಡಿದೆ. ಅದರಲ್ಲಿ ವಿಶೇಷ ಸಂದರ್ಭವೆಂದು ಪರಿಗಣಿಸಿ ಆರು ಮಂದಿ ಪ್ರಿಮಿಲಿನರಿ ಪರೀಕ್ಷೆ ಪಾಸಾಗಿದ್ದರು ಎಂದು ಪರಿಗಣಿಸುವಂತೆ ಆದೇಶಿಸಿದೆ.

## ಮಲ್ಲೇಶ್ವರ: 20ಕ್ಕೆ ಉದ್ಯೋಗ ಮೇಳ-ಅಶ್ವತ್ಥನಾರಾಯಣ

• ಉದಯವಾಹಿನಿ, ಬೆಂಗಳೂರು

ಬಸವ ಜಯಂತಿ ಅಂಗವಾಗಿ ಮಲ್ಲೇಶ್ವರದ ಎಸ್‌ಎಚ್‌ವಿಎನ್‌ಎಂ ಸರ್ಕಾರಿ ಮಹಿಳಾ ಪದವಿಪೂರ್ವ ಕಾಲೇಜು ಆವರಣದಲ್ಲಿ ಯುವೋತ್ಸವ, ಉದ್ಯೋಗ ಮೇಳ-2026 ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಸಿ.ಎನ್.ಅಶ್ವತ್ಥನಾರಾಯಣ ಹೇಳಿದರು. ಸುದ್ದಿಗೋಷ್ಠಿಯಲ್ಲಿ, ಮಾತನಾಡಿದ ಅವರು, 'ಮಲ್ಲೇಶ್ವರ ವಿಧಾನಸಭಾ ಕ್ಷೇತ್ರದಲ್ಲಿ ಹಲವು ವರ್ಷಗಳಿಂದ ಉದ್ಯೋಗ ಮೇಳವನ್ನು ಆಯೋಜನೆ ಮಾಡುತ್ತಾ ಬಂದಿದ್ದೇವೆ. ಏ.20ರಂದು ಬೆಳಿಗ್ಗೆ 8.30ರಿಂದ ಸಂಜೆ 4.30ರವರೆಗೆ ಉದ್ಯೋಗ ಮೇಳ ನಡೆಯಲಿದೆ' ಎಂದರು. ಮೇಳದಲ್ಲಿ ಯುವ ಸಬಲೀಕರಣಕ್ಕೆ ಸಹಾಯವಾಗಬಲ್ಲ ವೃತ್ತಿ ಮಾರ್ಗದರ್ಶನ, ಕೌಶಲ ಅಭಿವೃದ್ಧಿ ತರಬೇತಿ, ಉದ್ಯೋಗಮೇಳ, ಉದ್ಯಮಶೀಲತಾ ಅಭಿವೃದ್ಧಿ ಮತ್ತು ಆರ್ಥಿಕ ಸೇರ್ಪಡೆ ಕುರಿತು ಮಾಹಿತಿ ನೀಡಲಾಗುವುದು. ನೇರಸಂವಾದ, ನೇಮಕಾತಿ, ವೃತ್ತಿ ಅನ್ವೇಷಣೆಗೆ ವೇದಿಕೆಯನ್ನು ಮೇಳ ಒದಗಿಸಲಿದೆ. ಐಟಿ, ಉತ್ಪಾದನೆ, ಬ್ಯಾಂಕಿಂಗ್, ಆರೋಗ್ಯ, ಚಿಲ್ಲರೆ ವ್ಯಾಪಾರ, ಸರಕು ಮತ್ತು ಸೇವಾ ಕ್ಷೇತ್ರಗಳ ಸುಮಾರು 100ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿವೆ. ಐದು ಸಾವಿರಕ್ಕೂ ಹೆಚ್ಚು ಉದ್ಯೋಗದ ನಿರೀಕ್ಷೆ ಇದೆ ಎಂದರು. ಏ.13ರಿಂದಲೇ ಐದು ವಿಭಾಗದಲ್ಲಿ ಆನ್‌ಲೈನ್ ಮೂಲಕ ಮಾಹಿತಿ ನೀಡಲಾಗುವುದು. ಉದ್ಯೋಗ ಮೇಳದಂದು ಹ್ಯಾಕಥಾನ್ ಹಮ್ಮಿಕೊಳ್ಳಲಾಗಿದೆ. ಉದ್ಯಮಿಗಳು ಮಾಹಿತಿ ನೀಡಲಿದ್ದಾರೆ. ಪ್ರಾದೇಶಿಕ ಕೌಶಲ ಅಭಿವೃದ್ಧಿ ನಿರ್ದೇಶನಾಲಯ, ಜನಶಿಕ್ಷಣ ಸಂಸ್ಥಾನ್, ಎನ್‌ಎಸ್‌ಡಿಐ, ಪ್ರಧಾನ ಮಂತ್ರಿ ಉದ್ಯೋಗ ಸೃಷ್ಟಿ ಕಾರ್ಯಕ್ರಮ, ಅಂಚೆ ಇಲಾಖೆ ಸೇರಿದಂತೆ ವಿವಿಧ ಕಂಪನಿಗಳ ಮಳಿಗೆಗಳು ಇರುತ್ತವೆ. ಅಶ್ವತ್ಥನಾರಾಯಣ ಫೌಂಡೇಷನ್, ಭಾರತ್ ಕರಿಯರ್ ಕನೆಕ್ಟ್ ಸಹಯೋಗದಲ್ಲಿ ಮೇಳ ಆಯೋಜಿಸಲಾಗಿದೆ ಎಂದು ಹೇಳಿದರು.

## ಜಯನಗರದ 42 ರಸ್ತೆಗಳಲ್ಲಿ ಪಾರ್ಕಿಂಗ್ ದಕ್ಷಿಣ ನಗರ ಪಾಲಿಕೆ ಆಯುಕ್ತ ರಮೇಶ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ದಕ್ಷಿಣ ನಗರ ಪಾಲಿಕೆ ಜಯನಗರದ 42 ರಸ್ತೆಗಳಲ್ಲಿ ಪಾರ್ಕಿಂಗ್ ನೀತಿಯನ್ನು ಜಾರಿಗೆ ತರಲಾಗುತ್ತಿದೆ ಎಂದು ಆಯುಕ್ತ ಕೆ.ಎನ್. ರಮೇಶ್ ತಿಳಿಸಿದರು. ಪಾಲಿಕೆ ವ್ಯಾಪ್ತಿಯಲ್ಲಿ ಇದೇ ಮಾದರಿಯಲ್ಲಿ ಉಳಿದ ವಿಭಾಗಗಳಲ್ಲಿ ಪಾರ್ಕಿಂಗ್ ನೀತಿಯನ್ನು ಹಂತ-ಹಂತವಾಗಿ ಜಾರಿಗೆ ತರಲಾಗುವುದು ಎಂದರು. ನಗರ ಪಾಲಿಕೆಯಲ್ಲಿರುವ ಸಮಸ್ಯೆಗಳ ಪರಿಹಾರಕ್ಕಾಗಿ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು ಹೊಸ ತಂತ್ರಜ್ಞಾನ ಹಾಗೂ ಪರಿಹಾರಗಳೊಂದಿಗೆ ಮುಂದೆ ಬಂದರೆ ಪಾಲಿಕೆಯು ಕೈಜೋಡಿಸಲಿದೆ. ಕೋರಮಂಗಲದ ಅಪಾರ್ಟ್‌ಮೆಂಟ್‌ಗಳ ಮಾದರಿಯಲ್ಲಿ ಒಣ ಕಸವನ್ನು ತಾವೇ ವಿಂಗಡಿಸಿ ವಾರಕ್ಕೆರಡು ಬಾರಿ ಸಂಗ್ರಹಣಾ ಕೇಂದ್ರಕ್ಕೆ ಕಳುಹಿಸುವ ವ್ಯವಸ್ಥೆಯನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದರು.

## ಪಾರದರ್ಶಕತೆ ಇಲ್ಲದೆ ಕಾಮಗಾರಿ 38 ಸಾವಿರ ಕೋಟಿ ವೆಚ್ಚಕ್ಕೆ ಮಾಹಿತಿ ಇಲ್ಲ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಬಿಬಿಎಂಪಿ, ಜಲಮಂಡಳಿ, ಬೆಸ್ಕಾಂ, ಬಿಎಂಆರ್‌ಸಿಎಲ್, ನಗರ ಪೊಲೀಸ್, ಬಿಎಂಟಿಸಿಗಳಿಂದ 2021-22ರಲ್ಲಿ 38 ಸಾವಿರ ಕೋಟಿ ವೆಚ್ಚವಾಗಿದ್ದರೂ, ಅದರ ಮಾಹಿತಿ ಸಾರ್ವಜನಿಕವಾಗಿ ಬಹಿರಂಗ ಆಗಿಲ್ಲ. ಪಾರದರ್ಶಕತೆ ಇಲ್ಲದೆ ಕಾಮಗಾರಿಗಳು ನಡೆಯುತ್ತಿವೆ ಎಂದು ಜನಾಗ್ರಹ ಸಂಸ್ಥೆ ವರದಿ ಪ್ರಕಟಿಸಿದೆ. ಜನಾಗ್ರಹ ಸಂಸ್ಥೆಯ 'ಬೆಂಗಳೂರು ಡಿಬೇಟ್ಸ್' ತ್ರೈಮಾಸಿಕ ಸಂವಾದ ಸರಣಿಯಲ್ಲಿ 'ಬೆಂಗಳೂರಿನಲ್ಲಿ ಸಾರ್ವಜನಿಕ ವೆಚ್ಚ-ಆಮೂಲಾಗ್ರ ಪಾರದರ್ಶಕತೆ' ಎಂಬ ಅಧ್ಯಯನ ವರದಿಯನ್ನು ಶನಿವಾರ ಬಿಡುಗಡೆ ಮಾಡಲಾಯಿತು.

ಸಂಚಾರದ ದಟ್ಟಣೆ, ನೀರಿನ ಕೊರತೆ, ಪ್ರವಾಹ ಪರಿಸ್ಥಿತಿ, ಹದಗೆಟ್ಟ ರಸ್ತೆಗಳು ನಗರದ ನಾಗರಿಕರ ದಿನನಿತ್ಯದ ಸಂಕಷ್ಟಗಳು. ಅದಕ್ಕಾಗಿ, ಸಾರ್ವಜನಿಕ ಹಣ ಎಷ್ಟು ಖರ್ಚಾಗುತ್ತಿದೆ. ಯಾವ ಸಂಸ್ಥೆಗಳು ಅದನ್ನು ವೆಚ್ಚ ಮಾಡುತ್ತಿವೆ, ಯಾವ ಉದ್ದೇಶಗಳಿಗೆ ಬಳಸಲಾಗುತ್ತಿದೆ ಎಂಬುದರ ಬಗ್ಗೆ ಸಮಗ್ರ ಮಾಹಿತಿ ಸಾರ್ವಜನಿಕರಿಗೆ ಲಭ್ಯವಿಲ್ಲ. ಈ ಹಿನ್ನೆಲೆಯಲ್ಲಿ ಜನಾಗ್ರಹ ಸಂಸ್ಥೆಯು, 70ಕ್ಕೂ ಹೆಚ್ಚು ದಾಖಲೆ ಮತ್ತು 12ಕ್ಕೂ ಹೆಚ್ಚು ಸಾರ್ವಜನಿಕ ಸಂಸ್ಥೆಗಳ ಮೂಲಕ ಮಾಹಿತಿ ಸಂಗ್ರಹಿಸಿ, 2021-22ನೇ ಸಾಲಿನಲ್ಲಿ 38 ಸಾವಿರ ಕೋಟಿಗೂ ಹೆಚ್ಚು ವೆಚ್ಚವಾಗಿರುವುದನ್ನು ಅಂಕಿ-ಅಂಶಗಳ ಮೂಲಕ ವರದಿಯಲ್ಲಿ ವಿವರಿಸಲಾಗಿದೆ. ಕಾಮಗಾರಿಗಳ ವೆಚ್ಚದಲ್ಲಿ ಪಾರದರ್ಶಕತೆಯ ಕೊರತೆ ಇದ್ದು. ಒಟ್ಟಾರೆ ವೆಚ್ಚದಲ್ಲಿ ಶೇ. 20ರಷ್ಟು ಮಾತ್ರ ಸ್ಥಳೀಯ ಆಡಳಿತವಾದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ವ್ಯಯವಾಗಿದೆ.ಉಳಿದ ವೆಚ್ಚವನ್ನು ಇತರೆ ಸಂಸ್ಥೆಗಳು ವೆಚ್ಚ ಮಾಡಿವೆ. ಈ ಸಂಸ್ಥೆಗಳು ತಮ್ಮ ಹಣಕಾಸು ಮಾಹಿತಿಯನ್ನು ಶೇ 34ರಷ್ಟು ಮಾತ್ರ ಸಾರ್ವಜನಿಕವಾಗಿ ಬಹಿರಂಗಪಡಿಸುತ್ತವೆ. ಬಹುತೇಕ ಸಂಸ್ಥೆಗಳಿಗೆ ಅದರ ಕಾನೂನುಬದ್ಧ ಬಾಧ್ಯತೆ ಇಲ್ಲ ಎಂದು ವರದಿಯಲ್ಲಿ ತಿಳಿಸಲಾಗಿದೆ.

## 26ಕ್ಕೂ ಹೆಚ್ಚು ಕಾಂಗ್ರೆಸ್ ಶಾಸಕರು ದೆಹಲಿಗೆ ದೌಡು

• ಉದಯವಾಹಿನಿ, ಬೆಂಗಳೂರು

ಸಚಿವ ಸಂಪುಟ ಪುನರ್ ರಚನೆಯಾಗಬೇಕೆಂದು ಹೈಕಮಾಂಡ್ ಮೇಲೆ ಒತ್ತಡ ಹೇರಲು ಸುಮಾರು 26ಕ್ಕೂ ಹೆಚ್ಚು ಮಂದಿ ಶಾಸಕರು ಭಾನುವಾರ ದೆಹಲಿಗೆ ತೆರಳಲಿದ್ದಾರೆ. ಸೋಮವಾರ ಬೆಳಗ್ಗೆ ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಸಂಸದೀಯ ಮಂಡಳಿ ಅಧ್ಯಕ್ಷೆ ಸೋನಿಯಾಗಾಂಧಿ, ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್, ರಣದೀಪ್‌ಸಿಂಗ್‌ಸುರ್ಜೇವಾಲ ಮತ್ತಿತರರನ್ನು ಭೇಟಿ ಮಾಡಲು ಪ್ರಯತ್ನಿಸಲಿದ್ದಾರೆ. ರಾಹುಲ್ ಗಾಂಧಿ ಲಭ್ಯತೆ ಬಗ್ಗೆ ಅನುಮಾನಗಳಿದ್ದು, ಮಲ್ಲಿಕಾರ್ಜುನ ಖರ್ಗೆ ಅವರು ಭೇಟಿಗೆ ಸಮಯ ನೀಡಿದ್ದಾರೆ ಎನ್ನಲಾಗಿದೆ. ಸಂಪುಟದಲ್ಲಿರುವವರು ಈಗಾಗಲೇ 3 ವರ್ಷ ಕಳೆದಿದ್ದಾರೆ. ಬಾಕಿಯಿರುವ ಎರಡೂವರೆ ವರ್ಷಗಳಿಗೆ ತಮಗೆ ಅವಕಾಶ ಮಾಡಿಕೊಡಬೇಕೆಂದು ಹಿರಿಯ ಶಾಸಕರು ಒತ್ತಾಯಿಸಲಿದ್ದಾರೆ. ಇದಕ್ಕೂ ಮೊದಲು ಬೆಂಗಳೂರಿನ ಖಾಸಗಿ ಕ್ಲಬ್‌ನಲ್ಲಿ ಹಿರಿಯ ಶಾಸಕರು ಸಭೆ ನಡೆಸಿದ್ದರು. ಅನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಸಂಪುಟ ಪುನರ್ ರಚನೆ ಮಾಡಬೇಕು ಮತ್ತು ನಮಗೆ ಅವಕಾಶ ಕಲ್ಪಿಸಬೇಕೆಂದು ಮನವಿ ಮಾಡಿದರು. ಹೈಕಮಾಂಡ್ ಅವಕಾಶ ನೀಡಿದರೆ ತಾವು ಸಂಪುಟ ಪುನರ್ ರಚನೆ ಮಾಡಲು ಸಿದ್ಧ ಎಂದು ಸಿದ್ದರಾಮಯ್ಯ ಶಾಸಕರ ನಿಯೋಗಕ್ಕೆ ಭರವಸೆ ನೀಡಿದ್ದರು. ಹೀಗಾಗಿ ಹೈಕಮಾಂಡ್ ಮೂಲಕ ಸಂಪುಟ ಪುನರ್ ರಚನೆಗೆ ಅವಕಾಶ ಕಲ್ಪಿಸಲು ಶಾಸಕರು ಮುಂದಾಗಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸಂಪುಟ ಪುನರ್ ರಚನೆ ಇಷ್ಟವಿಲ್ಲ. ಹಾಗಾಗಿ ಅವರು ಶಾಸಕರ ನಿಯೋಗದ ಜೊತೆ ಯಾವುದೇ ಮಾತುಕತೆ ನಡೆಸಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಂಪುಟ ಪುನರ್ ರಚನೆಗೆ ಅವಕಾಶ ಸಿಕ್ಕರೆ, ತಮ್ಮ ಬೆಂಬಲಿಗರಿಗೆ ಮಣೆ ಹಾಕಬಹುದು. ಆ ನಂತರ ತಮ್ಮ ಪರವಾದ ಸಮರ್ಥಕರನ್ನು ಹೆಚ್ಚಿಸಿಕೊಳ್ಳಬಹುದು ಎಂಬ ಇರಾದೆ ಇದ್ದಂತಿದೆ. ಜೊತೆಗೆ ಸಂಪುಟ ಪುನರ್ ರಚನೆಯಾದರೆ ನಾಯಕತ್ವ ಬದಲಾವಣೆ ಕೂಗು ಕೂಡ ಕ್ಷೀಣವಾಗಲಿದೆ.

ಬಹುದಿನಗಳ ಕನಸನ್ನು ನನಸು ಮಾಡಿಕೊಳ್ಳಲು ಶಾಸಕರ ನಿಯೋಗ ದೆಹಲಿಯತ್ತ ಮುಖ ಮಾಡಿದೆ.

ಶಿರಾ ಕ್ಷೇತ್ರದ ಶಾಸಕ ಟಿ.ಬಿ.ಜಯಚಂದ್ರ, ಚಾಮರಾಜನಗರ ಶಾಸಕ ಪುಟ್ಟರಂಗಶೆಟ್ಟಿ, ಶಾಂತಿನಗರ ಶಾಸಕ ಎನ್.ಎ.ಹ್ಯಾರಿಸ್, ರಾಮದುರ್ಗಾ ಶಾಸಕ ಆಶೋಕ್ ಪಟ್ಟಣ್, ಬಾಗೇಪಲ್ಲಿಯ ಸುಬ್ಬಾರೆಡ್ಡಿ, ಸಿಂಧನೂರಿನ ಹಂಪನಗೌಡ ಬಾದರ್ಲಿ, ಬ್ಯಾಡಗಿ ಶಾಸಕ ಬಸವರಾಜ್ ಶಿವಣ್ಣನವರ್, ಹಿರೇಕೆರೂರು ಶಾಸಕ ಯು.ಬಿ.ಬಣಕಾರ್, ಹುಬ್ಬಳ್ಳಿ-ಧಾರವಾಡ ಪೂರ್ವ ಶಾಸಕ ಪ್ರಸಾದ್ ಅಬ್ಬಯ್ಯ, ರೋಣ ಶಾಸಕ ಜಿ.ಎಸ್.ಪಾಟೀಲ್, ಬಂಗಾರಪೇಟೆ ಶಾಸಕ ಎಸ್.ಎನ್. ನಾರಾಯಣಸ್ವಾಮಿ, ತಿಪಟೂರಿನ ಶಾಸಕ ಕೆ.ಷಡಕ್ಷರಿ, ಮುದ್ದೇಬಿಹಾಳದ ಸಿ.ಎಸ್.ನಾಡಗೌಡ, ಆನೇಕಲ್‌ನ ಬಿ. ಶಿವಣ್ಣ, ಮಳವಳ್ಳಿಯ ಪಿ. ನರೇಂದ್ರ ಸ್ವಾಮಿ, ಧಾರವಾಡದ ವಿನಯ್‌ಕುಲಕರ್ಣಿ, ಕೊಪ್ಪಳದ ರಾಘವೇಂದ್ರ ಯತ್ನಾಳ್, ಅಥಣಿಯ ಲಕ್ಷ್ಮಣ ಸವದಿ, ಗೋವಿಂದರಾಜ ನಗರದ ಪ್ರಿಯಕೃಷ್ಣ, ಸಾಗರದ ಬೇಳೂರು ಗೋಪಾಲಕೃಷ್ಣ ದೆಹಲಿಗೆ ತೆರಳಲಿದ್ದಾರೆ. ನಿಯೋಗದ ಜೊತೆಗೆ ಮಾತುಕತೆ ನಡೆಸಲಿರುವ ವರಿಷ್ಠರು ಸಂಪುಟ ಪುನರ್ ರಚನೆಗೆ ಅವಕಾಶ ಮಾಡಿಕೊಟ್ಟರೆ ಒಂದಷ್ಟು ಮಂದಿ ಹೊಸಬರಿಗೆ ಅವಕಾಶ ಸಿಗಲಿದೆ. ಶಾಸಕರ ದೆಹಲಿಯ ಭೇಟಿಯ ಸಂಖ್ಯೆ ಕ್ರಮೇಣ ಹೆಚ್ಚಾಗುವ ಸಾಧ್ಯತೆಯೂ ಇದೆ.

## ಬೋಗಸ್ ದಾಖಲೆ ಸೃಷ್ಟಿಸಿ ನೂರಾರು ಸಿಎಲ್-7 ಪರವಾನಗಿ ಮಂಜೂರು

• ಉದಯವಾಹಿನಿ, ಬೆಂಗಳೂರು




ಮಂಥ್ಲಿ ಮನಿ, ಹಫ್ತಾ ವಸೂಲಿ, ಕಾಸಿಗಾಗಿ ಪೋಸ್ಟಿಂಗ್ ದಂಧೆ, ಕಿಕ್‌ಬ್ಯಾಕ್, ಹೋಟೆಲ್, ವಸತಿಗೃಹ ಮಂಜೂರಾತಿಗೆ ಕೋಟ್ಯಂತರ ರೂಪಾಯಿ ಲಂಚ ವಸೂಲಿ ಮತ್ತು ಮಧ್ಯವರ್ತಿಗಳ ಹಾವಳಿ ಸೇರಿ ಒಂದಿಲ್ಲೊಂದು ಅಕ್ರಮ ನಡೆಯುತ್ತಿರುವ ಅಬಕಾರಿ ಇಲಾಖೆಯಲ್ಲಿ ನಿಯಮಬಾಹಿರವಾಗಿ ಅಧಿಕಾರ ದುರ್ಬಳಕೆ ಮಾಡಿಕೊಂಡು ಕೆಲ ಅಧಿಕಾರಿಗಳು ನೂರಾರು ಸಿಎಲ್-7 ಪರವಾನಗಿ ಮಂಜೂರಾತಿ ಮಾಡಿರುವುದು ಲೋಕಾಯುಕ್ತ ವರದಿಯಲ್ಲಿ ಬಹಿರಂಗವಾಗಿದೆ. ಬೆಂಗಳೂರು ನಗರ ಜಿಲ್ಲೆಯ ಅಬಕಾರಿ ವಲಯ ಬಿಯುಡಿ- 2 ವ್ಯಾಪ್ತಿಯಡಿ ಬರುವ ಕೆ.ಆರ್.ಪುರದ ಮೇದಹಳ್ಳಿ, ಕೌದೇನಹಳ್ಳಿ, ಬೀದರಹಳ್ಳಿ, ರಾಮಪುರ ಸೇರಿ ಇತರ ಪ್ರದೇಶಗಳಲ್ಲಿ ನಿಯಮಬಾಹಿರವಾಗಿ ನೂರಾರು ಸಿಎಲ್-7 ಲೈಸೆನ್ಸ್ ಮಂಜೂರಾತಿ ಮಾಡಲಾಗಿದೆ.

ಬಾರ್ ಆ್ಯಂಡ್ ರೆಸ್ಟೋರೆಂಟ್‌ನಲ್ಲಿ (ಸಿಎಲ್-9) ಮದ್ಯ ಸೇವನೆಗೆ ಇರುವ ಕಂಪಾರ್ಟ್‌ಮೆಂಟ್ ಗಳನ್ನೇ ಸಿಎಲ್-7 ಕೊಠಡಿಗಳೆಂದು ನೀಲನಕಾಶೆ ತಯಾರಿಸಿರುವುದು, ಬೇರೆ ಕಟ್ಟಡದ ಕಿಚನ್, ರೂಂಗಳು, ಡೈನಿಂಗ್ ಹಾಲ್, ರೆಸ್ಟೋರೆಂಟ್ ಛಾಯಚಿತ್ರ ನೀಡಿರುವುದು, ಪಾರ್ಕಿಂಗ್ ವ್ಯವಸ್ಥೆಗೆ ಕೆರೆ ಜಾಗ ತೋರಿಸಿರುವುದು, ಸುಳ್ಳು ಟ್ರೇಡ್‌ಲೈಸೆನ್ಸ್ ಕೊಟ್ಟಿರುವುದು, ಅಸ್ತಿತ್ವದಲ್ಲಿರುವ ಸಿಎಲ್-9 ಕಟ್ಟಡ ಮತ್ತು ಅದರ ವಿಳಾಸವನ್ನು ನಕಲಿ ದಾಖಲೆ ಸೃಷ್ಟಿಸಿ ನೂರಾರು ಸಿಎಲ್-7 ಲೈಸೆನ್ಸ್ ಮಂಜೂರಾತಿ ಮಾಡಲಾಗಿದೆ.

**ಮೂವರು ಅಧಿಕಾರಿಗಳ ಕರಾಮತ್ತು**: ಕೆಲವೊಮ್ಮೆ ಕಟ್ಟಡಗಳು ಇಲ್ಲದಿದ್ದರೂ ಬೋಗಸ್ ದಾಖಲೆ ಸೃಷ್ಟಿಸಿ ಸಿಎಲ್-7 ಲೈಸೆನ್ಸ್ ನೀಡಲಾಗಿದೆ. ಅಬಕಾರಿ ಉಪ ಆಯುಕ್ತ ಅಜಿತ್‌ಕುಮಾರ್, ಉಪ ಅಧೀಕ್ಷಕ ತುಕಾರಾಂ ನಾಯಕ್ ಮತ್ತು ನಿರೀಕ್ಷಕ ಭರತ್ ಎಂಬುವರು ಕಾನೂನುಬಾಹಿರವಾಗಿ ಸಿಎಲ್-7 ಲೈಸೆನ್ಸ್ ನೀಡಿರುವುದು ವರದಿಯಲ್ಲಿ ತಿಳಿದುಬಂದಿದೆ.

ಕೆಲವೆಡೆ ಸಿಎಲ್-7 ಸನ್ನದು ಮಂಜೂರಾಗಿರುವ ಕಟ್ಟಡದಲ್ಲಿರುವ ಸಿಎಲ್-9 ಸನ್ನದುಗಳನ್ನು, ಸಿಎಲ್-7 ಸನ್ನದುಗಳು ಮಂಜೂರಾದ ನಂತರ ಬೇರೆ ಕಡೆಗೆ ಸ್ಥಳಾಂತರ ಮಾಡಿ ಆ ಕಟ್ಟಡವನ್ನು ಸಿಎಲ್-7 ಕಟ್ಟಡ ಎಂಬುದಾಗಿ ತೋರಿಸಲಾಗಿದೆ. ಸಿಎಲ್-9 ಕಟ್ಟಡ ಹಾಗೂ ಅದೇ ವಿಳಾಸಕ್ಕೆ ನಕಲಿ ದಾಖಲೆ ಸೃಷ್ಟಿಸಿ ಕರಾಮತ್ತು ತೋರಿರುವ ಈ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲಾಧಿಕಾರಿಗೆ ವರದಿ ಕೊಟ್ಟು ಯಾಮಾರಿಸಿದ್ದಾರೆ. ಮಧ್ಯವರ್ತಿಗಳ ಮೂಲಕ ಪ್ರತಿ ಲೈಸೆನ್ಸ್ ಕೋಟ್ಯಂತರ ರೂಪಾಯಿ ಲಂಚ ವಸೂಲಿ ಮಾಡಿರುವ ಗುರುತರ ಆರೋಪಗಳಿವೆ. ಈ ಕುರಿತು ವಕೀಲ ಡಾ.ಹರಿಪ್ರಸಾದ್ ಎಂಬುವರು ಕೊಟ್ಟಿರುವ ದೂರಿನನ್ವಯ ಲೋಕಾಯುಕ್ತರು ನಡೆಸಿದ್ದ ತನಿಖೆಯಲ್ಲಿ ಅಧಿಕಾರಿಗಳು ಹೇಗೆಲ್ಲಾ ಅಕ್ರಮ ಎಸೆಗಿರುವುದು ಸಾಬೀತಾಗಿದೆ.

## ಗಗನಕ್ಕೇರಿದ ಎಳನೀರಿನ ಬೆಲೆ

• ಉದಯವಾಹಿನಿ, ಬೆಂಗಳೂರು



ದಿನದಿಂದ ದಿನಕ್ಕೆ ರಾಜ್ಯಾದ್ಯಂತ ಬಿಸಿಲಿನ ಬೇಗೆ ಹೆಚ್ಚಾಗುತ್ತಿದ್ದು, ಜನರು ಬಳಲಿ ಬೆಂಡಾಗಿದ್ದು ತಂಪು ಪಾನೀಯಗಳತ್ತ ಮುಖ ಮಾಡಿದ್ದು ಎಳನೀರು ಬೆಲೆ ಶತಕದತ್ತ ದಾಪುಗಾಲಿಟ್ಟಿದೆ. ಕಳೆದ ಎರಡು ದಿನಗಳಿಂದ ಬೆಂಗಳೂರಿನಲ್ಲಿ 35 ಡಿ.ಸೆ. ತಾಪಮಾನ ಏರಿಕೆಯಾಗಿದ್ದು, ಇನ್ನೂ ಹೆಚ್ಚಾಗುವ ನಿರೀಕ್ಷೆಯಿದ್ದು ದೇಹವನ್ನು ತಣಿಸಿಕೊಳ್ಳಲು ಎಲ್ಲೆಡೆ ಜನರು ಎಳನೀರು, ಕಲ್ಲಂಗಡಿ ಸೇರಿದಂತೆ ಮತ್ತಿತರ ತಂಪು ಪಾನೀಯಗಳನ್ನು ಸೇವಿಸುತ್ತಿದ್ದಾರೆ. ಸಾರ್ವಜನಿಕರು ತಾಪಮಾನ ಹೆಚ್ಚಾದ ಕಾರಣ ಲಘು ಉಪಾಹಾರ ಸೇವನೆ ಮಾಡುತ್ತಿದ್ದು ಹೆಚ್ಚಾಗಿ ಪಾನೀಯಗಳನ್ನು ಸೇವಿಸುತ್ತಿದ್ದಾರೆ. ದರ ಹೆಚ್ಚಾದರೂ ಪರವಾಗಿಲ್ಲ, ನಮಗೆ ಆರೋಗ್ಯ ಮುಖ್ಯ ಎಂದು ಕೆಲವರು ನೈಸರ್ಗಿಕ ಪಾನೀಯ ಎಳನೀರಿನ ಮೊರೆ ಹೋಗಿದ್ದಾರೆ.

ರಾಜಧಾನಿ ಬೆಂಗಳೂರಿನಲ್ಲಿ ಗುಣಮಟ್ಟದ ಎಳನೀರು 70 ರೂ.ಗಳಿಂದ 80 ರೂ.ಗೆ ಮಾರಾಟವಾಗುತ್ತಿದೆ ಮದ್ದೂರು, ಮಂಡ್ಯ, ಮೈಸೂರು, ತುಮಕೂರು, ರಾಮನಗರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಂದ ಹೆಚ್ಚಿನ ಪ್ರಮಾಣದಲ್ಲಿ ಎಳನೀರು ಸರಬರಾಜಾಗುತ್ತಿದೆ. ಮಳೆಯ ಕೊರತೆ, ರೋಗಬಾಧೆಯಿಂದ ಇಳುವರಿ ಕುಂಠಿತವಾಗಿ ಬೆಲೆ ಏರಿಕೆಯಾಗಿದೆ. ಏಷ್ಯಾದಲ್ಲೇ ದೊಡ್ಡ ಮಾರುಕಟ್ಟೆಯಾದ ಮದ್ದೂರು ಮಾರುಕಟ್ಟೆಯಲ್ಲಿ 40 ರೂ.ಗಳಿಂದ 50 ರೂ.ಗೆ ಎಳನೀರು ಸಿಗುತ್ತಿದ್ದು ಸಾಗಾಟ, ವ್ಯಾಪಾರಿಗಳ ಕೂಲಿ ಎಲ್ಲಾ ಸೇರಿ ನಗರದಲ್ಲಿ 70 ರೂ.ಗೆ ಮಾರಾಟ ಮಾಡಲಾಗುತ್ತಿದೆ. ಹಣ ಕೊಟ್ಟರೂ ಸಹ ಉತ್ತಮ ಎಳನೀರು ಮಾರುಕಟ್ಟೆಯಲ್ಲಿ ಸಿಗದಂತಾಗಿದೆ. ಎಷ್ಟೇ ನೀರು ಕುಡಿದರೂ ದಾಹ ನೀಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಜನರು ತಂಪು ಪಾನೀಯಗಳ ಮೊರೆ ಹೋಗಿದ್ದಾರೆ. ಕಲ್ಲಂಗಡಿ ಸೀಸನ್ ಮುಗಿಯುತ್ತಾ ಬಂದಿದ್ದು ಅದು ಕೂಡಾ ಬೆಲೆ ಏರಿಕೆಯಾಗಿದೆ. ಬೆಳಿಗ್ಗೆ 8 ಗಂಟೆಯಾದರೆ ಬಿಸಿಲು ನೆತ್ತಿ ಸುಡುತ್ತಿದ್ದು ಮನೆಯಿಂದ ಹೊರಬರಲು ಜನರು ಹೆದರುತ್ತಿದ್ದಾರೆ. ಸೆಖೆಯಿಂದ ಪಾರ್ಕ್‌ಗಳಿಗೂ ಸಹ ವಾಕಿಂಗ್ ಹೋಗುವವರ ಸಂಖ್ಯೆ ಗಣನೀಯವಾಗಿ ಇಳಿಮುಖವಾಗುತ್ತಿದೆ. ಮನೆಗಳಲ್ಲಿ 24 ಗಂಟೆ ಎಸಿ, ಏರ್‌ಕೂಲರ್, ಫ್ಯಾನ್ ಚಾಲೂ ಆಗಿರುತ್ತವೆ. ಬೇಸಿಗೆ ಹಿನ್ನೆಲೆಯಲ್ಲಿ ಎಸಿ, ಏರ್‌ಕೂಲರ್, ಫ್ಯಾನ್‌ಗಳ ಬೇಡಿಕೆ ಹೆಚ್ಚಿದ್ದು, ವ್ಯಾಪಾರ ವಹಿವಾಟು ಭರದಿಂದ ಸಾಗಿದೆ.

### ಸರ್ಕಾರಿ ಶಾಲೆಗಳಲ್ಲಿ ಕಟ್ಟಡ ಸಮಸ್ಯೆ ಮಾತ್ರವಲ್ಲ, ಪಾಠ ಮಾಡಲು ಶಿಕ್ಷಕರೂ ಇಲ್ಲ! 58 ಸಾವಿರ ಹುದ್ದೆ ಖಾಲಿ

# ಮೂಲ ಸೌಕರ್ಯ ಮಾತ್ರವಲ್ಲ, ಸರ್ಕಾರಿ ಶಾಲೆಗಳಲ್ಲಿ ಹಲವು ಸಮಸ್ಯೆಗಳು

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಶಾಲೆಗಳಲ್ಲಿ ಕಟ್ಟಡ ಸಮಸ್ಯೆ ಮಾತ್ರವಲ್ಲ, ಪಾಠ ಮಾಡಲು ಶಿಕ್ಷಕರೂ ಇಲ್ಲ ಎಂಬಂತಾಗಿದೆ. ರಾಜ್ಯದ ವಿವಿಧ ಸರ್ಕಾರಿ ಶಾಲೆಗಳಲ್ಲಿ 58 ಸಾವಿರ ಹುದ್ದೆ ಖಾಲಿ ಇವೆ. ಪ್ರಾಥಮಿಕ ಶಾಲೆಗಳಲ್ಲಿ 45,179 ಹುದ್ದೆ ಹಾಗೂ ಪ್ರೌಢ ಶಾಲೆಗಳಲ್ಲಿ 13045 ಹುದ್ದೆಗಳು ಖಾಲಿ ಇವೆ. ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇದೆ. ಶಾಲಾ ಕಟ್ಟಡಗಳು ದುಸ್ಥಿತಿಯಲ್ಲಿವೆ. ಮತ್ತೊಂದು ಕಡೆಯಲ್ಲಿ ಶಾಲೆಗೆ ಹೋಗುವ ಮಕ್ಕಳ ಸಂಖ್ಯೆಯೂ ಕಡಿಮೆಯಾಗುತ್ತಿದೆ. ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳುತ್ತೇವೆ ಎಂಬ ಭರವಸೆಯನ್ನು ಸರ್ಕಾರ ನೀಡುತ್ತಿದೆ. ಆದರೆ, ವಾಸ್ತವದಲ್ಲಿ ಜಾರಿಯಾಗುತ್ತಿಲ್ಲ. 2022ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಗೆ ರಾಜ್ಯದಲ್ಲಿ 15000 ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿದ್ದು, ಅಂತಿಮ ಆಯ್ಕೆಪಟ್ಟಿಯಲ್ಲಿ 13352 ಹುದ್ದೆಗಳು ಆಯ್ಕೆಯಾಗಿರುತ್ತವೆ ಎಂಬುವುದು ಶಿಕ್ಷಣ ಇಲಾಖೆಯ ಮಾಹಿತಿಯಾಗಿದೆ.

ಈ 13352 ಹುದ್ದೆಗಳಲ್ಲಿ 2023-24, 2024-25ನೇ ಸಾಲಿನಲ್ಲಿ ನ್ಯಾಯಾಲಯದ ಪ್ರಕರಣಗಳನ್ನು ಹೊರತುಪಡಿಸಿ ನೇಮಕಾತಿ ಅಧಿಸೂಚನೆ, ನಿಯಮಗಳಂತೆ ಎಲ್ಲಾ ಷರತ್ತು ಮಾನದಂಡಗಳನ್ನು ಪೂರೈಸಿರುವ ಒಟ್ಟು 12,419 ಶಿಕ್ಷಕರಿಗೆ ನೇಮಕಾತಿ ಆದೇಶ ನೀಡಲಾಗಿದ್ದು 12,419 ಶಿಕ್ಷಕರು ಶಾಲಾ ಕರ್ತವ್ಯಕ್ಕೆ ಹಾಜರು ಪಡಿಸಿಕೊಳ್ಳಲಾಗಿದೆ ಎಂದು ಶಿಕ್ಷಣ ಇಲಾಖೆ ಮಾಹಿತಿ ನೀಡಿದೆ.



ಉದಯವಾಹಿನಿ ಚಿತ್ರ

### ಕ್ರಮಗಳನ್ನು ಕೈಗೊಳ್ಳಬೇಕು

**ರಾಜ್ಯ ಸರ್ಕಾರ ಸರ್ಕಾರಿ ಶಾಲೆಗಳ ಅಭಿವೃದ್ಧಿ ವಿಚಾರವಾಗಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸುತ್ತಿದೆ. ಆದರೆ, ಸರ್ಕಾರಿ ಶಾಲೆಗಳಲ್ಲಿ ಕಟ್ಟಡ ಸಮಸ್ಯೆ ಮಾತ್ರವಲ್ಲ, ಪಾಠ ಮಾಡಲು ಶಿಕ್ಷಕರೂ ಇಲ್ಲದಂತಹ ಸ್ಥಿತಿ ಇದೆ. ರಾಜ್ಯದಲ್ಲಿ ಒಟ್ಟು 58 ಸಾವಿರ ಶಿಕ್ಷಕರ ಹುದ್ದೆ ಖಾಲಿ ಇದೆ. ಅಷ್ಟೇ ಅಲ್ಲದೆ, ಮೂಲಭೂತ ಸೌಕರ್ಯಗಳ ಕೊರತೆಯೂ ಎದ್ದು ಕಾಣುತ್ತಿದೆ. ಶೌಚಾಲಯ, ಕಾಪೌಂಡು ಸೇರಿದಂತೆ ಮೂಲಭೂತ ಸೌಕರ್ಯಗಳ ಕೊರತೆ ಇದೆ. ಇದನ್ನು ಸರಿಪಡಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಒತ್ತಾಯವೂ ಇದೆ.**

ಸರ್ಕಾರದ ಆದೇಶದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ 7 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರಾಥಮಿಕ ಶಾಲೆಗಳ 4882 ಹುದ್ದೆಗಳು ಹಾಗೂ ಪ್ರೌಢ ಶಾಲೆಗಳ 385 ಹುದ್ದೆಗಳನ್ನು ಸೇರಿ ಒಟ್ಟು ಹುದ್ದೆಗಳಲ್ಲಿ 5267 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತ ದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ 34027, 9499 ತಾತ್ಕಾಲಿಕವಾಗಿ ಶಿಕ್ಷಕರುಗಳನ್ನು ನೇಮಕಾತಿ ಮಾಡಿಕೊಳ್ಳುವ ಮೂಲಕ ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮವಹಿಸಿದೆ ಎಂದು ಶಿಕ್ಷಣ ಇಲಾಖೆ ಮಾಹಿತಿ ನೀಡಿದೆ. ಇದಷ್ಟೇ ಅಲ್ಲದೆ, ಶಾಲೆಗಳ ಆವರಣದಲ್ಲಿ ಕಾಪೌಂಡ್‌ಗಳಿಲ್ಲವಾಗಿದೆ. 4,876 ಶಾಲೆಗಳಲ್ಲಿ ಈ ಸಮಸ್ಯೆ ಇದೆ. ಸರ್ಕಾರಿ ಶಾಲೆಗಳನ್ನು ಮುಚ್ಚಲು ಶೌಚಾಲಯ ಮತ್ತು ಕುಡಿಯುವ ನೀರಿನಂತಹ ಮೂಲಭೂತ ಸೌಕರ್ಯಗಳ ಕೊರತೆಯೂ ಒಂದು ಕಾರಣ ಎಂದು ಕರ್ನಾಟಕ ಹೈಕೋರ್ಟ್ ಅಭಿಪ್ರಾಯಪಟ್ಟಿತ್ತು.

### ಶೌಚಾಲಯ ಇಲ್ಲ, ಮೂಲಸೌಕರ್ಯವೂ ಇಲ್ಲ

**ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯವೂ ಇಲ್ಲ, ಮೂಲಕ ಸೌಕರ್ಯವೂ ಇಲ್ಲದ ಸ್ಥಿತಿ ಇದೆ. 464 ಶಾಲೆಗಳಲ್ಲಿ ಶೌಚಾಲಯವಿದ್ದರೂ ಅದು ಕಾರ್ಯ ನಿರ್ವಹಿಸುತ್ತಿಲ್ಲ. 136 ಶಾಲೆಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಇಲ್ಲ. ಅಷ್ಟೇ ಅಲ್ಲದೆ, 830 ಶಾಲೆಗಳಲ್ಲಿ ವಿದ್ಯುತ್ ಸೌಕರ್ಯ ಕೂಡಾ ಇಲ್ಲವಾಗಿದೆ.**

ಉದಯ ವಾಹಿನಿ

ಪ್ರಾದೇಶಿಕ


ಸೋಮವಾರ 13 ಏಪ್ರಿಲ್ 2026 | 03

# ಮಂಡ್ಯಕ್ಕೆ ಮತ್ತೊಮ್ಮೆ ಬರಲಿದ್ದಾರೆ ಪ್ರಧಾನಿ ನರೇಂದ್ರ ಮೋದಿ

• ಉದಯವಾಹಿನಿ, ಮಂಡ್ಯ

ಸಕ್ಕರೆ ಜಿಲ್ಲೆ ಮಂಡ್ಯಕ್ಕೆ ಮತ್ತೊಮ್ಮೆ ಪ್ರಧಾನಿ ನರೇಂದ್ರ ಮೋದಿ ಭೇಟಿ ನಿಗದಿಯಾಗಿದೆ. ಮಂಡ್ಯದಲ್ಲಿ ಮೂರು ವರ್ಷಗಳ ಹಿಂದೆ ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ಹೈವೇ ಉದ್ಘಾಟಿಸಿದ್ದ ಪ್ರಧಾನಿ ಮೋದಿ ಅವರು, ಇದೀಗ ಧಾರ್ಮಿಕ ಕಾರ್ಯಕ್ರಮಕ್ಕಾಗಿ ಏ.15ರಂದು ಆದಿಚುಂಚನಗಿರಿ ಶ್ರೀ ಕ್ಷೇತ್ರಕ್ಕೆ ಬರಲಿದ್ದಾರೆ.ಮೊದಲ ಬಾರಿಗೆ ಜಿಲ್ಲೆಗೆ ಬಂದಿದ್ದ ಅವರು, ಉಳಿದೆರಡು ಬಾರಿಯೂ ಪ್ರಧಾನಿಯಾಗಿದ್ದ ಬಂದಿರುವುದು ವಿಶೇಷವಾಗಿದೆ. ಜತೆಗೆ, ಎರಡು ಬಾರಿ ಜಿಲ್ಲೆಗೆ ಭೇಟಿ ನೀಡುತ್ತಿರುವ ಪ್ರಧಾನಿ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ.

ಮೊದಲ ಬಾರಿಗೆ ಚುನಾವಣಾ ಪ್ರಚಾರಕ್ಕಾಗಿ ಬಂದಿದ್ದ ಅವರು, ಎರಡನೇ ಭೇಟಿಯು ಅಭಿವೃದ್ಧಿ ಯೋಜನೆಯಉದ್ಘಾಟನೆಯಾಗಿತ್ತು. ಈಗ ಮೂರನೆಯದು ಧಾರ್ಮಿಕ ಭೇಟಿಯಾಗಿದೆ. ಪ್ರಧಾನಿ ಮೋದಿ ಭೇಟಿ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾಪೊಲೀಸ್ ಇಲಾಖೆ ಸಂಪೂರ್ಣ ಜಾಗೃತಗೊಂಡಿದ್ದು, ಆದಿಚುಂಚನಗಿರಿ ಶ್ರೀ ಕ್ಷೇತ್ರದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಹಾಕಲಾಗಿದೆ. 2004ರ ವಿಧಾನಸಭೆ ಚುನಾವಣೆ ವೇಳೆ ಪ್ರಚಾರಕ್ಕಾಗಿ ಗುಜರಾತ್ ಮುಖ್ಯಮಂತ್ರಿಯಾಗಿದ್ದ ಮೋದಿ ಅವರು ಬಂದಿದ್ದರು. ಬಿಜೆಪಿ ಅಭ್ಯರ್ಥಿಯಾಗಿದ್ದ ಡಾ.ಮಹೇಶ್‌ಚಂದ್ ಪರವಾಗಿ ಅರ್ಧ ಗಂಟೆಗೂ ಹೆಚ್ಚು ಕಾಲ ಮಾತನಾಡಿದ್ದರು. 2023ರ ಮಾ. 12ರಂದು ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ಹೈವೇ ಉದ್ಘಾಟಿಸಿದ್ದರು. ಅಂದು ಮಂಡ್ಯದಲ್ಲಿ ರೋಡ್ ಶೋ ನಡೆಸಿದ್ದ ಪ್ರಧಾನಿ ಅವರು, ಮಂಡ್ಯ ತಾಲ್ಲೂಕು ಹನಕೆರೆಯ ಸೇತುವೆ ಆರಂಭದ ಸ್ಥಳದಲ್ಲಿ ರಿಬ್ಬನ್ ಕತ್ತರಿಸುವ ಮೂಲಕ ಬೆಂಗಳೂರು–ಮೈಸೂರು ರಾಷ್ಟ್ರೀಯ ಎಕ್ಸ್‌ಪ್ರೆಸ್ ಹೈವೇಯನ್ನು ಲೋಕಾರ್ಪಣೆ ಮಾಡಿದ್ದರು. ನಂತರ ಮದ್ದೂರು ತಾಲ್ಲೂಕು ಗೆಜ್ಜಲಗೆರೆ ಕಾಲೋನಿ ಬಳಿ ನಡೆದ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿದ್ದರು.



**ಆದಿಚುಂಚನಗಿರಿಗೆ 15ರಂದು ಪ್ರಧಾನಿ ಮೋದಿ ಭೇಟಿ:** ಮಂಡ್ಯ ಒಕ್ಕಲಿಗರ ಶಕ್ತಿ ಕೇಂದ್ರ, ನಾಥ ಪರಂಪರೆಯ ಇತಿಹಾಸ ಹೊಂದಿರುವ ನಾಗಮಂಗಲ ತಾಲ್ಲೂಕು ಆದಿಚುಂಚನಗಿರಿ ಶ್ರೀ ಕ್ಷೇತ್ರಕ್ಕೆ ಏ.15ರಂದು ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಲಿದ್ದಾರೆ. ಶ್ರೀ ಕ್ಷೇತ್ರದಲ್ಲಿ ನಿರ್ಮಿಸಿ ರುವ ಭೈರವೈಕ್ಯ ಡಾ.ಬಾಲ ಗಂಗಾಧರನಾಥ ಸ್ವಾಮೀಜಿ ಅವರ ಶ್ರೀ ಗುರು ಭೈರವೈಕ್ಯ ಮಂದಿರವನ್ನು ಪ್ರಧಾನಿ ಮೋದಿ ಲೋಕಾರ್ಪಣೆ ಮಾಡುವರು. ಆದಿಚುಂಚನಗಿರಿ ಮಹಾಸಂಸ್ಥಾನ ಮಠ ಶ್ರೀ ಕ್ಷೇತ್ರದಲ್ಲಿ ಏ.10ರಿಂದ 12ರವರೆಗೆ ಬಾಲಗಂಗಾಧರನಾಥ ಸ್ವಾಮೀಜಿ ಅವರ ಮೂಲ ವಿಗ್ರಹ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮ ಆಯೋಜಿಸಿದೆ. ಇದರ ಅಂಗವಾಗಿ ಭೈರವೈಕ್ಯ ಮಂದಿರದ ಕುಂಭಾಭಿಷೇಕ ಮಹೋತ್ಸವವೂ ನಡೆಯಲಿದೆ. ಇದರ ಭಾಗವಾಗಿ ಏ.15ರಂದು ಭೈರವೈಕ್ಯ ಮಂದಿರವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಉದ್ಘಾಟಿಸಲಿದ್ದಾರೆ.

ಎಕ್ಸ್‌ಪ್ರೆಸ್ ಹೈವೇ ಉದ್ಘಾಟಿಸಿದ್ದ ಪ್ರಧಾನಿ ಮೋದಿ ಅವರು ಇದೀಗ ಧಾರ್ಮಿಕ ಕಾರ್ಯಕ್ರಮಕ್ಕಾಗಿ ಆದಿಚುಂಚನ ಗಿರಿ ಕ್ಷೇತ್ರಕ್ಕೆ ಬರಲಿದ್ದಾರೆ. ಜತೆಗೆ, ಶ್ರೀ ಕ್ಷೇತ್ರಕ್ಕೆ ಭೇಟಿ ನೀಡುತ್ತಿರುವ ಮೊದಲ ಪ್ರಧಾನಿಯಾಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಆದಿಚುಂಚನಗಿರಿ ಕ್ಷೇತ್ರದಲ್ಲಿ ಒಂದು ತಾಸು ಇರಲಿದ್ದಾರೆ. ಏ.15ರಂದು ಬೆಳಗ್ಗೆ 7.15ಕ್ಕೆ ಹೊಸದಿಲ್ಲಿಯ ವಿಶೇಷ ವಿಮಾನದಲ್ಲಿ ಹೊರಡಲಿರುವ ಮೋದಿ 10.05ಕ್ಕೆ ಬೆಂಗಳೂರಿನ ಏರ್‌ಪೋರ್ಟ್‌ಗೆ ಬರಲಿದ್ದಾರೆ.

## ಹುಣಸೂರು: ಪೂರ್ಣಗೊಳ್ಳದ ರೈಲ್ವೆ ಹಳಿ ತಡೆಗೋಡೆ ಯೋಜನೆ

• ಉದಯವಾಹಿನಿ, ಹುಣಸೂರು

ಆನೆ– ಮಾನವ ಸಂಘರ್ಷ ನಿಯಂತ್ರಣಕ್ಕೆ ಸರ್ಕಾರ ದಕ್ಷಿಣ ಆಫ್ರಿಕಾ ಮಾದರಿಯ ರೈಲ್ವೆ ಹಳಿ ತಡೆಗೋಡೆ ಯೋಜನೆಯನ್ನು ರಾಜ್ಯದ ನಾಗರಹೊಳೆ ಅರಣ್ಯದಲ್ಲಿ ಅನುಷ್ಠಾನಗೊಳಿಸಿ ದಶಕ ಕಳೆದರೂ ಪೂರ್ಣಗೊಳ್ಳದೆ ಕಾಡಂಚಿನ ಜನರಿಗೆ ತೊಂದರೆ ಎದುರಾಗಿದೆ. 843 ಚದರ ಕಿ.ಮಿ. ವ್ಯಾಪ್ತಿಯಲ್ಲಿ ಹರಡಿಕೊಂಡಿರುವ ನಾಗರಹೊಳೆ ಅರಣ್ಯದಲ್ಲಿ ಕೆರೆ, ಕಟ್ಟೆ, ಕಪಿಲಾ, ಕಾವೇರಿ ನದಿ ಹಿನ್ನೀರು ಪ್ರದೇಶದೊಂದಿಗೆ ಅಪಾರ ಪ್ರಾಕೃತಿಕ ಸಂಪತ್ತು ಒಳಗೊಂಡಿದೆ. ವನ್ಯಜೀವಿಗಳಿಗೆ ಆಶ್ರಯತಾಣವಾಗಿರುವ ಈ ಅರಣ್ಯದಲ್ಲಿ ದಕ್ಷಿಣ ಭಾರತದಲ್ಲೇ ಅತೀ ಹೆಚ್ಚು ಆನೆ (6,395) ಸಾಂದ್ರತೆ ಹೊಂದಿದೆ. ಅರಣ್ಯದ ಅಂಚಿನಲ್ಲಿ ಕಾಡಾನೆಗಳ ದಾಳಿಯಿಂದ ಜೀವಹಾನಿ ಸಂಭವಿಸುತ್ತಿದೆ. ಕೇಂದ್ರ ಮತ್ತು ರಾಜ್ಯ ಅರಣ್ಯ ಸಚಿವಾಲಯ ನಾಗರಹೊಳೆಯ ವೀರನಹೊಸಹಳ್ಳಿ ವಲಯದಲ್ಲಿ ಪ್ರಥಮ ಬಾರಿಗೆ 2014–15ರಲ್ಲಿ 2 ಕಿ.ಮಿ. ರೈಲ್ವೆ ಹಳಿ ತಡೆಗೋಡೆ ನಿರ್ಮಾಣಕ್ಕೆ ಚಾಲನೆ ನೀಡಿ ಇತಿಹಾಸ ಸೃಷ್ಟಿಸಿತ್ತು. ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ, ಹುಣಸೂರು ಮತ್ತು ಎಚ್.ಡಿ.ಕೋಟೆ ತಾಲ್ಲೂಕು ಹಾಗೂ ಕೊಡಗಿನ ವೀರಾಜಪೇಟೆ ಅರಣ್ಯದಂಚಿನಲ್ಲಿ ಒಟ್ಟು 257 ಕಿ.ಮಿ. ರೈಲ್ವೆ ಹಳಿ ತಡೆಗೋಡೆ ಅಳಡಿಸಲು ಉದ್ದೇಶಿಸಲಾಗಿದ್ದು, 10 ವರ್ಷದಲ್ಲಿ 105 ಕಿ.ಮಿ. ಪೂರ್ಣಗೊಂಡು 20 ಕಿ.ಮಿ. ನಿರ್ಮಾಣ ಹಂತದಲ್ಲಿದೆ. ಅರಣ್ಯ ಇಲಾಖೆ ಅಂಕಿ ಅಂಶದಂತೆ ವೀರನಹೊಸಹಳ್ಳಿ 19.32 ಕಿ.ಮೀ., ಹುಣಸೂರು 18.82 ಕಿ.ಮೀ., ಅಂತರಸಂತೆ 2.8 ಕಿ.ಮೀ., ಮೇಟಿಕುಪ್ಪೆ 25.3 ಕಿ.ಮೀ., ಆನೆಚೌಕೂರು 28 ಕಿ.ಮೀ, ಡಿ.ಬಿ. ಕುಪ್ಪೆ 1.4 ಕಿ.ಮೀ ಹಾಗೂ ಕಲ್ಲಹಳ್ಳ, ನಾಗರಹೊಳೆಯಲ್ಲಿ 2 ಕಿ.ಮೀ ತಡೆಗೋಡೆ ಅಳವಡಿಸಲಾಗಿದೆ. ನಾಗರಹೊಳೆ ಅರಣ್ಯದ ಹುಣಸೂರು ವಲಯದ 6 ಕಿ.ಮೀ. ವೀರಾಜಪೇಟೆ ವ್ಯಾಪ್ತಿಯಲ್ಲಿ 32 ಕಿ.ಮಿ. ಪಿರಿಯಾಪಟ್ಟಣ 30 ಕಿ.ಮೀ. ಹೊಸದಾಗಿ ನಾಗರಹೊಳೆ ಅರಣ್ಯ ವ್ಯಾಪ್ತಿಗೆ ಸೇರಿದ ಬಫರ್ ವಲಯ) ಎಚ್.ಡಿ.ಕೋಟೆ 20ಕಿ.ಮಿ. ವ್ಯಾಪ್ತಿ ಪೂರ್ಣಗೊಳ್ಳಬೇಕಾಗಿದೆ. ★2025–26ನೇ ಸಾಲಿನಲ್ಲಿ ಸರ್ಕಾರ 29 ಕೋಟಿ ಅನುದಾನ ಬಿಡುಗಡೆ ಮಾಡಿದ್ದು, ಈ ಅನುದಾನದಲ್ಲಿ 20.4 ಕಿ.ಮೀ. ರೈಲ್ವೆ ತಡೆಗೋಡೆ, ವೀರಾಜಪೇಟೆ ತಾಲ್ಲೂಕಿನಲ್ಲಿ 7 ಕಿ.ಮೀ., ಪಿರಿಯಾಪಟ್ಟಣ 6 ಕಿ.ಮೀ., ಎಚ್.ಡಿ.ಕೋಟೆ 5.4 ಕಿ.ಮೀ. ಸೇರಿದಂತೆ ವೀರನಹೊಸಹಳ್ಳಿ ವಲಯದಲ್ಲಿ 2.8 ಕಿ.ಮೀ. ರೋಪ್ ಬಾರ್ ಫೆನ್ಸಿಂಗ್ ಅಳವಡಿಸುವ ಕಾಮಗಾರಿ ಪ್ರಗತಿಯಲ್ಲಿದೆ. ಇನ್ನಷ್ಟು ಅನುದಾನ ಬಂದರೆ ಶೀಘ್ರ ಪೂರ್ಣಗೊಳ್ಳಲಿದೆ ಎಂದು ನಾಗರಹೊಳೆ ಹುಲಿ ಯೋಜನಾ ವಿಭಾಗದ ಎ.ಸಿ.ಎಫ್. ಲಕ್ಷ್ಮೀಕಾಂತ್ ಮಾಹಿತಿ ನೀಡಿದರು.

ಉದಯವಾಹಿನಿ ಚಿತ್ರ



## ಪಾತಪಾಳ್ಯ ನಾಡಕಚೇರಿ: ನೆರಳಿನ ವ್ಯವಸ್ಥೆ ಇಲ್ಲದೆ ಬಿಸಿಲಿನಲ್ಲಿ ಬೇಯುತ್ತಿರುವ ಜನರು

# ನಾಡಕಚೇರಿಯು ಅವ್ಯವಸ್ಥೆಯ ಆಗರ

• ಉದಯವಾಹಿನಿ, ಪಾತಪಾಳ್ಯ

ಪ್ರಮುಖ ಹೋಬಳಿ ಕೇಂದ್ರವಾಗಿರುವ ಪಾತಪಾಳ್ಯ ನಾಡಕಚೇರಿಯು ಅವ್ಯವಸ್ಥೆಯ ಆಗರವಾಗಿದೆ. ಸರ್ಕಾರದ ವಿವಿಧ ಸೌಲಭ್ಯಗಳನ್ನು ಪಡೆಯಲು ದಿನನಿತ್ಯ ಬರುವ ನೂರಾರು ಮಂದಿ ಬಿಸಿಲಿನಲ್ಲೇ ಸರತಿ ಸಾಲಿನಲ್ಲಿ ನಿಲ್ಲುವ ಅನಿವಾರ್ಯತೆ ಎದುರಾಗಿದೆ.

ಬೇಸಿಗೆಯ ಬಿಸಿಲು ಹೆಚ್ಚಾಗಿದ್ದು, ಪಾತಪಾಳ್ಯದ ಸುತ್ತಮುತ್ತಲಿನ ಹತ್ತಾರು ಹಳ್ಳಿಗಳಿಂದ ವಿವಿಧ ಸೌಲಭ್ಯ ಪಡೆಯಲು ಬರುವ ರೈತರು, ವೃದ್ಧರು ಮತ್ತು ಮಹಿಳೆಯರು ಗಂಟೆಗಟ್ಟಲೇ ಬಿಸಿಲಿನಲ್ಲೇ ನಿಲ್ಲುವಂತಾಗಿದೆ. ಕಚೇರಿಯಲ್ಲಿ ಸಾರ್ವಜನಿಕರಿಗೆ ಕೂರಲು ಆಸನದ ವ್ಯವಸ್ಥೆ ಇಲ್ಲ. ಕಚೇರಿ ಮುಂಭಾಗದಲ್ಲಿ ಕನಿಷ್ಠ ಒಂದು ಸಣ್ಣ ಚಪ್ಪರ ಅಥವಾ ನೆರಳಿನ ವ್ಯವಸ್ಥೆಯನ್ನೂ ಮಾಡದೆ ಆಡಳಿತ ಮಂಡಳಿ ನಿರ್ಲಕ್ಷ್ಯ ವಹಿಸಿದೆ ಎಂದು ಸ್ಥಳೀಯರು ದೂರುತ್ತಾರೆ.

> **ದಿನವಿಡೀ ಕೆಲಸ ಮಾಡಿದರೆ ನಮಗೆ 500 ಕೂಲಿ ಸಿಗುತ್ತದೆ. ಒಂದು ಸಣ್ಣ ಕೆಲಸಕ್ಕೆ ಇಲ್ಲಿಗೆ ಬಂದರೆ ದಿನದ ಕೂಲಿ ನಷ್ಟವಾಗುತ್ತಿದೆ. ಬಿಸಿಲಿನಲ್ಲಿ ನಿಂತು ಸುಸ್ತಾಗಿ, ಕೊನೆಗೆ ಸರ್ವರ್ ಇಲ್ಲ ನಾಳೆ ಬನ್ನಿ ಎನ್ನುತ್ತಾರೆ. ಬಡವರ ಸಮಯಕ್ಕೆ ಬೆಲೆಯೇ ಇಲ್ಲದಂತಾಗಿದೆ**
>
> **–ಗಂಗಾಧರ್, ಕೂಲಿ ಕಾರ್ಮಿಕ**

ಬೆಳಗ್ಗೆ 10 ಗಂಟೆಗೆ ಕಚೇರಿ ಮುಂದೆ ಸಾಲು ನಿಲ್ಲುವ ಜನರು, ಸರ್ವರ್ ಸಮಸ್ಯೆ ಅಥವಾ ಸಿಬ್ಬಂದಿ ವಿಳಂಬ ಧೋರಣೆಯಿಂದ ಮಧ್ಯಾಹ್ನದವರೆಗೂ ಸುಡುವ ಬಿಸಿಲಿನಲ್ಲೇ ಕಾಯುವ ದುಸ್ಥಿತಿ ಇದೆ. ನಾಡಕಚೇರಿಯು ಕೇವಲ ನೆರಳಿನ ಸಮಸ್ಯೆಯನ್ನಷ್ಟೇ ಅಲ್ಲದೆ, ಇಲ್ಲಿಗೆ ಬರುವ ಜನರಿಗೆ ಕುಡಿಯಲು ಶುದ್ಧ ನೀರಿನ ವ್ಯವಸ್ಥೆಯನ್ನೂ ಮಾಡಿಲ್ಲ. ದೂರದ ಹಳ್ಳಿಗಳಿಂದ ಬರುವವರು ನೀರಿಗಾಗಿ ಅಕ್ಕಪಕ್ಕದ ಹೋಟೆಲ್‌ಗಳು ಅಥವಾ ಅಂಗಡಿಗಳನ್ನೇ ಆಶ್ರಯಿಸಿದ್ದಾರೆ. ಕಚೇರಿ ಆವರಣದಲ್ಲಿ ಸಾರ್ವಜನಿಕ ಶೌಚಾಲಯವಿಲ್ಲ. ಇದರಿಂದಾಗಿ ಮಹಿಳೆಯರು ಮತ್ತು ವಯೋವೃದ್ಧರು ಪ್ರತಿನಿತ್ಯ ಸಂಕಷ್ಟ ಎದುರಿಸುತ್ತಿದ್ದಾರೆ.

ಉದಯವಾಹಿನಿ ಚಿತ್ರ




> **ಬೆಳಗ್ಗೆ 10 ಗಂಟೆಗೆ ಬಂದರೆ ಮಧ್ಯಾಹ್ನ ಆದರೂ ಕೆಲಸವಾಗಲ್ಲ. ಇಲ್ಲಿ ಕುಳಿತುಕೊಳ್ಳಲು ಒಂದು ಬೆಂಚು ಕೂಡ ಇಲ್ಲ. ವಯಸ್ಸಾದವರು ಸುಡುವ ಬಿಸಿಲಿನಲ್ಲಿ ನಿಲ್ಲುವುದು ನೋವಿನ ಸಂಗತಿ**
>
> **–ನಾರಾಯಣಪ್ಪ, ಸ್ಥಳೀಯ ರೈತ**

ಸರ್ಕಾರಿ ಕಚೇರಿಗಳಲ್ಲಿ ಕನಿಷ್ಠ ಸೌಲಭ್ಯಗಳಿರಬೇಕು ಎಂಬ ನಿಯಮವಿದ್ದರೂ, ಇಲ್ಲಿನ ಅಧಿಕಾರಿಗಳು ಮಾತ್ರ ಯಾವುದೂ ತಮಗೆ ಸಂಬಂಧವಿಲ್ಲದಂತೆ ವರ್ತಿಸುತ್ತಿದ್ದಾರೆ ಎಂಬುದು ಸಾರ್ವಜನಿಕರ ಆರೋಪ.

ಕಚೇರಿಯ ಭೌತಿಕ ಸೌಲಭ್ಯಗಳ ಕೊರತೆ ಜತೆಗೆ, ತಾಂತ್ರಿಕ ಸಮಸ್ಯೆಗಳೂ ಜನರ ತಾಳ್ಮೆ ಪರೀಕ್ಷಿಸುತ್ತಿವೆ. ಪದೇ ಪದೇ ಸರ್ವರ್ ಕೈಕೊಡುವುದರಿಂದ ಜಮೀನಿನ ಪಹಣಿ, ಜಾತಿ ಮತ್ತು ಆದಾಯ ಪ್ರಮಾಣಪತ್ರ ಪಡೆಯಲು ಬಂದವರು ಇಡೀ ದಿನ ಕಾದು, ಬರಿಗೈಯಲ್ಲಿ ವಾಪಸ್ ತೆರಳುವಂತಾಗುತ್ತಿದೆ. ಹಳೆಯ ದಾಖಲೆಗಳನ್ನು ಪಡೆಯಲು ಹೋದರೆ, ಸೂಕ್ತ ಸ್ಪಂದನೆ ಸಿಗುತ್ತಿಲ್ಲ ಎಂಬ ಆರೋಪಗಳೂ ಕೇಳಿಬಂದಿವೆ.

> **ಕೆಲಸ ಬಿಟ್ಟು ಬಂದರೆ ಒಂದೂವರೆ ಗಂಟೆಯಾದರೂ ಕ್ಯೂ ಚಲಿಸುತ್ತಿಲ್ಲ. ಚಿಕ್ಕ ಮಕ್ಕಳನ್ನು ಕರೆದುಕೊಂಡು ಬರುವ ತಾಯಂದಿರ ಸ್ಥಿತಿಯಂತೂ ಹೇಳತೀರದು. ಮಕ್ಕಳು ಬಿಸಿಲಿಗೆ ಅಳುತ್ತಿರುತ್ತವೆ. ಅವರಿಗೆ ನೆರಳೂ ಇಲ್ಲ, ಕುಡಿಯಲು ನೀರೂ ಇಲ್ಲ**
>
> **–ಸಾವಿತ್ರಮ್ಮ, ಗೃಹಿಣಿ**

**ಕಚೇರಿಗೆ ಬೀಗ ಪ್ರತಿಭಟನೆ ಬೆದರಿಕೆ:** ಶಾಲಾ–ಕಾಲೇಜುಗಳಿಗೆ ಬೇಸಿಗೆ ರಜೆ ಇದ್ದು, ಶಾಲಾ–ಕಾಲೇಜುಗಳು ಪುನರಾರಂಭ ಆಗುವ ಮೊದಲೇ ಜಾತಿ, ಆದಾಯ ಪ್ರಮಾಣಪತ್ರಗಳನ್ನು ಪಡೆಯಲು ವಿದ್ಯಾರ್ಥಿಗಳ ಪೋಷಕರು ನಾಡಕಚೇರಿಗೆ ಬರುತ್ತಿದ್ದಾರೆ. ಇನ್ನೊಂದೆಡೆ ರೈತರು ಬೆಳೆ ಸಮೀಕ್ಷೆ, ಸಾಲ ಸೌಲಭ್ಯ ಹಾಗೂ ಭೂ ದಾಖಲೆಗಳ ತಿದ್ದುಪಡಿಗಾಗಿ ಕಚೇರಿಗೆ ರೈತರು ಬರುತ್ತಿದ್ದಾರೆ. ಆದರೆ, ಯಾವುದೇ ಕೆಲಸಗಳು ಆಗುತ್ತಿಲ್ಲ ಎಂಬುದು ಬಹುತೇಕ ಜನರ ವಾದ.

ಜನಪ್ರತಿನಿಧಿಗಳು ಮತ್ತು ಉನ್ನತ ಅಧಿಕಾರಿಗಳು ಈ ಸಮಸ್ಯೆಯನ್ನು ಬಗೆಹರಿಸಲು ಕೂಡಲೇ ಕ್ರಮ ಕೈಗೊಳ್ಳಬೇಕು. ಜನಸಾಮಾನ್ಯರಿಗೆ ಆಗುತ್ತಿರುವ ತೊಂದರೆ ತಪ್ಪಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಬೀಗ ಹಾಕಿ ಪ್ರತಿಭಟನೆ ನಡೆಸುವುದಾಗಿ ಜನರು ಎಚ್ಚರಿಕೆ ನೀಡಿದರು.

# ಶ್ರೀರಂಗಪಟ್ಟಣ ತಾಲ್ಲೂಕಿನ ಗ್ರಾಪಂನಲ್ಲಿ ಎರಡು ಕೋಟಿ ರೂ.ಗೂ ಅಧಿಕ ಅಕ್ರಮ

• ಉದಯವಾಹಿನಿ, ಮಂಡ್ಯ

ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ 21 ಗ್ರಾಮ ಪಂಚಾಯಿತಿಗಳು ಸಾರ್ವಜನಿಕರಿಂದ ಸಂಗ್ರಹಿಸಿದ ತೆರಿಗೆ ಹಣದಲ್ಲಿ 2,83,34,944 ರೂ. ಹಣವನ್ನು ಗ್ರಾಮ ಪಂಚಾಯಿತಿ ನಿಧಿಗೆ ಜಮೆ ಮಾಡದೇ ಅಧಿಕಾರಿಗಳೇ ದುರುಪಯೋಗಪಡಿಸಿಕೊಂಡಿರುವ ಪ್ರಕರಣ ಲೋಕಾಯುಕ್ತ ತನಿಖೆಯಿಂದ ಬಹಿರಂಗೊಂಡಿದೆ.

1994–95ನೇ ಸಾಲಿನಿಂದ 2024–25ನೇ ಸಾಲಿನವರೆಗೆ ಸ್ಥಳೀಯ ಲೆಕ್ಕ ಪರಿಶೋಧನಾ ವರದಿಗಳ ಪ್ರಕಾರ ಗ್ರಾಮ ಪಂಚಾಯಿತಿಗಳು ಜನರಿಂದ ಪಡೆದ ತೆರಿಗೆ ಹಣವನ್ನು ಗ್ರಾಮ ಪಂಚಾಯಿತಿ ನಿಧಿಗೆ ಜಮಾ ಮಾಡದಿರುವುದು ಕಂಡುಬಂದಿದೆ. ಈ ಹಣವನ್ನು ಅಧಿಕಾರಿಗಳೇ ದುರ್ಬಳಕೆ ಮಾಡಿಕೊಂಡು ಸರ್ಕಾರಕ್ಕೆ ನಷ್ಟ ಉಂಟುಮಾಡಿರುವುದಾಗಿ ಲೋಕಾಯುಕ್ತ ತನಿಖಾ ತಂಡ ವರದಿಯಲ್ಲಿ ತಿಳಿಸಿದೆ.

ಕಿರಂಗೂರು ಮೋಹನ್‌ಕುಮಾರ್ ಅವರು ಕಿರಂಗೂರು ಗ್ರಾಪಂನಲ್ಲಿ 2 ಎಕರೆ 33 ಗುಂಟೆ ಜಮೀನನ್ನು ವಾಣಿಜ್ಯ ಉದ್ದೇಶಕ್ಕೆ ಅನ್ಯಕ್ರಾಂತ ಮಾಡಿಸಿಕೊಂಡಿದ್ದಾರೆ. ಇದರಲ್ಲಿ ಅಕ್ರಮವಾಗಿ ವಸತಿ ಬಡಾವಣೆ ಉದ್ದೇಶಕ್ಕೆ ನಕಲಿ ಬಹು ವಿನ್ಯಾಸ ನಕ್ಷೆ ತಯಾರಿಸಿ ಕಿರಂಗೂರು ಗ್ರಾಪಂನಿಂದ ಇ–ಸ್ವತ್ತುಗಳನ್ನು ಕೊಟ್ಟಿದ್ದಾರೆ ಎಂದು ಆರೋಪಿಸಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಿಗೆ ದೂರು ಸಲ್ಲಿಸಿದ್ದರು. ದೂರು ಅರ್ಜಿಯಲ್ಲಿನ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿದ್ದರಿಂದ ಲೋಕಾಯುಕ್ತ ಪೊಲೀಸರಿಗೆ ಉಪ ಲೋಕಾಯುಕ್ತ ಬಿ.ವೀರಪ್ಪ ಅವರು ತಾಪಂ ಕಾರ್ಯನಿರ್ವಹಣಾಧಿಕಾರಿ ಕಚೇರಿ, ಶ್ರೀರಂಗಪಟ್ಟಣ ತಾಲ್ಲೂಕು ಕಚೇರಿ ಹಾಗೂ ಕಿರಂಗೂರು ಗ್ರಾಪಂ ಕಚೇರಿಯನ್ನು ಶೋಧನೆ ನಡೆಸಲು ವಾರೆಂಟ್ ಹೊರಡಿಸಿದ್ದರು.

ಉದಯವಾಹಿನಿ ಚಿತ್ರ



ಶ್ರೀರಂಗಪಟ್ಟಣ ತಾಲ್ಲೂಕು ಕಚೇರಿ ಶೋಧನೆ ಮಾಡಲು ಲೋಕಾಯುಕ್ತ ಪೊಲೀಸ್ ಇನ್ಸ್‌ಪೆಕ್ಟರ್ ಬಿ.ಪಿ.ಬ್ಯಾಟರಾಯಗೌಡ, ಪೊಲೀಸ್ ಉಪಾಧೀಕ್ಷಕ ಹೆಚ್.ಟಿ.ಸುನೀಲ್‌ಕುಮಾರ್ ನೇತೃತ್ವದ ತಂಡ ಹಾಗೂ ಕಿರಂಗೂರು ಗ್ರಾಪಂ ಕಚೇರಿ ಶೋಧನೆಗೆ ಲೋಕಾಯುಕ್ತ ಪೊಲೀಸ್ ಇನ್ಸ್‌ಪೆಕ್ಟರ್ ಎಂ.ರವಿಕುಮಾರ್, ಆರ್.ಜಿ.ಲೇಪಾಕ್ಷಮೂರ್ತಿ ನೇತೃತ್ವದ ಎರಡು ತಂಡಗಳನ್ನು ರಚಿಸಿಕೊಂಡು ಶೋಧನೆಗಳಿದಾಗ ಅಕ್ರಮಗಳ ಸರಮಾಲೆಗಳು ಬೆಳಕಿಗೆ ಬಂದವು.

ಜಮೀನುಗಳ ವಿನ್ಯಾಸನಕ್ಷೆ ಅನುಮೋದನೆಗೆ ಅರ್ಜಿದಾರರು ಅರ್ಜಿಯನ್ನು ಪಂಚಾಯಿತಿಗೆ ಸಲ್ಲಿಸಿರುವ ಬಗ್ಗೆ ಗ್ರಾಪಂನಿಂದ ತಾಲ್ಲೂಕು ಪಂಚಾಯಿತಿಗೆ ಅನುಮೋದನೆ ಸಂಬಂಧ ಪತ್ರ ವ್ಯವಹಾರ ನಡೆಸಿರುವ ದಾಖಲೆಗಳೇ ಇಲ್ಲ. ಕೇವಲ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಿರುವ ಆದೇಶ ಪ್ರತಿ ಮಾತ್ರ ಕಂಡುಬಂದಿದೆ. ತಾಪಂ ಕಾರ್ಯನಿರ್ವಹಣಾಧಿಕಾರಿಯಾಗಿದ್ದ ವೇಣು ಅರ್ಜಿದಾರರು ಕೋರಿಕೆ ಸಲ್ಲಿಸದಿದ್ದರೂ ವಿನ್ಯಾಸನಕ್ಷೆಗೆ ಅನುಮೋದನೆ ನೀಡಲಾಗಿದೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಸೇರಿದ ಶ್ರೀರಂಗಪಟ್ಟಣ ತಾಲ್ಲೂಕಿನ ಬೆಳಗೊಳ, ಮೊಗರಹಳ್ಳಿ, ಅಣಗನಹಳ್ಳಿ, ಗ್ರಾಮದ ಹಲವಾರು ಸರ್ವೆ ನಂಬರ್‌ಗಳಲ್ಲಿರುವ ಜಮೀನುಗಳಲ್ಲಿ ತಮ್ಮ ಅಧಿಕಾರ ವ್ಯಾಪ್ತಿ ಮೀರಿ ವಿನ್ಯಾಸ ನಕ್ಷೆ ಅನುಮೋದನೆ ಮಾಡಿರುವುದು ಕಂಡುಬಂದಿದೆ.

2022ನೇ ಸಾಲಿನ ಭೂ ಪರಿವರ್ತಿತ ಜಮೀನಿನ ಅನುಮೋದಿತ ವಿನ್ಯಾಸ ನಕ್ಷೆಯ 42 ಕಡತಗಳಲ್ಲಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಮಾಡಿರುವ ಅಂತಿಮ ವಿನ್ಯಾಸ ನಕ್ಷೆ ಅನುಮೋದನೆ ಆದೇಶವನ್ನು ಹೊರತುಪಡಿಸಿ ಯಾವುದೇ ದಾಖಲೆಗಳು ಕಚೇರಿಯಲ್ಲಿ ಕಂಡುಬಂದಿಲ್ಲ. ಸರ್ಕಾರದ ಮಾರ್ಗಸೂಚಿಯಂತೆ ನಿಗದಿತ ವಿಸ್ತೀರ್ಣದಲ್ಲಿ ರಸ್ತೆ, ಉದ್ಯಾನವನ, ಪಾರ್ಕಿಂಗ್ ಗಳನ್ನು ವಿನ್ಯಾಸ ನಕ್ಷೆಯಲ್ಲಿ ಅನುಮೋದಿಸದೆ ಅನುಮೋದನೆ ನೀಡಲಾಗಿದೆ.

ಕಿರಂಗೂರು, ಜಕ್ಕನಹಳ್ಳಿ, ಹೊಸಹಳ್ಳಿ, ಬೆಳಗೊಳ, ಚಿಕ್ಕಅಂಕನಹಳ್ಳಿ, ಕೆ.ಆರ್.ಸಾಗರ, ನೆಲಮನೆ, ನೀಲನಕೊಪ್ಪಲು, ಅಗ್ರಹಾರ, ಕೆ.ಶೆಟ್ಟಹಳ್ಳಿ, ಕಡತನಾಳು, ಬ್ರಹ್ಮಪುರ, ದರಸಗುಪ್ಪೆ, ನಗುವಿನಹಳ್ಳಿ ಗ್ರಾಮದ ನೂರಾರು ಸರ್ವೆ ನಂಬರ್‌ಗಳಲ್ಲಿ ಪಾರ್ಕಿಂಗ್ ಜಾಗ, ಕಾಲುವೆ ಯಾವ ರೀತಿ ಇದೆ, ಬಫರ್‌ಜೋನ್ ಸೇರಿದಂತೆ ಹಲವಾರು ಸರ್ಕಾರಿ ನಿಯಮಗಳನ್ನು ಉಲ್ಲಂಘಿಸಿ ವಿನ್ಯಾಸನಕ್ಷೆ ಅನುಮೋದನೆ ನೀಡಲಾಗಿದೆ. ಹಲವಾರು ಪ್ರಕರಣಗಳಲ್ಲಿ ಏಕ ನಿವೇಶನಕ್ಕೆ ಅನುಮತಿ ಪಡೆಯಲು ಅರ್ಜಿ ಸಲ್ಲಿಸಿ ಬಹು ನಿವೇಶನಗಳ ನಕಾಶೆ ಲಗತ್ತಿಸಿದ್ದರೂ ಅನುಮೋದನೆ ನೀಡಿದೆ. ಹಲವೆಡೆ ವಿವಿಧ ಇಲಾಖೆಗಳಿಂದ ಅನುಮತಿ ಪಡೆದಿಲ್ಲವೆಂದು ತಿಳಿಸಲಾಗಿದೆ.

# ಭ್ರಷ್ಟಾಚಾರ ಆರೋಪ ಬಹಿರಂಗ ಚರ್ಚೆಗೆ ಸಿದ್ಧ

ಉದಯವಾಹಿನಿ ಚಿತ್ರ



• ಉದಯವಾಹಿನಿ, ಮಾಗಡಿ

ಮಾಜಿ ಶಾಸಕ ಎ.ಮಂಜುನಾಥ್ ಮಾಡಿರುವ ಭ್ರಷ್ಟಾಚಾರದ ಆರೋಪ ಕುರಿತು ಬಹಿರಂಗ ಚರ್ಚೆ ನಡೆಸಲು ಮಾಗಡಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪೂಜಾರಿಪಾಳ್ಯ ಕೃಷ್ಣಮೂರ್ತಿ ನೇರ ಸವಾಲು ಹಾಕಿದರು. ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕೃಷ್ಣಮೂರ್ತಿ, ಎ.ಮಂಜುನಾಥ್ ಅವರು ಈ ಹಿಂದೆ ಚರ್ಚೆಗೆ ಸಿದ್ಧ ಎಂದು ಹೇಳಿದ್ದರು. ಆದರೆ, ಇಲ್ಲಿವರೆಗೆ ಯಾವುದೇ ದಿನಾಂಕ ನಿಗದಿಪಡಿಸದ ಕಾರಣ ನಾವೇ ದಿನಾಂಕ ನಿಗದಿ ಮಾಡಿದ್ದೇನೆ. ಏಪ್ರಿಲ್ 25ರಂದು ಬೆಳಗ್ಗೆ 11ಕ್ಕೆ ತಾಲ್ಲೂಕಿನ ಚಕ್ರಬಾವಿ ವಿ.ಎಸ್.ಎಸ್. ಎನ್ ಕಚೇರಿಯಲ್ಲಿ ದಾಖಲೆಗಳೊಂದಿಗೆ ಬರಲಿ ಎಂದು ಹೇಳಿದರು.

600 ಕೋಟಿ ಹಗರಣದ ಆರೋಪ, ಕುದೂರು ಬಿಡಿಸಿಸಿ ಬ್ಯಾಂಕ್ ನಕಲಿ ಚಿನ್ನದ ಪ್ರಕರಣ, ಜಾಗದ ವಿವಾದ, ಮರ ಕಡಿಯುವ ವಿಷಯ ಸೇರಿದಂತೆ ಎಲ್ಲಾ ಆರೋಪಗಳಿಗೆ ಸಂಬಂಧಿಸಿದ ದಾಖಲೆಗಳ ಸಮೇತ ಅವರು ಬರಬೇಕು. ಶಾಸಕ ಬಾಲಕೃಷ್ಣ ಅವರೂ ಅಲ್ಲಿಗೆ ಬಂದು ಪ್ರತಿಯೊಂದು ಪ್ರಶ್ನೆಗೂ ಉತ್ತರ ನೀಡಲಿದ್ದಾರೆ' ಎಂದು ಸ್ಪಷ್ಟಪಡಿಸಿದರು.

ಜೆಡಿಎಸ್ ಮುಖಂಡ ಹಾಗೂ ಬೆಳಗುಂಬ ವಿ.ಎಸ್.ಎಸ್.ಎನ್ ಅಧ್ಯಕ್ಷ ಹೊಸಹಳ್ಳಿ ರಂಗಣಿ ಅವರ ವೈಯಕ್ತಿಕ ಟೀಕೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, 'ರಾಜಕೀಯದಲ್ಲಿ ಗೌರವಯುತವಾಗಿ ನಡೆದುಕೊಳ್ಳಬೇಕು. ಸುಳ್ಳು ಅಪಪ್ರಚಾರ ಮೂಲಕ ಜನರನ್ನು ದಾರಿ ತಪ್ಪಿಸುವುದು ಸರಿಯಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು.

'ನಾನು ಹಿಂದೆ ಬಾಲಕೃಷ್ಣ ಅವರ ಪರವಾಗಿ ಚುನಾವಣೆ ಮಾಡಿದ್ದೇನೆ. ಮಾಜಿ ಸಚಿವ ಎಚ್.ಎಂ.ರೇವಣ್ಣ ನನಗೆ ರಾಜಕೀಯ ಗುರು. ನಾನು ಕಾಂಗ್ರೆಸ್‌ನಲ್ಲಿ ಮೊದಲೇ ಗುರುತಿಸಿಕೊಂಡಿದ್ದೇನೆ. ರಂಗಣಿ ನನ್ನನ್ನು ನಾಯಕರಾಗಿ ಮಾಡಿಲ್ಲ. ಹಿಂದೆ ಎ.ಮಂಜುನಾಥ್ ಅವರ ಜೊತೆ ಇದ್ದಾಗ ಜೆಡಿಎಸ್ ಪರವಾಗಿ ದುಡಿದಿದ್ದೇನೆ. ಅವರ ಜೊತೆ ಇದ್ದಾಗಲೇ ನಾನು ಎಷ್ಟು ಸಾಲ ಮಾಡಿದ್ದೇನೆ ಎಂಬುದು ಎಲ್ಲರಿಗೂ ಗೊತ್ತಿದೆ' ಎಂದರು. 'ನನ್ನ ರಾಸಲೀಲೆ ಬಗ್ಗೆ ಸುಮ್ಮನೆ ಸುಳ್ಳು ಆರೋಪ ಮಾಡಿದ್ದಾರೆ. ಇನ್ನು ಮುಂದೆ ಹೀಗೆ ಸುಳ್ಳು ಆರೋಪ ಮಾಡಿದರೆ ನೇರವಾಗಿ ಅವರ ವಿರುದ್ಧ ದಾಖಲೆ ಸಮೇತ ಬಹಿರಂಗಪಡಿಸಲು ಸಿದ್ಧನಿದ್ದೇನೆ' ಎಂದರು.

# ಎಚ್‌ಪಿವಿ ಲಸಿಕೆ; ಬಂಜೆತನದ ಅಪಪ್ರಚಾರ

## ಸರ್ಕಾರದ ಅಭಿಯಾನಕ್ಕೆ ಹಿನ್ನಡೆ ● ಲಸಿಕೆ ಸುರಕ್ಷಿತ, ಯಾವುದೇ ಸಮಸ್ಯೆ ಇಲ್ಲ ● ಲಸಿಕೆ ಪಡೆಯಲು ಹಿಂದೇಟು

• ಉದಯವಾಹಿನಿ, ಕೋಲಾರ

ಮಹಿಳೆಯರನ್ನು ಕಾಡುವ ಗರ್ಭಕಂಠ ಕ್ಯಾನ್ಸರ್ ತಡೆಗಟ್ಟಲು ಮುನ್ನೆಚ್ಚರಿಕೆ ಕ್ರಮವಾಗಿ ಕೇಂದ್ರ ಸರ್ಕಾರವು ಆರಂಭಿಸಿರುವ ಎಚ್‌ಪಿವಿ ಲಸಿಕೆ ಅಭಿಯಾನಕ್ಕೆ ಕೆಲವರ ಅಪಪ್ರಚಾರದಿಂದ ಜಿಲ್ಲೆಯಲ್ಲಿ ಹಿನ್ನಡೆಯಾಗಿದೆ ಪರಿಣಮಿಸಿದೆ. ಮುಂದೆ ಬಂಜೆತನ ಬರಬಹುದು ಎಂದು ಕೆಲವರು ಅಪಪ್ರಚಾರ ಮಾಡುತ್ತಾ ಲಸಿಕೆ ಪಡೆಯಲು ಹಿಂದೇಟು ಹಾಕುತ್ತಿದ್ದಾರೆ. ಹೀಗಾಗಿ, ಜಿಲ್ಲೆಯಲ್ಲಿ ನಿಗದಿತ ಗುರಿ ಮುಟ್ಟಲು ಸಾಧ್ಯವಾಗುತ್ತಿಲ್ಲ. 14 ರಿಂದ 15 ವರ್ಷ ವಯಸ್ಸಿನ ಹೆಣ್ಣು ಮಕ್ಕಳಿಗೆ ಕೋಲಾರ ಸೇರಿದಂತೆ ದೇಶದಾದ್ಯಂತ ಸರ್ಕಾರದ ಎಲ್ಲಾ ಆಸ್ಪತ್ರೆಗಳಲ್ಲಿ ಎಚ್‌ಪಿವಿ ಲಸಿಕೆಯನ್ನು ಮೂರು ತಿಂಗಳು ಉಚಿತವಾಗಿ ನೀಡಲಾಗುತ್ತಿದೆ. ಜಿಲ್ಲೆಯಲ್ಲಿ ಆರೋಗ್ಯ ಇಲಾಖೆ ಹಾಗೂ ಆರ್‌ಸಿಎಚ್ ಘಟಕದಿಂದ ಈ ವರ್ಷ 16,319 ಬಾಲಕಿಯರಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದೆ. ಆದರೆ, ಯೋಜನೆಗೆ ಚಾಲನೆ ಲಭಿಸಿ ಒಂದು ತಿಂಗಳು ಕಳೆದಿದ್ದರೂ ಕೇವಲ 1,447 ಮಂದಿ ಮಾತ್ರ ಪಡೆದಿದ್ದಾರೆ.

ಈ ನಿರಾಸಕ್ತಿಯು ಆರೋಗ್ಯ ಇಲಾಖೆಗೆ ತಲೆನೋವಾಗಿ ಪರಿಣಮಿಸಿದೆ. ಯಾವುದೇ ಸಮಸ್ಯೆ ಆಗಲ್ಲ ಎಂದು ಮನದಟ್ಟು ಮಾಡುವ ಪ್ರಯತ್ನ ನಡೆದಿದೆ. ಇನ್ನೂ ಎರಡು ತಿಂಗಳು ಕಾಲಾವಕಾಶ ಇದ್ದು, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಶ್ರೀನಿವಾಸ್ ಹಾಗೂ ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ.ಚಾರಿಣಿ ನೇತೃತ್ವದಲ್ಲಿ ಅರಿವು ಮೂಡಿಸುವ ಕೆಲಸ ನಡೆದಿದೆ.

ಉದಯವಾಹಿನಿ ಚಿತ್ರ



**ಲಸಿಕೆ ನೀಡುವ ಗುರಿ**

'ಅಪಪ್ರಚಾರ, ಸುಳ್ಳು ಸುದ್ದಿಗಳಿಂದಾಗಿ ಕೆಲವರು ಎಚ್ ಪಿವಿ ಲಸಿಕೆ ಪಡೆಯಲು ಮುಂದಾಗುತ್ತಿಲ್ಲ. ಈ ಲಸಿಕೆಯಿಂದ ಯಾವುದೇ ಸಮಸ್ಯೆ ಅಥವಾ ಅಡ್ಡಪರಿಣಾಮ ಇಲ್ಲ. ಬದಲಾಗಿ ಗರ್ಭಕಂಠ ಕ್ಯಾನ್ಸರ್ ಅನ್ನು ತಡೆಯಬಹುದು. ಅಪಪ್ರಚಾರಕ್ಕೆ ಕಿವಿಗೊಡದೆ, ಯಾವುದೇ ಆತಂಕವಿಲ್ಲದೆ 14 ರಿಂದ 15 ವರ್ಷ ವಯಸ್ಸಿನ ಜಿಲ್ಲೆಯ ಎಲ್ಲಾ ಹೆಣ್ಣು ಮಕ್ಕಳು ಈ ಲಸಿಕೆ ಪಡೆಯಬೇಕು' ಎಂದು ಡಾ.ಚಾರಿಣಿ ತಿಳಿಸಿದರು.

ಈ ಲಸಿಕೆ ಸುರಕ್ಷಿತವಾಗಿದ್ದು, ಕಳೆದ 15 ವರ್ಷಗಳಿಂದ ಜಗತ್ತಿನಾದ್ಯಂತ ಯಶಸ್ವಿಯಾಗಿ ಬಳಕೆಯಲ್ಲಿದೆ. ಈವರೆಗೆ 50 ಕೋಟಿಗೂ ಹೆಚ್ಚು ಡೋಸ್ ನೀಡಲಾಗಿದೆ. ರಾಜ್ಯದಲ್ಲಿ ಲಕ್ಷಕ್ಕೂ ಅಧಿಕ ಮಂದಿ ಲಸಿಕೆ ಪಡೆದಿದ್ದಾರೆ. ಯಾವುದೇ ಗಂಭೀರ ಅಪಾಯ ಇಲ್ಲವೆಂದು ವೈಜ್ಞಾನಿಕ ಅಧ್ಯಯನಗಳು ಹಾಗೂ ವಿಶ್ವ ಆರೋಗ್ಯ ಸಂಸ್ಥೆ ದೃಢಪಡಿಸಿವೆ ಎಂದರು.

ಮಾರ್ಚ್ 9ರಿಂದ ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು, ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ಲಸಿಕೆ ನೀಡಲಾಗುತ್ತದೆ. 14 ರಿಂದ 15 ವರ್ಷ ವಯಸ್ಸಿನ ಹೆಣ್ಣು ಮಕ್ಕಳು ತಮ್ಮ ಪೋಷಕರೊಂದಿಗೆ ತೆರಳಿ ಗುರುತಿನ ಚೀಟಿ, ವಯಸ್ಸಿನ ದಾಖಲೆ ನೀಡಿ ಪಡೆಯಬಹುದಾಗಿದೆ.

ವಿಶ್ವ ಆರೋಗ್ಯ ಸಂಸ್ಥೆಯ ಅಂದಾಜಿನ ಪ್ರಕಾರ ಜಾಗತಿಕವಾಗಿ 6 ಲಕ್ಷ ಹೆಣ್ಣು ಮಕ್ಕಳಲ್ಲಿ ಗರ್ಭಕಂಠ ಕ್ಯಾನ್ಸರ್ ಇರುವ ಪ್ರಕರಣಗಳು ವರದಿಯಾಗಿವೆ. ಹೀಗಾಗಿ, ಎಚ್ ಪಿವಿ ಲಸಿಕೆ ನೀಡಲಾಗುತ್ತಿದೆ.

> **ರಾಜ್ಯದಲ್ಲಿ ಕೆಲವರು ಸಾಮಾಜಿಕ ಜಾಲತಾಣದಲ್ಲಿ ಅಪಪ್ರಚಾರ ಮಾಡುತ್ತಿದ್ದಾರೆ. ಎಚ್‌ಪಿವಿ ಲಸಿಕೆ ಪಡೆದರೆ ಬಂಜೆತನ ಬರುತ್ತದೆ ಎಂಬ ಸುಳ್ಳು ಸುದ್ದಿ ಹರಡುತ್ತಿದ್ದಾರೆ. ಹೀಗಾಗಿ, ಈ ಲಸಿಕೆ ಪಡೆಯಲು ಕೆಲವರು ಭಯಪಡುತ್ತಿದ್ದಾರೆ. ಈ ಸಂಬಂಧ ಸೈಬರ್ ಅಪರಾಧ ಠಾಣೆಯಲ್ಲಿ ಪ್ರಕರಣ ಕೂಡ ದಾಖಲಾಗಿದೆ. ಯಾರೂ ಅಪಪ್ರಚಾರಕ್ಕೆ ಕಿವಿಗೊಡಬಾರದು. ಎಚ್‌ಪಿವಿ ಲಸಿಕೆ ಪಡೆಯುವುದರಿಂದ ಯಾವುದೇ ಸಮಸ್ಯೆ ಇಲ್ಲ. ಬದಲಾಗಿ ಗರ್ಭಕಂಠ ಕ್ಯಾನ್ಸರ್ ಬಾರದಂತೆ ತಡೆಯುತ್ತದೆ, ರಕ್ಷಣೆ ಒದಗಿಸುತ್ತದೆ**
>
> **–ಡಾ.ಚಾರಿಣಿ**
>
> **ಜಿಲ್ಲಾ ಆರ್‌ಸಿಎಚ್ ಅಧಿಕಾರಿ, ಕೋಲಾರ**

### 3 ಸಾವಿರದ ಲಸಿಕೆ ಉಚಿತ

**ಎಚ್‌ಪಿವಿ ಲಸಿಕೆಗೆ ಮಾರುಕಟ್ಟೆಯಲ್ಲಿ 4 ಸಾವಿರ ದರವಿದೆ. ಆದರೆ, ಮೂರು ತಿಂಗಳು ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ನೀಡಲಾಗುತ್ತಿದೆ. ಎಚ್‌ಪಿವಿ ಎಂದರೆ ಹೂಮನ್ ಪ್ಯಾಪಿಲೋಮಾ ವೈರಸ್. ಈ ವೈರಾಣು ಗರ್ಭಕಂಠ ಕ್ಯಾನ್ಸರ್‌ಗೆ ಕಾರಣವಾಗುತ್ತಿದೆ. ಇದು ಲೈಂಗಿಕ ಸಂಪರ್ಕದ ಮೂಲಕ ಹರಡುವಂಥದ್ದು. ತಂಬಾಕು, ಧೂಮಪಾನ ಸೇವನೆ ಮಾಡುವ ಮಹಿಳೆಯರಲ್ಲಿ ಅಪಾಯ ಹೆಚ್ಚಿರುತ್ತದೆ. ದೇಹದಲ್ಲಿ ರೋಗ ನಿರೋಧಕ ಶಕ್ತಿ ಕಡಿಮೆ ಇದ್ದಾಗ ಬೇಗನೇ ಹರಡುತ್ತದೆ.**

# ಮಿನಿ ನ್ಯೂಸ್

## ಕೊಡಗಿನಲ್ಲಿ ಭೀಕರ ರಸ್ತೆ ಅಪಘಾತ ಚಿತ್ರನಟ ಹರೀಶ್ ಸ್ಥಳದಲ್ಲೇ ಸಾವು

• ಉದಯವಾಹಿನಿ, ಮಡಿಕೇರಿ

ತಡರಾತ್ರಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಚಲನಚಿತ್ರ, ಕಿರುತೆರೆ ಸಹ ಕಲಾವಿದ ಹರೀಶ್ (40) ದಾರುಣವಾಗಿ ಸಾವನ್ನಪ್ಪಿರುವ ಘಟನೆ ಕೊಡಗು ಜಿಲ್ಲೆಯ ಕುಶಾಲನಗರ ತಾಲ್ಲೂಕಿನ ಆನೆಕಾಡು ಅರಣ್ಯ ಪ್ರದೇಶದ ಬಳಿ ನಡೆದಿದೆ. ರಾಷ್ಟ್ರೀಯ ಹೆದ್ದಾರಿ 275 ರ ಆನೆಕಾಡು ಸಮೀಪದಲ್ಲಿ ಈ ಭೀಕರ ಅಪಘಾತ ಸಂಭವಿಸಿದೆ. ನಿನ್ನೆ ಕೆಲಸ ಮುಗಿಸಿಕೊಂಡು ತಡರಾತ್ರಿ, ಹರೀಶ್ ಅವರು ಕುಶಾಲನಗರದಿಂದ ತಮ್ಮ ಸ್ವಗ್ರಾಮವಾದ ಹೊಸಕೋಟೆಗೆ ಕಾರಿನಲ್ಲಿ ತೆರಳುತ್ತಿದ್ದರು.

ಈ ವೇಳೆ ರಸ್ತೆ ಬದಿಯಲ್ಲಿ ನಿಂತಿದ್ದ ಟ್ಯಾಂಕರ್‌ಗೆ ಕಾರು ವೇಗವಾಗಿ ಡಿಕ್ಕಿ ಹೊಡೆದಿದೆ. ಟ್ಯಾಂಕರ್‌ಗೆ ಡಿಕ್ಕಿ ಹೊಡೆದ ರಭಸಕ್ಕೆ ಕಾರು ಸಂಪೂರ್ಣವಾಗಿ ನಜ್ಜುಗುಜ್ಜಾಗಿದ್ದು, ಹರೀಶ್ ಅವರು ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ. ಮೃತ ಹರೀಶ್ ಅವರು ಬಹುಮುಖಿ ಪ್ರತಿಭೆಯಾಗಿದ್ದರು. ವೃತ್ತಿಜೀವನದ ಜೊತೆಗೇ ಹಲವು ಕನ್ನಡ ಸಿನಿಮಾಗಳಲ್ಲಿ ಸಹ ಕಲಾವಿದನಾಗಿ, ಕಿರುತೆರೆಯ ಜನಪ್ರಿಯ ಧಾರಾವಾಹಿಗಳಲ್ಲಿ ನಟಿಸುವ ಮೂಲಕ ತಮ್ಮನ್ನು ಗುರುತಿಸಿಕೊಂಡಿದ್ದರು.

## ಮಹಿಳೆ ಮೇಲೆ ಚಿರತೆ ದಾಳಿ ಗಂಭೀರ ಗಾಯ

• ಉದಯವಾಹಿನಿ, ರಾಮನಗರ

ಕೈಲಾಂಚ ಹೋಬಳಿ ಕವಣಾಪುರ ಗ್ರಾಮದ ಕೆಂಪಮ್ಮ ಎಂಬುವರ ಮೇಲೆ ಶನಿವಾರ ಮಧ್ಯಾಹ್ನ ಚಿರತೆ ದಾಳಿ ನಡೆಸಿ ಗಂಭೀರವಾಗಿ ಗಾಯಗೊಂಡಿದ್ದಾರೆ. ಕೆಂಪಮ್ಮ ತಮ್ಮ ತೋಟದಲ್ಲಿ ಕುರಿ ಮೇಯಿಸುತ್ತಿರುವ ಸಂದರ್ಭದಲ್ಲಿ ಕುರಿ ಮೇಲೆ ದಾಳಿ ಮಾಡಿದ ಚಿರತೆಯನ್ನು ಕಂಡು ಗಾಬರಿಯಾಗಿ ಕುರಿ ರಕ್ಷಿಸಲು ಮುಂದಾದಾಗ ಚಿರತೆ ದಾಳಿ ನಡೆಸಿದೆ. ಚಿರತೆ ಸೆರೆ ಹಿಡಿಯಲು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಉದಯವಾಹಿನಿ ಚಿತ್ರ



• ಉದಯವಾಹಿನಿ, ಗುಂಡ್ಲುಪೇಟೆ

**ತಾಲ್ಲೂಕಿನ ತೆರಕಣಾಂಬಿ ಗ್ರಾಮದಲ್ಲಿ ವಾಲ್ಮೀಕಿ ನಾಯಕ ಜನಾಂಗದ ವತಿಯಿಂದ ರಾಮೋತ್ಸವದ ಅಂಗವಾಗಿ ಹನುಮನ ಭಾವಚಿತ್ರವನ್ನು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಗ್ರಾಮದ ಸಿದ್ದಪ್ಪಾಜಿ ದೇವಾಲಯದಿಂದ ಅಲಂಕೃತ ವಾಹನದಲ್ಲಿ ಆಂಜನೇಯನ ಭಾವಚಿತ್ರವನ್ನಿರಿಸಿ ರಾಮಾಯಣದ ಪಾತ್ರಧಾರಿಗಳು, ಜನಪದ ಕಲಾತಂಡಗಳು, ಸತ್ತಿಗೆ ಸುರಾಪಾಣಿ, ಮಂಗಳವಾದ್ಯಗಳ ಜತೆಗೆ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು, ಜನಾಂಗದ ಯುವಕರು, ಮುಖಂಡರು ಇದ್ದರು.**


## ಸೂಲಿಬೆಲೆ ವಿರುದ್ಧ ಕ್ರಮಕ್ಕೆ ಆಗ್ರಹ

• ಉದಯವಾಹಿನಿ, ತುಮಕೂರು

ಮುಸ್ಲಿಂ ಮಹಿಳೆಯರ ಕುರಿತು ಅವಹೇಳನಕಾರಿ, ಧರ್ಮ ದ್ವೇಷ, ಪ್ರಚೋದನಕಾರಿ ಮಾತುಗಳನ್ನು ಆಡಿರುವ ಚಕ್ರವರ್ತಿ ಸೂಲಿಬೆಲೆ ವಿರುದ್ಧ ಕ್ರಮಕ್ಕೈಗೊಳ್ಳುವಂತೆ ಭಾರತ ಕಮ್ಯುನಿಸ್ಟ್ ಪಕ್ಷ (ಸಿಪಿಎಂ) ಒತ್ತಾಯಿಸಿದೆ. 'ಸದಾ ಧರ್ಮ ದ್ವೇಷ ಬಿತ್ತಿ, ಪ್ರಚೋದನಾಕಾರಿಯಾಗಿ ಮಾತನಾಡುತ್ತಾರೆ. ಮತ್ತೆ ಅತ್ಯಂತ ಆಕ್ಷೇಪಾರ್ಹವಾಗಿ ಮುಸ್ಲಿಂ ಮಹಿಳೆಯರ ಕುರಿತು ಮಾತನಾಡಿದ ವಿಡಿಯೋಗಳು ಸಾಮಾಜಿಕ ಜಾಲ ತಾಣದಲ್ಲಿ ಹರಿದಾಡುತ್ತಿವೆ. ರಾಜ್ಯ ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಬೇಕು' ಎಂದು ಸಿಪಿಎಂ ಜಿಲ್ಲಾ ಕಾರ್ಯದರ್ಶಿ ಎನ್.ಕೆ.ಸುಬ್ರಮಣ್ಯ, ನಗರ ಕಾರ್ಯದರ್ಶಿ ಎ.ಲೋಕೇಶ್ ಒತ್ತಾಯಿಸಿದ್ದಾರೆ. ಎಲ್ಲಿಯೂ ಅಸ್ತಿತ್ವದಲ್ಲಿ ಇಲ್ಲದ ಲವ್ ಜಿಹಾದ್ ಹೆಸರಿನಲ್ಲಿ ವಿಷ ಬಿತ್ತಲಾಗುತ್ತಿದೆ. ಸರ್ಕಾರ ತನ್ನ ಎಂದಿನ ಮೃದು ಹಿಂದುತ್ವ ಧೋರಣೆ ಪ್ರದರ್ಶನ ಮಾಡದೆ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದ್ದಾರೆ.

## ಹೆಚ್ಚು ಅಂಕ ಪಡೆದ ಪಿಯು ವಿದ್ಯಾರ್ಥಿಗಳಿಗೆ ಸತ್ಕಾರ

ಉದಯವಾಹಿನಿ ಚಿತ್ರ



• ಉದಯವಾಹಿನಿ, ಕನಕಪುರ

ರೂರಲ್ ಎಜುಕೇಷನ್ ಸೊಸೈಟಿ ಕಲಾವಿಭಾಗದ ವಿದ್ಯಾರ್ಥಿ ವಿಷ್ಣು ಪ್ರಸಾದ್ ಜಿಲ್ಲೆಗೆ ಪ್ರಥಮ ಸ್ಥಾನ ಪಡೆಯುವ ಮೂಲಕ ತಾಲ್ಲೂಕು, ಕಾಲೇಜಿಗೆ ಕೀರ್ತಿ ತಂದಿದ್ದಾರೆ ಎಂದು ಆರ್‌ಇಎಸ್ ಅಧ್ಯಕ್ಷ ಎಚ್.ಕೆ.ಶ್ರೀಕಂಠ ತಿಳಿಸಿದರು. ಇಲ್ಲಿನ ರೂರಲ್ ಎಜುಕೇಷನ್ ಸೊಸೈಟಿ ಆಡಳಿತ ಮಂಡಳಿ ಕಚೇರಿಯಲ್ಲಿ ಪಿಯು ಫಲಿತಾಂಶ ಕುರಿತು ಶುಕ್ರವಾರ ನಡೆಸಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಸುಂಟರದೊಡ್ಡಿ ಕುಗ್ರಾಮದ ವಿಷ್ಣು ಪ್ರಸಾದ್, ಕಲಾ ವಿಭಾಗದಲ್ಲಿ ಶೇಕಡ 98.5ರಷ್ಟು ಫಲಿತಾಂಶ ಪಡೆದು ಜಿಲ್ಲೆಗೆ ಪ್ರಥಮನಾಗಿ ಸಂಸ್ಥೆ ಹಿರಿಮೆಯನ್ನು ಹೆಚ್ಚಿಸಿದ್ದಾರೆ ಎಂದರು. ರೂರಲ್ ಪದವಿ ಪೂರ್ವ ಕಾಲೇಜಿಗೆ ಶೇ86.63 ಫಲಿತಾಂಶ ಬಂದಿದೆ. ಅದರಲ್ಲಿ 58 ಅತ್ಯುನ್ನತ ಶ್ರೇಣಿ, 29 ಮಂದಿ ಪ್ರಥಮ ದರ್ಜೆಯಲ್ಲಿ ಪಾಸಾಗಿದ್ದಾರೆ. ಸಾತನೂರು ಗ್ರಾಮಾಂತರ ಪದವಿಪೂರ್ವ ಕಾಲೇಜಿಗೆ 95.94 ಫಲಿತಾಂಶ ಬಂದಿದೆ. ಅದರಲ್ಲಿ 11 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ, 48 ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾಗಿ ಉತ್ತಮ ಸಾಧನೆ ಮಾಡಿದ್ದಾರೆ ಎಂದು ತಿಳಿಸಿದರು. ಕಾಲೇಜಿನ ಫಲಿತಾಂಶವು ಕಳೆದ ವರ್ಷಕ್ಕಿಂತ ಈ ಬಾರಿ ಶೇ 27ಏರಿಕೆಯಾಗಿದೆ ಎಂದರು. ವಿಷ್ಣು ಪ್ರಸಾದ್ ಕಲಾ ವಿಭಾಗದಲ್ಲಿ 98.5, ಯೋಗೇಶ್ 96.17, ನಿಶೀಲ 96.13, ವಾಣಿಜ್ಯ ವಿಭಾಗದಲ್ಲಿ ನಿಸರ್ಗ 97, ಮದೀನಾ ಭಾನು 96.83, ಹರ್ಷಿತ 96.33 ವಿಜ್ಞಾನ ವಿಭಾಗದಲ್ಲಿ ಚೈತನ್ಯ 94.50, ಶುಭ 94.50 ಚುಡಾಮಣಿ 93.83 ಫಲಿತಾಂಶ ಪಡೆದು ಕಾಲೇಜಿನ ಟಾಪರ್ ಆಗಿದ್ದಾರೆ. ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸತ್ಕರಿಸಲಾಯಿತು.

# ಮನುಷ್ಯರಾಗಿ ಬಾಳಿ, ಮೂಢನಂಬಿಕೆ ಬಿಟ್ಟಾಕಿ: ಸಿದ್ದರಾಮಯ್ಯ

## ಯಾವುದೇ ಧರ್ಮ ದ್ವೇಷ ಮಾಡಲು ಹೇಳುವುದಿಲ್ಲ ಎಲ್ಲರನ್ನೂ ಪ್ರೀತಿಸಿದಾಗಲೇ ಮಾನವ ಸಮಾಜ ನಿರ್ಮಾಣ ಸಾಧ್ಯ

• ಉದಯವಾಹಿನಿ ಕಲಬುರಗಿ

ಜಾತಿ ರಹಿತ ಸಮ-ಸಮಾಜ ನಿರ್ಮಾಣವಾಗಬೇಕಾದರೆ ದ್ವೇಷ ಬಿಟ್ಟು ಎಲ್ಲರು ಪರಸ್ಪರ ಪ್ರೀತಿ ವಿಶ್ವಾಸದೊಂದಿಗೆ ಭಾವೈಕ್ಯತೆಯಿಂದ ಮನುಷ್ಯರಾಗಿ ಬಾಳಬೇಕಿದೆ. ಮೂಢನಂಬಿಕೆ ಬಿಟ್ಟು ವೈಚಾರಿಕತೆ ಬೆಳೆಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಸೂಗೂರ (ಎನ್) ಗ್ರಾಮದಲ್ಲಿ ಮಹಾತ್ಮ ಶ್ರೀ ಶ್ರೀ ಶ್ರೀ ಭೋಜಲಿಂಗೇಶ್ವರ ಸಿದ್ಧ ಸಂಸ್ಥಾನ ಮಠದಿಂದ ಆಯೋಜಿಸಿದ ಶ್ರೀ ಶ್ರೀ ಶ್ರೀ ಭೋಜಲಿಂಗೇಶ್ವರರ ನೂತನ ದೇವಸ್ಥಾನ ಲೋಕಾರ್ಪಣೆ ಮತ್ತು ಮೂರ್ತಿ ಪ್ರತಿಷ್ಠಾಪನೆ, ನೂತನ ಬೆಳ್ಳಿ ರಥೋತ್ಸವ ಚಾಲನೆ ಹಾಗೂ ಕಲ್ಯಾಣ ಮಂಟಪ ಉದ್ಘಾಟಿಸಿ ಮಾತನಾಡಿದರು. ಸಮಾಜದಲ್ಲಿ ಅನೇಕ ಜಾತಿ ಧರ್ಮಗಳಿವೆ, ಅನೇಕ ಭಾಷೆ ಸಂಸ್ಕೃತಿಗಳಿವೆ. ವೈವಿಧ್ಯತೆ ಇರುವ ಸಮಾಜದಲ್ಲಿ ಏಕತೆ ಪ್ರದರ್ಶನ ಮಾಡುವುದು ಅತ್ಯವಶ್ಯಕ. ಯಾವುದೇ ಧರ್ಮ ದ್ವೇಷ ಮಾಡಲು ಹೇಳುವುದಿಲ್ಲ ಎಲ್ಲರನ್ನೂ ಪ್ರೀತಿಸಿದಾಗಲೇ ಮಾನವ ಸಮಾಜ ನಿರ್ಮಾಣ ಸಾಧ್ಯ, ಎಂದ ಅವರು, ಇದೇ ತತ್ವವನ್ನು ಸಾರಿದ ಮತ್ತು ಸತ್ಯದ ಹಾದಿ ತೋರಿದ ಶ್ರೀ ಭೋಜಲಿಂಗೇಶ್ವರ ಮಠ ಸರ್ವ ಧರ್ಮದ ಭಕ್ತ ವೃಂದದ ಉದ್ಧಾರಕ್ಕೆ ಶ್ರಮಿಸುವ ಜಾತ್ಯಾತೀತ ಮಠವಾಗಿ ಬೆಳೆಯಲಿ ಎಂದು ಸಿಎಂ ಸಿದ್ದರಾಮಯ್ಯ ಹಾರೈಸಿದರು.

ಭೋಜಲಿಂಗೇಶ್ವರ ದೇವಾಲಯದ ಶಕ್ತಿ ಜನರಿಗೆ ತಿಳಿಸುವ ಕೆಲಸ ನೀವೆಲ್ಲ ಮಾಡಬೇಕು ಎಂದು ಹೇಳಿದ ಸಿಎಂ, ಬಸವಣ್ಣನವರ ಇವನಾರವ ಇವನಾರವ ಎಂದೆನಿಸದಿರಯ್ಯ ಎನ್ನುವ ವಚನ ಹಾಗೂ ಕನಕದಾಸರ ಕುಲಕುಲವೆಂದು ಹೊಡದಾಡದಿರಿ ಎನ್ನುವ ವಾಣಿಯನ್ನು ಸಿಎಂ ಉಚ್ಚರಿಸಿದರು. ಬಸವಣ್ಣನವರ, ಕನಕದಾಸರ ಶರಣರ, ಸಾಧು ಸಂತರ ಸಮಾನತೆಯ ತತ್ವಗಳು ಇದ್ದರೂ ಕೂಡಾ ಇನ್ನೂ ಜಾತಿ ವ್ಯವಸ್ಥೆ ಹೋಗಿಲ್ಲ. ಇವನಾರವ ಎನ್ನುತ್ತೇವೆ ಹೊರತು ಇವ ನಮ್ಮವ ಎನ್ನುತ್ತಿಲ್ಲ. ಕನಕದಾಸರ ಉಕ್ತಿ ಯಂತೆ ಕುಲದ ಆಚೆಗೆ ನಾವೆಲ್ಲ ಮನುಷ್ಯರಾಗಿ ಬಾಳಬೇಕು ಎಂದು ಕರೆ ನೀಡಿದ ಸಿಎಂ, ಡಾ ಅಂಬೇಡ್ಕರ್ ಅವರ ಆಶಯದಂತೆ ಎಲ್ಲರೂ ಸಮಾನವಾಗಿ ಬಾಳಬೇಕು. ಈ ಎಲ್ಲಾ ತತ್ವಗಳು ಜಾರಿಗೆ ಬರಲು ಪ್ರತಿಯೊಬ್ಬರು ಆಚರಣೆ ಮಾಡಬೇಕು. ಜಾತಿ ವ್ಯವಸ್ಥೆಯ ವಿರುದ್ಧ ಚಾಲನೆ ಸಿಗಬೇಕಂದರೆ ಶಿಕ್ಷಣ ದೊರಕಿದಾಗ ಮಾತ್ರ ಸಮಾನತೆ ಸಿಗುತ್ತದೆ. ದೇವಸ್ಥಾನ ಉದ್ಘಾಟನೆ ನೆರವೇರಿಸಿದ್ದೇನೆ. ಇದು ಸಾರ್ಥಕವಾಗಬೇಕಾದರೆ ನೀವೆಲ್ಲ ಮನುಷ್ಯರಾಗಿ ಬಾಳಬೇಕು ಎಂದರು.

**ವಸತಿ ನಿಲಯ,ಯಾತ್ರಿಕ ನಿವಾಸಕ್ಕೆ ಅನುದಾನ:** ಪೂಜ್ಯ ಹಿರಗಪ್ಪ ತಾತನವರ ಬೇಡಿಕೆಯಂತೆ ಸುಕ್ಷೇತ್ರದಲ್ಲಿ ವಸತಿ ನಿಲಯ ನಿರ್ಮಾಣ ಹಾಗೂ ಭಕ್ತಾದಿಗಳಿಗೆ ಯಾತ್ರಿ ನಿವಾಸ ಸ್ಥಾಪಿಸಲು ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡಲಿದೆ. ಯಾತ್ರಿ ನಿವಾಸಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಅವರು 1 ಕೋಟಿ ರೂ. ಹಣ ನೀಡುವ ಭರವಸೆ ನೀಡಿದ್ದಾರೆ. ವಸತಿ ನಿಲಯ ಪ್ರಾರಂಭಕ್ಕೆ ಸರ್ಕಾರ ಸಹಾಯ ಮಾಡಲಿದೆ ಎಂದು ಭರವಸೆ ನೀಡಿದರು.


ಉದಯವಾಹಿನಿ ಚಿತ್ರ

### ಕರ್ಮಸಿದ್ಧಾಂತವೇ ಶುದ್ಧ ಸುಳ್ಳು. ಅದನ್ನು ನಂಬಬೇಡಿ

**ಜಾತಿ ವ್ಯವಸ್ಥೆ ಸ್ವಲ್ಪ ಕಡಿಮೆಯಾಗಿದೆಯಾದರು ಇನ್ನೂ ಪೂರ್ಣವಾಗಿ ಹೋಗಿಲ್ಲ. ಅದು ತುಂಬಾ ಜಡತ್ವ ಹೊಂದಿದೆ. ಪ್ರತಿಯೊಬ್ಬರು ವೈಚಾರಿಕತೆ ಹಾಗೂ ವೈಜ್ಞಾನಿಕ ಹಿನ್ನೆಲೆಯ ಇರುವ ವಿದ್ಯೆ ಪಡೆದುಕೊಳ್ಳಬೇಕು. ಸಮಾಜದಲ್ಲಿ ಮೂಢನಂಬಿಕೆಗಳ ದಾಸರಾಗಬೇಡಿ. ಬಸವಣ್ಣನವರು ಆ ಕಾಲದಲ್ಲಿಯೇ ಕರ್ಮ ಸಿದ್ಧಾಂತ ತಿರಸ್ಕಾರ ಮಾಡಿದ್ದರು. ಈಗಲೂ ವಿದ್ಯಾವಂತರು ಇದನ್ನು ನಂಬುತ್ತಿರುವುದು ದುರಂತ. ಕರ್ಮಸಿದ್ಧಾಂತವೇ ಶುದ್ಧ ಸುಳು. ಅದನ್ನು ನಂಬಬೇಡಿ ಎಂದರು.**

### ಸರ್ವರನ್ನು ಪ್ರೀತಿಸುವ ಮನೋಭಾವನೆ ಬೆಳೆಸಿಕೊಳ್ಳಬೇಕು

**ಧರ್ಮದ ಹೆಸರಲ್ಲಿ ಜಾತಿಯನ್ನು ಒಡೆದು, ಒಂದು ಧರ್ಮದ ಜನರನ್ನು ಮತ್ತೊಂದು ಧರ್ಮದ ವಿರುದ್ಧ ಎತ್ತಿಕಟ್ಟುವ ಪಟ್ಟಭದ್ರ ಹಿತಾಸಕ್ತಿಗಳು ನಮ್ಮ ನಡುವೆ ಇದ್ದಾರೆ. ನೀವು ಅಂತಹ ಪಟ್ಟಭದ್ರರ ಮಾತು ಕೇಳಬಾರದು. ಸರ್ವರನ್ನು ಪ್ರೀತಿಸುವ ಮನೋಭಾವನೆ ಬೆಳೆಸಿಕೊಳ್ಳಬೇಕು ಮತ್ತು ಒಗ್ಗಟ್ಟಾಗಿರಬೇಕು ಎಂದು ಸಮುದಾಯಕ್ಕೆ ಕರೆ ನೀಡಿದ ಸಿ.ಎಂ. ಅವರು, ಇದನ್ನೆ ಪೂಜ್ಯ ಭೋಜಲಿಂಗೇಶ್ವರ ಹೇಳಿದ್ದಾರೆ ಎಂದು ಪುನರುಚ್ಚರಿಸಿದರು.**

### ಸ್ವಚ್ಛ ಮನಸಿನಿಂದ

**ದೇವಸ್ಥಾನಕ್ಕೆ ಹೋಗಿ ನಮಗೇ ಅಲ್ಲದೇ ಎಲ್ಲರಿಗೂ ಒಳ್ಳೆಯದು ಮಾಡು ಎಂದು ಪ್ರಾರ್ಥಿಸಿದಾಗ ಮಾತ್ರ ಫಲ ಸಿಗುತ್ತದೆ. ಬಸವಣ್ಣ, ಸೂಫಿ, ಸಂತರು ಕೂಡಾ ಇದನ್ನೇ ಪ್ರತಿಪಾದಿಸಿದರು. ಬಸವಣ್ಣ ಕಾಯಕ ಹಾಗೂ ದಾಸೋಹ ಎರಡನ್ನು ಒತ್ತಿ ಹೇಳಿದ್ದಾರೆ. ಎಲ್ಲರೂ ಕಷ್ಟಪಟ್ಟು ದುಡಿಯಬೇಕು. ಹಾಗೆ ಬಂದದನ್ನು ಎಲ್ಲರೂ ಸಮಾನವಾಗಿ ಹಂಚಿಕೊಳ್ಳಬೇಕು. ಕಾಯಕ ಹಾಗೂ ದಾಸೋಹಗಳನ್ನು ಎಲ್ಲರೂ ಮಾಡಬೇಕು. ಕೆಲವರೇ ಮಾಡಿದರೆ ಅಸಮಾನತೆ ಸಮಾಜ ನಿರ್ಮಾಣವಾಗುತ್ತದೆ. ಪ್ರತಿಯೊಬ್ಬರಿಗೆ ಸಮಾನತೆ ಹಾಗೂ ಆರ್ಥಿಕಶಕ್ತಿ ಬಂದಾಗ ಮಾತ್ರ ಸಮಾನತೆ ಬರಲು ಸಾಧ್ಯ -ಸಿಎಂ ಸಿದ್ದರಾಮಯ್ಯ**

## ಪರಿಸರ ಸಂರಕ್ಷಣೆಗೆ ಸಾಮೂಹಿಕ ಜವಾಬ್ದಾರಿ ಅಗತ್ಯ

• ಉದಯವಾಹಿನಿ ಜಮಖಂಡಿ

ಸಹಜ ಸಂಪನ್ಮೂಲಗಳನ್ನು ಮಿತವಾಗಿ ಬಳಸುವುದು ಮತ್ತು ಪರಿಸರವನ್ನು ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ನಿವೃತ್ತ ಪ್ರಾಚಾರ್ಯ ಡಾ. ಎಸ್ಸೆಸ್ ಸುವರ್ಣಖಂಡಿ ಹೇಳಿದರು.

ನಗರದ ವಿಜಯಪುರ ರಸ್ತೆಯ ಪಕ್ಕದಲ್ಲಿರುವ ರೋಟರಿ ಭವನದಲ್ಲಿ ಶುಕ್ರವಾರ ಸಂಜೆ ಸ್ಥಳೀಯ ರೋಟರಿ ಸಂಘ ಆಯೋಜಿಸಿದ್ದ ವಾರದ ಸಭೆಯಲ್ಲಿ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಪರಿಸರ ಸಂರಕ್ಷಣೆ ಕುರಿತು ವಿಶೇಷ ಉಪನ್ಯಾಸ ನೀಡಿದರು. ಮಾನವ ಜೀವನದಲ್ಲಿ ಸರಳತೆ ಅಳವಡಿಸಿಕೊಂಡರೆ ಮಾತ್ರ ಪರಿಸರವನ್ನು ಕಾಪಾಡಲು ಸಾಧ್ಯ. ಅನಗತ್ಯವಾಗಿ ಸಂಪನ್ಮೂಲಗಳನ್ನು ದುರುಪಯೋಗ ಮಾಡದೇ, ಮುಂದಿನ ಪೀಳಿಗೆಗೆ ಸ್ವಚ್ಛ ಪರಿಸರವನ್ನು ಉಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ'' ಎಂದು ಅವರು ಹೇಳಿದರು. ಇದೇ ವೇಳೆ ಪ್ರಾಣಿಜನ್ಯ ವಸ್ತುಗಳ ಅತಿಯಾದ ಬಳಕೆ ತಪ್ಪಿಸುವುದು, ಮರಗಳನ್ನು ನೆಟ್ಟು ಬೆಳೆಸುವುದು ಆಹಾರ, ನೀರು ಹಾಗೂ ಮಣ್ಣು ಮಾಲಿನ್ಯವಾಗದಂತೆ ಜಾಗೃತಿಯಿಂದ ನಡೆದುಕೊಳ್ಳುವುದು ಅಗತ್ಯ ಎಂದು ತಿಳಿಸಿದರು. ರೋಟರಿ ಸಂಘದ ಕಾರ್ಯಕ್ರಮಗಳ ಕುರಿತು ಶ್ರೀಧರ ಕಾಕಂಡಕಿ ಮಾಹಿತಿ ನೀಡಿದರು. ಸಂಘದ ಅಧ್ಯಕ್ಷ ರಾಜಶೇಖರ ಕೋವಳ್ಳಿ ಸ್ವಾಗತಿಸಿದರು. ಸಂತೋಷ ಹಿರೇಮಠ ಅತಿಥಿಗಳನ್ನು ಪರಿಚಯಿಸಿದರು. ಮಹಾದೇವ ಕಂಕಾಳೆ ಕಾರ್ಯಕ್ರಮ ನಿರ್ವಹಿಸಿದರು. ಕಾರ್ಯದರ್ಶಿ ಎಂ.ಎಚ್. ಕಡ್ಲಿಮಟ್ಟಿ ವಂದಿಸಿದರು.


ಉದಯವಾಹಿನಿ ಚಿತ್ರ

## ಪುರಾತನ ಹಸ್ತಪ್ರತಿ, ದಾಖಲೆ ಕಲೆಹಾಕಿ

• ಉದಯವಾಹಿನಿ ಕಾರವಾರ

ಜಿಲ್ಲೆಯಲ್ಲಿ ಲಭ್ಯವಿರುವ ಶತಮಾನಗಳಷ್ಟು ಹಳೆಯ ಹಸ್ತಪ್ರತಿಗಳು, ದಾಖಲೆಗಳ ಬಗ್ಗೆ ಮಾಹಿತಿ ಸಂಗ್ರಹಿಸಬೇಕು. ಅವುಗಳನ್ನು ರಕ್ಷಿಸಿ, ವ್ಯವಸ್ಥಿತ ರೀತಿಯಲ್ಲಿ ದಾಖಲೀಕರಣಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಅಧಿಕಾರಿಗಳಿಗೆ ಸೂಚಿಸಿದರು.

ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಹಸ್ತಪ್ರತಿಗಳ ಸಂರಕ್ಷಣೆ ಕುರಿತು ಸಭೆ ನಡೆಸಿದ ಅವರು. ಪುರಾತತ್ವ ಇಲಾಖೆ ವತಿಯಿಂದ ಹಳೆಯ ಹಸ್ತಪ್ರತಿಗಳು, ದಾಖಲೆಗಳನ್ನು ಸಂಗ್ರಹಿಸುವ ಕೆಲಸ ಸಾಗಿದೆ. ಇದಕ್ಕೆ ಜಿಲ್ಲೆಯಲ್ಲಿಯೂ ಲಭ್ಯವಿರುವ ಹಸ್ತಪ್ರತಿಗಳನ್ನು ಒದಗಿಸುವ ಕೆಲಸವಾಗಬೇಕು. ಇಲಾಖೆ ಸಂಗ್ರಹಿಸಿದ ಹಸ್ತಪ್ರತಿಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಉದ್ದೇಶದಿಂದ ಅವುಗಳನ್ನು ವೈಜ್ಞಾನಿಕವಾಗಿ ಡಿಜಟಲೈಸೇಷನ್ ಮಾಡುವ ಕಾರ್ಯ ನಡೆಯಲಿದೆ ಎಂದರು. ಐತಿಹಾಸಿಕ ಪ್ರದೇಶಗಳು, ಧಾರ್ಮಿಕ ಸ್ಥಳಗಳು ಮತ್ತು ಬಸದಿಗಳಿಗೆ, ಮುಜರಾಯಿ ಇಲಾಖೆ, ಪ್ರವಾಸೋದ್ಯಮ ಇಲಾಖೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗ್ರಂಥಾಲಯ ಇಲಾಖೆಯ ಅಧಿಕಾರಿಗಳನ್ನು ಒಳಗೊಂಡ ತಂಡ ಭೇಟಿ ನೀಡಿ ಪರಿಶೀಲಿಸಿ ವರದಿ ನೀಡುವಂತೆ ನಿರ್ದೇಶನ ನೀಡಿದರು.

ಸಭೆಯಲ್ಲಿ ವರ್ಚುವಲ್ ಮೂಲಕ ಹಾಜರಿದ್ದ ಸ್ವರ್ಣವಲ್ಲಿ ಮಠದ ಕೃಷ್ಣ ಜೋಷಿ ಮತ್ತು ಗೋಕರ್ಣ ಸಂಸ್ಕೃತ ಕಾಲೇಜಿನ ಪ್ರಾಚಾರ್ಯರು ತಮ್ಮ ಮಠಗಳು ಮತ್ತು ಕಾಲೇಜು ವ್ಯಾಪ್ತಿಯಲ್ಲಿಯೂ ಪುರಾತನ ತಾಳೆಗರಿಯ ಹಸ್ತಪ್ರತಿಗಳಿದ್ದು ಅವುಗಳನ್ನು ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಪರಿಶೀಲಿಸಬಹುದು ಎಂದರು.


ಉದಯವಾಹಿನಿ ಚಿತ್ರ

**ಜಿಲ್ಲೆಯಲ್ಲಿ ಪ್ರಸಿದ್ಧ ರಾಜ ಮನೆತನಗಳು ಆಳ್ವಿಕೆ ನಡೆಸಿವೆ. ಧಾರ್ಮಿಕ ಪರಂಪರೆಗಳ ಇತಿಹಾಸವೂ ಇದೆ. ಇದರಿಂದ ಬಹು ಅಪರೂಪದ, ಅಮೂಲ್ಯ ಪುರಾತತ್ವ ದಾಖಲೆಗಳು ಜಿಲ್ಲೆಯಲ್ಲಿರುವ ಸಾಧ್ಯತೆ ಇದೆ. ಅವುಗಳನ್ನು ಪತ್ತೆ ಮಾಡಬೇಕು. ಗ್ರಾಮೀಣ ಪ್ರದೇಶದ ಮನೆಗಳಲ್ಲಿ ಲಭ್ಯವಿರುವ ತಾಳೆಗರಿ, ಇತರ ಹಸ್ತಪ್ರತಿಗಳ ಬಗ್ಗೆ ಮಾಹಿತಿ ಕಲೆಹಾಕುವ ಕೆಲಸ ಆಗಬೇಕು.-ಡಿಸಿ**

## ಸಾಮೂಹಿಕ ರಾಜೀನಾಮೆಗೆ ಮುಂದಾದ ಮುಸ್ಲಿಂ ಮುಖಂಡರು

• ಉದಯವಾಹಿನಿ ದಾವಣಗೆರೆ

ವಿಧಾನಪರಿಷತ್ ಸದಸ್ಯ ಕೆ. ಅಬ್ದುಲ್ ಜಬ್ಬಾರ್ ಅವರನ್ನು ಪಕ್ಷ ನಿರ್ಲಕ್ಷಿಸುತ್ತಿದೆ ಎಂದು ಆರೋಪಿಸಿ ಕೆಪಿಸಿಸಿ ಅಲ್ಪಸಂಖ್ಯಾತರ ಘಟಕದ ನಾಲ್ವರು ಪದಾಧಿಕಾರಿಗಳು ಹಾಗೂ ಕಾಂಗ್ರೆಸ್ ಜಿಲ್ಲಾ ಅಲ್ಪಸಂಖ್ಯಾತರ ಘಟಕದ ಪದಾಧಿಕಾರಿಗಳು ಸಾಮೂಹಿಕ ರಾಜೀನಾಮೆ ನೀಡುವುದಾಗಿ ಘೋಷಿಸಿದ್ದಾರೆ.

ಕೆಪಿಸಿಸಿ ಅಲ್ಪಸಂಖ್ಯಾತರ ಘಟಕದ ಉಪಾಧ್ಯಕ್ಷ ಮೊಹಮ್ಮದ್ ಸಿರಾಜ್, ಕಾರ್ಯದರ್ಶಿಗಳಾದ ಅಬ್ದುಲ್ ಗನಿ ತಾಹೀರ್, ಹುಸೇನ್ ಉಕ್ಕಡಗಾತ್ರಿ, ಉಬೇದುಲ್ಲಾ ಅತ್ತರ್, ಕಾಂಗ್ರೆಸ್ ಜಿಲ್ಲಾ ಅಲ್ಪಸಂಖ್ಯಾತರ ಘಟಕದ ಕಾರ್ಯಾಧ್ಯಕ್ಷ ಎ. ಅಬ್ದುಲ್ ಜಬ್ಬಾರ್, ಪ್ರಧಾನ ಕಾರ್ಯದರ್ಶಿ ಆಸಿಫ್ ಜುನ್ನೈದಿ ಸೇರಿ ಹಲವು ಪದಾಧಿಕಾರಿಗಳು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರಿಗೆ ರಾಜೀನಾಮೆ ಸಲ್ಲಿಸಲು ಮುಂದಾಗಿದ್ದಾರೆ.

ಕ್ಷೇತ್ರದಲ್ಲಿ ಪ್ರಭಾವಿ ನಾಯಕರಾಗಿರುವ ಕೆ. ಅಬ್ದುಲ್ ಜಬ್ಬಾರ್ ಅವರಿಗೆ ಉಪಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯ ಪರವಾಗಿ ಕೆಲಸ ಮಾಡುವಂತೆ ಯಾರೊಬ್ಬರೂ ಆಹ್ವಾನ ನೀಡಲಿಲ್ಲ. ಇದರಿಂದ ಮನನೊಂದು ಅವರು ಕೆಪಿಸಿಸಿ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಸ್ಥಾನಕ್ಕೆ ಏ.3ರಂದು ರಾಜೀನಾಮೆ ಸಲ್ಲಿಸಿದ್ದರು. ಉಪಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗೆ ತೊಂದರೆಯಾಗಬಾರದು ಎಂಬ ಕಾರಣಕ್ಕೆ ಮತದಾನ ಮುಗಿಯುವವರೆಗೂ ಬಹಿರಂಗಪಡಿಸಿರಲಿಲ್ಲ ಎಂದು ಮಾಹಿತಿ ನೀಡಿದರು. ಜಬ್ಬಾರ್ ಅವರು ಕೆಪಿಸಿಸಿ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರಾಗಿ 5 ವರ್ಷಗಳಿಂದ ಅತ್ಯುತ್ತಮ ಕೆಲಸ ಮಾಡಿದ್ದಾರೆ. 2023ರಲ್ಲಿ ಪಕ್ಷ ಅಧಿಕಾರಕ್ಕೆ ಬರುವಲ್ಲಿ ಇವರ ಪಾತ್ರ ಪ್ರಮುಖವಾಗಿದೆ. ಸಮುದಾಯದ ಮತಗಳು ಹೆಚ್ಚಾಗಿರುವ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರಿಗೆ ಟಿಕೆಟ್ ಕೇಳಿರುವುದನ್ನೇ ತಪ್ಪು ಎಂಬಂತೆ ಬಿಂಬಿಸಲಾಗುತ್ತಿದೆ. ಮತದಾನ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಅವರಿಗೆ ಮಸಿಬಳಿಯುವ ಹುನ್ನಾರಗಳು ನಡೆಯುತ್ತಿವೆ ಎಂದು ಕಿಡಿಕಾರಿದರು.

ಹಲವು ದಿನ ಕ್ಷೇತ್ರದಲ್ಲಿ ವಾಸ್ತವ್ಯ ಹೂಡಿ ಕೆಲಸ ಮಾಡಿದರೂ ಪ್ರಯೋಜನವಾಗಿಲ್ಲ ಎಂಬ ಹತಾಶೆ ವಿಧಾನಪರಿಷತ್ ಮುಖ್ಯ ಸಚೇತಕ ಸಲೀಂ ಅಹಮ್ಮದ್ ಹಾಗೂ ಶಿವಾಜಿನಗರ ಶಾಸಕ ರಿಜ್ವಾನ್ ಅರ್ಷದ್ ಅವರನ್ನು ಕಾಡುತ್ತಿದೆ. ತಮ್ಮ ವೈಫಲ್ಯ ಮುಚ್ಚಿಕೊಳ್ಳಲು ವಿಧಾನಪರಿಷತ್ ಸದಸ್ಯ ಕೆ.ಅಬ್ದುಲ್ ಜಬ್ಬಾರ್ ಅವರ ಮೇಲೆ ಆರೋಪ ಮಾಡುತ್ತಿದ್ದಾರೆ' ಎಂದು ಕೆಪಿಸಿಸಿ ಅಲ್ಪಸಂಖ್ಯಾತರ ಘಟಕದ ಕಾರ್ಯದರ್ಶಿ ಅಬ್ದುಲ್ ಗನಿ ತಾಹೀರ್ ದೂರಿದರು.



ಉದಯವಾಹಿನಿ ಚಿತ್ರ

**ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಬಳಿಕ ನಡೆಯುತ್ತಿರುವ ಬೆಳವಣಿಗೆಗಳು ಬೇಸರ ಮೂಡಿಸಿವೆ. 40 ವರ್ಷಗಳಿಂದ ಪಕ್ಷಕ್ಕೆ ದುಡಿದ ಕೆ. ಅಬ್ದುಲ್ ಜಬ್ಬಾರ್ ಅವರನ್ನು ನಡೆಸಿಕೊಳ್ಳುತ್ತಿರುವ ರೀತಿಯ ಬಗ್ಗೆ ಆಕ್ಷೇಪಗಳಿವೆ. ಪದಾಧಿಕಾರಿಗಳ ಹುದ್ದೆಗೆ ರಾಜೀನಾಮೆ ನೀಡಿ, ಪಕ್ಷದ ಕಾರ್ಯಕರ್ತರಾಗಿ ಮುಂದುವರಿಯಲಿದ್ದೇವೆ'**
**-ಮೊಹಮ್ಮದ್ ಸಿರಾಜ್, ಕೆಪಿಸಿಸಿ ಅಲ್ಪಸಂಖ್ಯಾತರ ಘಟಕದ ಉಪಾಧ್ಯಕ್ಷ**

## ನೀರಿನ ಅರ್ಥಪೂರ್ಣ ಬಳಕೆಯಾಗಲಿ

• ಉದಯವಾಹಿನಿ ಕಡೂರು

ಪ್ರಕೃತಿಯಲ್ಲಿ ಲಭ್ಯವಿರುವ ನೀರಿನ ಅರ್ಥಪೂರ್ಣ ಉಪಯೋಗ ಮತ್ತು ಬಳಸಿದ ನೀರಿನ ಮರು ಬಳಕೆಗೆ ಕೃಷಿಕರು ಮುಂದಾಗಬೇಕು ಎಂದು ಮಾಜಿ ಸಚಿವ ಜೆಸಿ. ಮಾಧುಸ್ವಾಮಿ ಕರೆ ನೀಡಿದರು.

ಸಮ್ಮೇಳನದಲ್ಲಿ ಆಧುನಿಕ ಕೃಷಿ ಮತ್ತು ನೀರಾವರಿ ವಿಷಯವಾಗಿ ನಡೆದ ಗೋಷ್ಠಿಯಲ್ಲಿ ಬಯಲು ಸೀಮೆಗೆ ನೀರಾವರಿಯ ಸಾಧ್ಯತೆಗಳು' ವಿಷಯವಾಗಿ ಅವರು ಮಾತನಾಡಿದರು.

ನೀರಿನ ಸದ್ಬಳಕೆ ಆಗದಿದ್ದರೆ ಕೃಷಿ ಮತ್ತು ನೀರಾವರಿ ಎರಡೂ ವಿಷಯಗಳಲ್ಲಿ ನಾವು ವಿಫಲರಾಗುತ್ತೇವೆ. ನೀರಾವರಿ ಲಭ್ಯವಾದ ಸಂದರ್ಭದಲ್ಲಿಯೂ ಕಡಿಮೆ ನೀರು ಬಳಸುವ ಬೆಳೆಗಳಿಗೆ ಒತ್ತು ನೀಡಬೇಕು. ನೀರಿನ ಪೋಲು ಕಡಿಮೆಯಾದರೆ ಮುಂದಿನ ಪೀಳಿಗೆಗೆ ಸಂಪನ್ಮೂಲ ಉಳಿಸಿದಂತೆ. ಆದ್ದರಿಂದ ರೈತರು ಆಲೋಚನೆ ಮಾಡಿ ಮುಂದುವರೆಯಿರಿ. ನೀರಿನ ದುರ್ಬಳಕೆ ತಪ್ಪಿಸಿ ಅದರ ಉಳಿವು ಕೂಡ ನಮ್ಮ ಜವಾಬ್ದಾರಿಯಾಗಿದೆ ಎಂದರು. ಹರಿಯುವ ನೀರನ್ನು ನಿಲ್ಲಿಸುವ, ನಿಂತ ನೀರನ್ನು ಇಂಗಿಸುವ ಹಾಗೂ ಅಂತರ್ಜಲ ಬಳಕೆ ಕಡಿಮೆ ಮಾಡುವ ವಿಧಾನಗಳನ್ನು ಹೆಚ್ಚು ಅಳವಡಿಸಿಕೊಳ್ಳಬೇಕು. ಆ ಮೂಲಕ ಭೂಮಿಯನ್ನು ಹಸಿರಾಗಿಸುವ, ತಾಪಮಾನವನ್ನು ತಗ್ಗಿಸುವ ಕೆಲಸ ಮಾಡಲು ಮುಂದಾಗಬೇಕು. ಸರ್ಕಾರಗಳು ನೀರಾವರಿಯ ಸಾಮರ್ಥ್ಯ ಹೆಚ್ಚಿಸುವ ಬಗ್ಗೆ ಕ್ರಮ ವಹಿಸಿದವೇ ಹೊರತು ಸದ್ಬಳಕೆ ಬಗ್ಗೆ ದೂರಾಲೋಚನೆ ಮಾಡದಿರುವುದು ಇಂದಿನ ಸ್ಥಿತಿಗೆ ಒಂದು ಕಾರಣವಾಗಿದೆ. ನೀರಿನ ಬಳಕೆ ವಿಷಯವಾಗಿ ಇಸ್ರೇಲ್ ನಿಜವಾಗಿಯೂ ಜಗತ್ತಿಗೆ ಮಾರ್ಗದರ್ಶಕ ರಾಷ್ಟ್ರವಾಗಿದ್ದು, ಅಂತರ್ಜಲ ಲಭ್ಯತೆಯ ಬಗ್ಗೆ ಎಲ್ಲೆಡೆ ಅಧ್ಯಯನ ನಡೆಯಲಿ ಎಂದು ಅವರು ಹೇಳಿದರು.



ರಾಯಚೂರಿನ ಕೃಷಿ ತಜ್ಞ ಕವಿತಾ ಮಿಶ್ರ ಮಾತನಾಡಿ, ಕೃಷಿಗೆ ಭೂಮಿ ತಾಯಿಯೇ ಆಧಾರ, ಕೃಷಿ ನಿಜವಾಗಿಯೂ ಮಹಿಳಾ ಪ್ರಧಾನವಾಗಿದ್ದು, ಯುವಜನರು ಕೃಷಿ ಬಗ್ಗೆ ಒಲವು ಮೂಡಿಸಿಕೊಳ್ಳಬೇಕು. ಬಹುಬೆಳೆ ಪದ್ಧತಿಗಳು ರೈತರ ಕೈ ಹಿಡಿಯುವುದಾಗಿದ್ದು, ರೈತರು ಇಂತಹ ವಿಧಾನ ಅಳವಡಿಸಿಕೊಳ್ಳಿ, ಉತ್ಪನ್ನಗಳಿಗೆ ಬೆಲೆ ನಿಗದಿ ಮಾಡಲು ರೈತರಿಗೆ ಅಧಿಕಾರ ಇರಬೇಕು.

ಅಲ್ಪಾವಧಿ, ದೀರ್ಘಾವಧಿ, ಮಧ್ಯಮಾವಧಿ ಮತ್ತು ಅರಣ್ಯ ಕೃಷಿ ಮೂಲಕ ಭೂಮಿಯ ಸದ್ಬಳಕೆ ಮಾಡಲು ಕೃಷಿಕರು ಮುಂದಾಗಬೇಕು. ಕೃಷಿಯಲ್ಲಿ ಕಾರ್ಮಿಕರ ಕೊರತೆ ತಪ್ಪಬೇಕು. ಸ್ತ್ರೀಯರಿಗೆ ಪ್ರೀತಿ ಗೌರವ ತೋರಿಸಲು ಪುರುಷರು ಮುಂದಾಗಬೇಕು ಎಂದು ಕೋರಿದರು.

## ಬಡವರ ಊಟಿಯಲ್ಲಿ ಬಿಸಿಲ ಬೇಗೆ: ಜಲಮೂಲಗಳಲ್ಲಿ ನೀರಿನ ಮಟ್ಟ ಕುಸಿತ

• ಉದಯವಾಹಿನಿ ಹಾಸನ

ಜಿಲ್ಲೆಯಲ್ಲಿ ಬೇಸಿಗೆಯ ತಾಪಮಾನ ದಿನೇ ದಿನೇ ಏರಿಕೆಯಾಗುತ್ತಿದ್ದು, ಉರಿಬಿಸಿಲಿಗೆ ನೆಲವೇ ಸುಡುವಂತಾಗಿದೆ. ಬಡವರ ಊಟಿ ಎಂದೇ ಖ್ಯಾತಿ ಪಡೆದ ಹಾಸನದಲ್ಲಿ ಈ ಬಾರಿಯ ಬಿಸಿಲಿನ ಧಗೆಯಿಂದ ಜನರು ತತ್ತರಿಸುವಂತಾಗಿದೆ.

ಜಿಲ್ಲೆಯಲ್ಲಿ ತಾಪಮಾನ ಈಗಾಗಲೇ 35 ಡಿಗ್ರಿ ಸೆಲ್ಸಿಯಸ್ ತಲುಪಿದ್ದು, ಬೇಸಿಗೆ ಪೂರ್ಣ ಪ್ರಮಾಣದಲ್ಲಿ ಆರಂಭವಾಗುವ ಮುನ್ನವೇ ಬರದ ಆತಂಕ ಹೆಚ್ಚಾಗಿದೆ. ಅರಸೀಕೆರೆ, ಅರಕಲಗೂಡು ಹಾಗೂ ಚನ್ನರಾಯಪಟ್ಟಣದಂತಹ ಬಯಲು ಸೀಮೆ ಪ್ರದೇಶಗಳಲ್ಲಿ ಬಿಸಿಲಿನ ತಾಪ ಇನ್ನಷ್ಟು ತೀವ್ರಗೊಂಡಿದ್ದು, ಕುಡಿಯುವ ನೀರಿನ ಕೊರತೆ ಉಂಟಾಗುವ ಭೀತಿ ವ್ಯಕ್ತವಾಗಿದೆ. ಅರೆ ಮಲೆನಾಡು ಪ್ರದೇಶಗಳಾದ ಬೇಲೂರು, ಆಲೂರು ಹಾಗೂ ಹಾಸನ ತಾಲ್ಲೂಕುಗಳಲ್ಲಿಯೂ ಸಮಾನ ಪರಿಸ್ಥಿತಿ ಇದ್ದು, ಮಲೆನಾಡು ಭಾಗವಾದ ಸಕಲೇಶಪುರದಲ್ಲಿ ಕೃಷಿ ಚಟುವಟಿಕೆಗಳಿಗೆ ನೀರಿನ ಕೊರತೆ ಹೆಚ್ಚುತ್ತಿದೆ. ಜಲಮೂಲಗಳು ದಿನದಿಂದ ದಿನಕ್ಕೆ ಬರಿದಾಗುತ್ತಿವೆ.

**ಕಾಫಿ ಬೆಳೆಗಾರರಿಗೆ ಸಂಕಷ್ಟ:** ಸಕಲೇಶಪುರ, ಬೇಲೂರು ಹಾಗೂ ಆಲೂರು ಭಾಗಗಳಲ್ಲಿ ನೀರಿನ ಕೊರತೆಯಿಂದ ಕಾಫಿ ಬೆಳೆ ಸಂಕಷ್ಟಕ್ಕೆ ಸಿಲುಕಿದೆ. ಮಾರ್ಚ್ ಮತ್ತು ಏಪ್ರಿಲ್ ತಿಂಗಳಲ್ಲಿ ಕಾಫಿಗೆ ಹೆಚ್ಚಿನ ನೀರಿನ ಅಗತ್ಯವಿದ್ದರೂ, ಜಲಮೂಲಗಳು ಒಣಗುತ್ತಿರುವುದು ಬೆಳೆಗಾರರಲ್ಲಿ ಆತಂಕ ಹೆಚ್ಚಿಸಿದೆ. ತೋಟಗಳಲ್ಲಿ ಸ್ಪಿಂಕ್ಲರ್ ಮೂಲಕ ಉಳಿದಿರುವ ಅಲ್ಪ ನೀರನ್ನು ಬಳಸಿಕೊಂಡು ಬೆಳೆ ಉಳಿಸುವ ಪ್ರಯತ್ನ ನಡೆಯುತ್ತಿದೆ.

ಈ ನಡುವೆ ಅಕಾಲಿಕ ಮಳೆಯ ಪರಿಣಾಮವಾಗಿ ಕಾಫಿ ಹೂಗಳು ಮುಂಚಿತವಾಗಿಯೇ ಅರಳಿದ್ದು, ಕಾಯಿ ಕಟ್ಟುವ ಹಂತದಲ್ಲಿ ಮಳೆಯ ಅವಶ್ಯಕತೆ ಇದೆ. ಮಳೆ ಬಾರದಿದ್ದರೆ ಕೃತಕ ನೀರಾವರಿ ಅವಲಂಬನೆ ಅನಿವಾರ್ಯವಾಗಿದ್ದು, ಇದಕ್ಕೂ ನೀರಿನ ಕೊರತೆ ಅಡ್ಡಿಯಾಗುತ್ತಿದೆ. ಬೇಲೂರು ಮತ್ತು ಆಲೂರು ಭಾಗಗಳಲ್ಲಿ ತರಕಾರಿ ಬೆಳೆಗಾರರೂ ನೀರಿನ ಅಭಾವದಿಂದ ಕಂಗಾಲಾಗಿದ್ದಾರೆ. ಬೋರ್‌ವೆಲ್ ಸೇರಿದಂತೆ ವಿವಿಧ ನೀರಿನ ಮೂಲಗಳು ಬರಿದಾಗುತ್ತಿರುವುದು ಸಮಸ್ಯೆಯನ್ನು ಮತ್ತಷ್ಟು ಗಂಭೀರಗೊಳಿಸಿದೆ. ಹಾಸನ ಸೇರಿದಂತೆ ಜಿಲ್ಲೆಯ ಹಲವು ಪಟ್ಟಣಗಳಿಗೆ ಜೂನ್-ಜುಲೈವರೆಗೆ ಕುಡಿಯುವ ನೀರು ಪೂರೈಸಲು ಗೊರೂರಿನ ಹೇಮಾವತಿ ಜಲಾಶಯದಲ್ಲಿ ಸಾಕಷ್ಟು ಸಂಗ್ರಹವಿದೆ ಎಂದು ಜಲಾಶಯದ ಇಂಜಿನಿಯರ್ ತಿಳಿಸಿದ್ದಾರೆ.

# ಆರೋಗ್ಯ ಸಮತೋಲನಕ್ಕೆ ಕ್ರೀಡೆಗಳು ಪೂರಕ: ಈಶ್ವರ ಖಂಡ್ರೆ

## ಡಾ.ಚನ್ನಬಸವ ಪಟ್ಟದ್ದೇವರ 27ನೇ ಸ್ಮರಣೋತ್ಸವ ಮತ್ತು ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ

• ಉದಯವಾಹಿನಿ ಭಾಲ್ಕಿ

ಯುವಕರ ದೈಹಿಕ ಮತ್ತು ಮಾನಸಿಕ ಆರೋಗ್ಯದ ಸಾಮರ್ಥ್ಯ ವೃದ್ಧಿಸಿಕೊಳ್ಳಲು ಕ್ರೀಡೆಗಳು ಅತ್ಯಗತ್ಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು. ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿ, ವಚನ ಜಾತ್ರೆ-2026, ಡಾ.ಚನ್ನಬಸವ ಪಟ್ಟದ್ದೇವರ 27ನೇ ಸ್ಮರಣೋತ್ಸವ ಮತ್ತು ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ತ ಹಿರೇಮಠ ಸಂಸ್ಥಾನ ಮತ್ತು ಅಮೃತ ಮಹೋತ್ಸವ ಸಮಿತಿ ವತಿಯಿಂದ ಆಯೋಜಿಸಿದ್ದ ರಾಷ್ಟ್ರಮಟ್ಟದ ಆಮಂತ್ರಿತ ವಾಲಿಬಾಲ್ ಪಂದ್ಯಾವಳಿ ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಆಧುನಿಕ ಪ್ರಭಾವಕ್ಕೆ ಸಿಲುಕಿ ಯುವಕರು ತಮ್ಮ ಅಮೂಲ್ಯ ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ. ದೇಶದಲ್ಲಿ ಶೇ.30ರಷ್ಟು ಯುವಕರು ದುಶ್ಚಟ ದುರ್ಗುಣಗಳ ದಾಸರಾಗುತ್ತಿದ್ದಾರೆ. ಇನ್ನೂ ಶೇ.30ರಷ್ಟು ಯುವಶಕ್ತಿ ಅತಿಯಾದ ಮೊಬೈಲ್, ಅಂತರ್ಜಾಲ ಬಳಕೆಯಿಂದ ದೈಹಿಕ ಮತ್ತು ಮಾನಸಿಕವಾಗಿ ದುರ್ಬಲರಾಗುತ್ತಿದ್ದಾರೆ ಎಂದು ಕಳವಳ ವ್ಯಕ್ತ ಪಡಿಸಿದರು.

ಇವುಗಳಿಂದ ಹೊರ ಬರಲು ಕ್ರೀಡೆಗಳು ಪೂರಕವಾಗಿವೆ. ಯುವಕರು ಹೆಚ್ಚು ಸಮಯ ಕ್ರೀಡೆಯಲ್ಲಿ ತೊಡಗಿಸಿಕೊಂಡು ತಮ್ಮ ಆರೋಗ್ಯ ಸುಧಾರಣೆ ಜತೆಗೆ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮೆರೆಯಬೇಕು ಎಂದು ತಿಳಿಸಿದರು. ದಿವ್ಯ ಸಾನ್ನಿಧ್ಯ ವಹಿಸಿದ್ದ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ವಾಲಿಬಾಲ್ ಪಂದ್ಯಾವಳಿಯಲ್ಲಿ ನಿರ್ಣಾಯಕರು ಪಾರದರ್ಶಕವಾಗಿ ನಿರ್ಣಯ ನೀಡಿ ಕ್ರೀಡೆ ಸ್ಫೂರ್ತಿ ತೋರಬೇಕು ಎಂದು ತಿಳಿಸಿದರು. ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿ ಮಾತನಾಡಿದರು. ವಾಲಿಬಾಲ್ ಪಂದ್ಯಾವಳಿ ಸಮಿತಿ ಉಪಾಧ್ಯಕ್ಷ ಸತ್ಯವಾನ ವೈರಾಗೆ ಪ್ರಾಸ್ತಾವಿಕವಾಗಿ ಮಾತನಾಡಿದರು.


ಉದಯವಾಹಿನಿ ಚಿತ್ರ

**ಯುವಕರು ದುಶ್ಚಟ ದುರ್ಗುಣಗಳ ದಾಸರಾಗುತ್ತಿದ್ದಾರೆ**

ವಾಲಿಬಾಲ್ ಪಂದ್ಯಾವಳಿ ಸಮಿತಿ ಅಧ್ಯಕ್ಷ ವಿಲಾಸ ಬಕ್ಕಾ ಅಧ್ಯಕ್ಷತೆ ವಹಿಸಿದ್ದರು

ಈ ಸಂದರ್ಭದಲ್ಲಿ ಡಾ.ಚನ್ನಬಸವ ಪಟ್ಟದ್ದೇವರು ಬ್ಯಾಂಕ್‌ನ ಅಧ್ಯಕ್ಷ ಡಿ.ಕೆ.ಸಿದ್ರಾಮ, ತುಮಕೂರು ಸಿಂಡಿಕೇಟ್ ಸದಸ್ಯ ಬಸವರಾಜ ಕನ್ನಾಳೆ, ವಿದ್ಯಾಭಾರತಿ ಪಬ್ಲಿಕ್ ಶಾಲೆಯ ಅಧ್ಯಕ್ಷ ರೋಹಿತ ವೈರಾಗೆ, ಡಾ.ವಸಂತ ಪವಾರ, ರಾಷ್ಟ್ರಮಟ್ಟದ ವಾಲಿಬಾಲ್ ಪಂದ್ಯಾವಳಿ ಕೋಶಾಧ್ಯಕ್ಷ ಗಣಪತಿ ಬಾವುಗೆ, ಪ್ರಧಾನ ಕಾರ್ಯದರ್ಶಿ ರಂಗರಾವ ಜಾಧವ ಸೇರಿದಂತೆ ಹಲವರು ಇದ್ದರು. ವಾಲಿಬಾಲ್ ಪಂದ್ಯಾವಳಿ ಕೋ-ಆಡಿನೇಟರ್ ಅಶ್ವಿನ ಭೋಸ್ಲೆ ಸ್ವಾಗತಿಸಿದರು. ದೀಪಕ ಠಮಕೆ ನಿರೂಪಿಸಿ, ವಂದಿಸಿದರು. ಡಾ.ಬಸವಲಿಂಗ ಪಟ್ಟದ್ದೇವರು ಅವರು ಬಸವಾದಿ ಶರಣರ ವಿಚಾರಧಾರೆ ಮೈಗೂಡಿಸಿಕೊಂಡು ಈ ಭಾಗದಲ್ಲಿ ಧರ್ಮ ಪ್ರಸಾರದ ಜತೆಗೆ ಸಾಮಾಜಿಕ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ.

### ಭಾಲ್ಕಿ ಕೀರ್ತಿ ರಾಜ್ಯಮಟ್ಟಕ್ಕೆ

**ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಗಡಿ ಜಿಲ್ಲೆ ಬೀದರ್‌ಗೆ ಟಾಪರ್ ಸ್ಥಾನ ಪಡೆದ ಸಾಕ್ಷಿ ಹಣಮಂತ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಸನ್ಮಾನಿಸಿ, ಅಭಿನಂದಿಸಿದರು. ನಂತರ ಮಾತನಾಡಿದ ಅವರು ಕರಡ್ಯಾಳ ಚನ್ನಬಸವೇಶ್ವರ ಗುರುಕುಲ ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರತಿವರ್ಷ ಉತ್ತಮ ಸಾಧನೆ ತೋರುವ ಮೂಲಕ ಭಾಲ್ಕಿ ತಾಲ್ಲೂಕಿನ ಕೀರ್ತಿ ರಾಜ್ಯ ಮತ್ತು ರಾಷ್ಟ್ರಮಟ್ಟಕ್ಕೆ ಕೊಂಡೊಯ್ಯುವ ಪ್ರಯತ್ನ ಮಾಡಲಾಗುತ್ತಿದೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು. ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಮೋಹನ ರೆಡ್ಡಿ, ಪ್ರಾಚಾರ್ಯ ಬಸವರಾಜ ಮೊಳಕೀರೆ ಇದ್ದರು.**

## ಮಿನಿ ನ್ಯೂಸ್

### ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆ ವಿರೋಧಿಸಿ 16ಕ್ಕೆ ರ್‍ಯಾಲಿ

• ಉದಯವಾಹಿನಿ ಶಿವಮೊಗ್ಗ

ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆ ಕೈಬಿಡಲು ಒತ್ತಾಯಿಸಿ ಏ. 16ರಂದು ಬೆಳಗ್ಗೆ 10.30ಕ್ಕೆ ಸೈಕಲ್, ಕಾರ್ ಮತ್ತು ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಸಾಹಸ ಮತ್ತು ಸಂಸ್ಕೃತಿ ಅಕಾಡೆಮಿ ಪ್ರಮುಖ ಅ.ನಾ. ವಿಜಯೇಂದ್ರರಾವ್ ಹೇಳಿದರು. ರಾಷ್ಟ್ರಭಕ್ತರ ಬಳಗದ ನೇತೃತ್ವದಲ್ಲಿ ನಡೆಯಲಿರುವ ಈ ರ್‍ಯಾಲಿಗೆ ವಿವಿಧ ಸಾಮಾಜಿಕ ಹಾಗೂ ಪರಿಸರ ಸಂಘಟನೆಗಳು ಬೆಂಬಲ ಸೂಚಿಸಿವೆ. ಯೋಜನೆಯಿಂದ ಪಶ್ಚಿಮ ಘಟ್ಟ ಪ್ರದೇಶದ ಪರಿಸರ ಹಾಗೂ ಜೀವ ವೈವಿಧ್ಯಕ್ಕೆ ತೀವ್ರ ಹಾನಿಯಾಗಲಿದೆ ಎಂದು ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಆತಂಕ ವ್ಯಕ್ತಪಡಿಸಿದರು. ರೂ.10,700 ಕೋಟಿ ವೆಚ್ಚದ ಈ ಯೋಜನೆಯಿಂದ ರಾಜ್ಯಕ್ಕೆ ಯಾವುದೇ ಸ್ಪಷ್ಟ ಆರ್ಥಿಕ ಲಾಭವಿಲ್ಲ. ಬದಲಾಗಿ ಪರಿಸರ ಹಾನಿಯೇ ಹೆಚ್ಚು ಎಂದು ಸೈಕಲ್ ಕ್ಲಬ್‌ನ ಹಿರಿಯ ಸದಸ್ಯ ಡಾ.ಶೇಖರ್ ಗೌಳೇರ್ ಹೇಳಿದರು.

ರ್‍ಯಾಲಿಯಲ್ಲಿ ಅಂದಾಜು 500 ಬೈಕ್‌ಗಳು, 200 ಕಾರುಗಳು ಮತ್ತು 100 ಸೈಕಲ್‌ಗಳು ಭಾಗವಹಿಸುವ ನಿರೀಕ್ಷೆಯಿದೆ. ಬೈಕ್ ಮತ್ತು ಕಾರು ರ್‍ಯಾಲಿ ಫ್ರೀಡಂ ಪಾರ್ಕ್‌ನಿಂದ ಆರಂಭವಾಗಿ ನಗರದ ಪ್ರಮುಖ ಮಾರ್ಗಗಳಲ್ಲಿ ಸಂಚರಿಸಿ ಮಹಾವೀರ ವೃತ್ತ ತಲುಪಲಿದೆ. ಸೈಕಲ್ ರ್‍ಯಾಲಿ ಲಕ್ಷ್ಮೀ ಟಾಕೀಸ್ ವೃತ್ತ, ಜೈಲ್ ವೃತ್ತ, ದುರ್ಗಿಗುಡಿ ಮಾರ್ಗವಾಗಿ ಮಹಾವೀರ ವೃತ್ತಕ್ಕೆ ಸೇರುವುದಾಗಿ ಆಯೋಜಕರು ತಿಳಿಸಿದರು.

### ಕಾರು ತಡೆದು ದರೋಡೆಗೆ ಯತ್ನ: ಪ್ರಕರಣ

• ಉದಯವಾಹಿನಿ ಸುಳ್ಯ

ಐವರ್ನಾಡಿನಲ್ಲಿ ಕಾರು ನಿಲ್ಲಿಸಿದ ವೇಳೆ ಅಪರಿಚಿತರು ಸುಲಿಗೆಗೆ ಯತ್ನಿಸಿದ ಘಟನೆ ರಾತ್ರಿ ನಡೆದಿದ್ದು, ಬೆಳ್ಳಾರೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ತಮಿಳುನಾಡಿನ ಗುಡಲೂರು ನೀಲ ಗಿರಿಯ ಅರುಣ್ ಕುಮಾರ್ ಎಂಬುವರು ಸುಳ್ಯ ಕಡೆಯಿಂದ ಬೆಳ್ಳಾರೆ ಮಾರ್ಗವಾಗಿ ಮರ್ಧಾಳಕ್ಕೆ ಹೋಗುತ್ತಿದ್ದರು. ರಾತ್ರಿ 12 ಗಂಟೆ ಸುಮಾರಿಗೆ ಐವರ್ನಾಡಿನ ಪುತ್ತಿಲ ತಿರುವಿನಲ್ಲಿ ಕಾರು ನಿಲ್ಲಿಸಿ ಮೂತ್ರ ವಿಸರ್ಜನೆ ಮಾಡಿ ಕಾರಿನ ಹತ್ತಿರ ಬಂದಾಗ ಶಿಳ್ಳೆ ಹಾಕಿದ ಶಬ್ದ ಕೇಳಿದ್ದು, ನಂತರ ಕಾರಿನಲ್ಲಿ ಕುಳಿತುಕೊಂಡಾಗ ಅವರ ಕಾರಿನ ಗ್ಲಾಸ್ ಮೇಲೆ ಕಲ್ಲು ಬಿದ್ದು ಕಾರಿನ ಗ್ಲಾಸ್ ಬಿರುಕುಬಿಟ್ಟಿತ್ತು.

ಆದರೂ ಕಾರನ್ನು ಮುಂದೆ ಚಲಿಸಲು ಪ್ರಯತ್ನಿಸಿದಾಗ ಇಬ್ಬರು ಬೈಕ್‌ನಲ್ಲಿ ಬಂದು ಅರುಣ್ ಅವರ ಶರ್ಟ್ ಕಾಲರ್ ಹಿಡಿದೆಳೆದು ಮುಖದ ಮೇಲೆ ಖಾರದ ಪುಡಿ ಎರಚಿದ್ದು, ಅವರು ತಪ್ಪಿಸಿಕೊಂಡು ಮುಂದೆ ಹೋಗಿ ರಸ್ತೆ ಬದಿ ಇದ್ದವರಲ್ಲಿ ವಿಷಯ ತಿಳಿಸಿದರು. ಅಲ್ಲಿದ್ದವರು ಪೊಲೀಸ್ ವಾಹನಕ್ಕೆ ಕರೆ ಮಾಡಿ ತಿಳಿಸಿದ್ದು, ಪೊಲೀಸರು ಸ್ಥಳಕ್ಕೆ ಬರುವಷ್ಟರಲ್ಲಿ ಅಪರಿಚಿತರು ಪರಾರಿಯಾಗಿದ್ದಾರೆ. ಈ ಬಗ್ಗೆ ಅರುಣ್ ಕುಮಾರ್ ಅವರು ಬೆಳ್ಳಾರೆ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ತನಿಖೆ ನಡೆಸುತ್ತಿರುವುದಾಗಿ ತಿಳಿದು ಬಂದಿದೆ. ಪುತ್ತೂರಿನಿಂದ ತನಿಖೆಯ ವೈಜ್ಞಾನಿಕ ವಿಶ್ಲೇಷಣಾ ತಂಡ ಬೆಳ್ಳಾರೆ ಠಾಣೆಗೆ ಭೇಟಿ ನೀಡಿದೆ.

### ಶಿಸ್ತು ಬಿಜೆಪಿಯ ಮೊದಲ ಸಿದ್ಧಾಂತ

• ಉದಯವಾಹಿನಿ ಮುಂಡರಗಿ

ಬಿಜೆಪಿಯು ಶಿಸ್ತಿನ ಪಕ್ಷವಾಗಿದ್ದು, ಶಿಸ್ತು ಪಕ್ಷದ ಮೊದಲ ಸಿದ್ಧಾಂತವಾಗಿದೆ. ಹೀಗಾಗಿ ಬಿಜೆಪಿ ಕಾರ್ಯಕರ್ತರು ಮೊದಲು ಶಿಸ್ತು ಹಾಗೂ ಸಮಯಕ್ಕೆ ಗೌರವ ನೀಡಬೇಕು ಎಂದು ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನಿರ್ಮಲಾ ಕೊಳ್ಳಿ ತಿಳಿಸಿದರು. ತಾಲ್ಲೂಕಿನ ಡಂಬಳ ಹೋಬಳಿಯ ಪೇಠಾಲೂರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಪಂಡಿತ ದೀನದಯಾಳ ಉಪಾಧ್ಯಾಯ ಅವರ ಪ್ರಶಿಕ್ಷಣ ಮಹಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. ತರಬೇತಿಯ ವಿಷಯವನ್ನು ಪ್ರತಿಯೊಬ್ಬರು ಮನದಟ್ಟು ಮಾಡಿಕೊಳ್ಳಬೇಕು. ಪಕ್ಷದ ಸಂಘಟನಾತ್ಮಕ ದೃಷ್ಟಿಯಿಂದ ಕಾರ್ಯಕರ್ತರಿಗೆ ಚೈತನ್ಯ ಮೂಡಿಸಲು ಪ್ರಶಿಕ್ಷಣವನ್ನು ಪಕ್ಷದ ಎಲ್ಲಾ ಹಂತದ ಕಾರ್ಯಕರ್ತರಿಗೆ ನೀಡಲಾಗುತ್ತದೆ. ಪ್ರಶಿಕ್ಷಣವು ಕಾರ್ಯಕರ್ತರಿಗೆ ದಾರಿ ದೀಪವಾಗಿದ್ದು, ಎಲ್ಲರೂ ಪ್ರಶಿಕ್ಷಣದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಎಂದು ಸಲಹೆ ನೀಡಿದರು.

### ನೀರು ಕುದಿಸಿ, ಆರಿಸಿ ಕುಡಿಯಿರಿ

• ಉದಯವಾಹಿನಿ ಹುಬ್ಬಳ್ಳಿ

ಹುಬ್ಬಳ್ಳಿ-ಧಾರವಾಡ ಮಹಾನಗರಕ್ಕೆ ನೀರು ಸರಬರಾಜು ಮಾಡಲು ರೇಣುಕಾಸಾಗರ ಜಲಸಂಗ್ರಹಗಾರದಲ್ಲಿ ಹೊಸದಾಗಿ ನಿರ್ಮಿಸಿದ 43 ಎಂಎಲ್‌ಡಿ ಜಲಶುದ್ಧೀಕರಣ ಘಟಕದಿಂದ ರಾಯಾಪುರದ ನೆಲಮಟ್ಟದ ಜಲಸಂಗ್ರಹಗಾರದವರೆಗೆ ಹೊಸದಾಗಿ 1219 ಎಂ.ಎಂ ವ್ಯಾಸದ ಶುದ್ಧ ನೀರಿನ ಕೊಳವೆ ಮಾರ್ಗ ಅಳವಡಿಸಿ, ನೀರು ಪೂರೈಕೆಗೆ ಚಾಲನೆ ನೀಡಲಾಗಿದೆ. ಸೋಂಕು ನಿವಾರಕ ಪ್ರಕ್ರಿಯೆ ಮಾಡಿ ನೀರು ಸರಬರಾಜು ಮಾಡಿದರೂ ಹೊಸ ನೀರಿನಲ್ಲಿ ಒಂದು ವಾರದವರೆಗೆ ಪ್ರಕ್ಷುಬ್ಧತೆ ಕಂಡು ಬರುವುದರಿಂದ ಸಾರ್ವಜನಿಕರು ಮುಂಜಾಗ್ರತಾ ಕ್ರಮವಾಗಿ ನೀರನ್ನು ಸೋಸಿ, ಕುದಿಸಿ ಆರಿಸಿ ಕುಡಿಯಬೇಕು ಎಂದು ಕೆಯುಐಡಿಎಫ್‌ಸಿ -ಕುಸ್ಸಂಪ್ ಯೋಜನಾ ಅನುಷ್ಠಾನ ಘಟಕದ ಅಧೀಕ್ಷಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಹುಗ್ರಾಮ ಕೆರೆಗೆ ಅಧಿಕಾರಿಗಳ ಭೇಟಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕಾರಟಗಿ

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಅಗತ್ಯ ಕ್ರಮಕ್ಕೆ ಮುಂದಾಗಿ. ಕುಡಿಯುವ ನೀರಿಗಾಗಿ ನಾಲೆಗೆ ನೀರು ಬಿಟ್ಟಿದ್ದು ಸಮರೋಪಾದಿಯಲ್ಲಿ ತುಂಬಿಸಿ ಎಂದು ಪುರಸಭೆ ಅಧ್ಯಕ್ಷ ಮಂಜುನಾಥ ಮೇಗೂರು, ಮುಖ್ಯಾಧಿಕಾರಿ ಸಾಬಣ್ಣ ಕಟ್ಟಿಕಾರ ಸ್ಥಳದಲ್ಲಿದ್ದ ಸಿಬ್ಬಂದಿಗೆ ಸೂಚಿಸಿದರು.

ಸಮೀಪದ ನಾಗನಕಲ್ ಬಳಿ ಇರುವ ರಾಜೀವಗಾಂಧಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಕೆರೆಗೆ ಅವರು ಭೇಟಿ ನೀಡಿ, ನೀರು ಸಂಗ್ರಹ, ನಿರ್ವಹಣೆ, ಪೂರೈಕೆಯ ಹಂತಗಳನ್ನು ಪರಿಶೀಲಿಸಿದ ಬಳಿಕ ಮಾತನಾಡಿದರು. ಪಟ್ಟಣದ ಕೆಲ ವಾರ್ಡ್‌ಗಳಲ್ಲಿ ನೀರು ಪೂರೈಕೆಯಲ್ಲಿ ತೊಂದರೆಯಾಗುತ್ತಿರುವ ಬಗ್ಗೆ ವರದಿಯಾಗಿದೆ. ಪಟ್ಟಣದ ಸಾರ್ವಜನಿಕರಿಗೆ ತೊಂದರೆಯಾಗದಂತೆ ನೀರು ಸರಬರಾಜು ಮಾಡಲು ಅಧಿಕಾರಿಗಳು, ಸಿಬ್ಬಂದಿ ಸದಾ ಸನ್ನದ್ಧರಾಗಿರಬೇಕು ಎಂದು ಅವರು ಸೂಚಿಸಿದರು. ಪಟ್ಟಣದ ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿ, ಆಹಾರ ತಯಾರಿಕೆ, ಸ್ವಚ್ಛತೆ, ನಿರ್ವಹಣೆ ಪರಿಶೀಲಿಸಿ, ಸಾರ್ವಜನಿಕರಿಂದ ದೂರು ಬಾರದಂತೆ ನೋಡಿಕೊಳ್ಳಿ ಎಂದು ಅಡುಗೆದಾರರಿಗೆ ಮತ್ತು ಅಧಿಕಾರಿಗಳಿಗೆ ತಿಳಿಸಿದರು.

## ದಿನ ಭವಿಷ್ಯ

| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
|---|---|---|
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ಬಹಳಷ್ಟು ವಿಷಯಗಳು ನೀವು ಬಯಸಿದಂತಿರುವ ಹಾಸ್ಯದಿಂದ ತುಂಬಿದ ಒಂದು ದಿನ. ಇಂದು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ.

**ವೃಷಭ** ವ್ಯಾಪಾರಿಗಳಿಗೆ ಇಂದು ವ್ಯಾಪಾರದಲ್ಲಿ ಹಾನಿ ಉಂಟಾಗಬಹುದು ಮತ್ತು ತಮ್ಮ ವ್ಯಾಪಾರವನ್ನು ಉತ್ತಮಗೊಳಿಸಲು ನೀವು ಹಣವನ್ನು ಖಾರುಚು ಮಾಡಬೇಕಾಗುತ್ತದೆ.

**ಮಿಥುನ** ಇಂದು ನೀವು ನಿಮ್ಮ ಅತ್ಯುತ್ತಮ ನಡವಳಿಕೆಯನ್ನು ಹೊಂದಿರಬೇಕು – ಏಕೆಂದರೆ ನಿಮ್ಮ ಪ್ರೇಮಿ ಅಸಮಾಧಾನಗೊಳ್ಳಲು ಹೆಚ್ಚು ಸಮಯ ತೆಗೆದುಕೊಳ್ಳುವುದಿಲ್ಲ. ನಿಮ್ಮ ವಿಶ್ವಾಸ ಬೆಳೆಯುತ್ತಿದೆ.

**ಕರ್ಕಾಟಕ** ಮಾದಕವಸ್ತುವಿನ ಅವಲಂಬನೆ ಹೆಚ್ಚುವ ಸಾಧ್ಯತೆಗಳಿರುವುದರಿಂದ ಸ್ವಯಂ ಔಷಧೋಪಚಾರ ಮಾಡಬೇಡಿ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ.

**ಸಿಂಹ** ಸಂಗಾತಿ ನಿಮ್ಮ ಬಗ್ಗೆ ಗಮನ ಹರಿಸುತ್ತಿಲ್ಲವೆಂದು ನಿಮಗನಿಸಬಹುದು, ಆದರೆ ಕೊನೆಯಲ್ಲಿ ಅವರು ನಿಮಗಾಗಿಯೇ ವ್ಯವಸ್ಥೆಗಳನ್ನು ಮಾಡುತ್ತಿದ್ದರೆಂದು ನಿಮಗೆ ಅರಿವಾಗುತ್ತದೆ.

**ಕನ್ಯಾ** ನಿಮಗೆ ತಿಳಿದ ಜನರ ಮೂಲಕ ಆದಾಯದ ಮೂಲಗಳು ಕಂಡುಬರುತ್ತವೆ. ಕುಟುಂಬ ಸದಸ್ಯರಿಗೆ ಧನಾತ್ಮಕ ಪ್ರಯೋಜನಗಳ ಸಲಹೆಗಳನ್ನು ನೀಡುವ ಮೂಲಕ ನಿಮ್ಮ ಉಪಯುಕ್ತತೆಯ ಬಲವನ್ನು ಅಭಿವೃದ್ಧಿಪಡಿಸಿ.

**ತುಲಾ** ಅನಂತ ಚೈತನ್ಯ , ಉತ್ಸಾಹ ನಿಮ್ಮನ್ನು ಆವರಿಸುತ್ತದೆ, ನೀವು ಯಾವುದೇ ಅವಕಾಶವನ್ನು ನಿಮ್ಮ ಅನುಕೂಲಕ್ಕೆ ಬಳಸಿಕೊಳ್ಳುತ್ತೀರಿ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ.

**ವೃಶ್ಚಿಕ** ನಿಮ್ಮ ಕಣ್ಣೀರನ್ನು ಒಬ್ಬ ವಿಶೇಷ ಸ್ನೇಹಿತ ಒರೆಸಬಹುದು. ಯಾವುದೇ ಹೊಸ ಜಂಟಿ ಯೋಜನೆಗಳು ಮತ್ತು ಪಾಲುದಾರಿಕೆಗಳಿಗೆ ಸಹಿ ಹಾಕಬೇಡಿ. ಸಂತಸದ ಪ್ರಯಾಣ ತೃಪ್ತಿಕರವಾಗಿರುತ್ತದೆ.

**ಧನಸ್ಸು** ನೀವು ದೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಆಶೀರ್ವಾದ ಹಾಗೂ ಅದೃಷ್ಟ ನಿಮ್ಮ ಬಳಿ ಬರುತ್ತಿದ್ದ ಹಾಗೆ ನಿಮ್ಮ ಬಯಕೆಗಳು ಪೂರೈಸಲ್ಪಡುತ್ತವೆ.

**ಮಕರ** ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು.

**ಕುಂಭ** ನಿಮ್ಮ ಪ್ರಚಂಡ ಬೌದ್ಧಿಕ ಸಾಮರ್ಥ್ಯ ಅಂಗವೈಕಲ್ಯದ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಕೇವಲ ಸಕಾರಾತ್ಮಕ ಆಲೋಚನೆಗಳ ಜೊತೆ ಮಾತ್ರ ನೀವು ಈ ಸಮಸ್ಯೆಯ ವಿರುದ್ಧ ಹೋರಾಡಬೇಕು.

**ಮೀನ** ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ. ನಿಮ್ಮ ಪ್ರೀತಿಪಾತ್ರರ ಅತೃಪ್ತಿಗೆ ನಿಮ್ಮ ನಗು ನಿಮ್ಮ ಅತ್ಯುತ್ತಮ ಔಷಧವಾಗಿದೆ.

### ಪ್ರಸ್ತುತ ಸಿಂಗಟಾಲೂರು ಯೋಜನೆಯ ಬ್ಯಾರೇಜ್‌ನ 3.12 ಟಿಎಂಸಿ ನೀರಿನಲ್ಲಿ0.52 ಟಿಎಂಸಿ ನೀರು ಸಂಗ್ರಹ

# ಸಿಂಗಟಾಲೂರು ನೀರಾವರಿ ಯೋಜನೆಯ ನೀರು ಕೃಷ್ಣೆ ಪಾಲು

• ಉದಯವಾಹಿನಿ ಹೂವಿನಹಡಗಲಿ

ರೈತರ ಜೀವನಾಡಿ ಸಿಂಗಟಾಲೂರು ನೀರಾವರಿ ಯೋಜನೆಯ 2 ಟಿಎಂಸಿ ನೀರು ಸದ್ದಿಲ್ಲದೇ ಕೃಷ್ಣೆಗೆ ಹರಿದಿರುವ ಸಂಗತಿ ತಡವಾಗಿ ಬೆಳಕಿಗೆ ಬಂದಿದೆ.

ಕಳೆದ 2003-04ರಲ್ಲಿ ಅಂದಿನ ನೀರಾವರಿ ಸಚಿವರು, ಹಾಲಿ ಕಾನೂನು, ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಸಿಂಗಟಾಲೂರು ನೀರಾವರಿ ಯೋಜನೆಯ 7.62 ಟಿಎಂಸಿ ನೀರು ಬಳಕೆಯನ್ನು ಸಂಪೂರ್ಣ ಪರಿಷ್ಕರಿಸಿ 18 ಟಿಎಂಸಿ ನೀರು ಬಳಕೆಗೆ ಸರಕಾರದಿಂದ ಅನುಮೋದನೆ ಪಡೆದಿದ್ದರು. ಎರಡೂ ದಂಡೆಗಳ ಕೆರೆ ತುಂಬಿಸುವ ಯೋಜನೆಗಳು, ಮಾಲವಿ ಜಲಾಶಯ ತುಂಬಿಸುವುದನ್ನೂ ಹೊರತುಪಡಿಸಿ ಬಲದಂಡೆಗೆ 3 ಟಿಎಂಸಿ, ಎಡದಂಡೆಗೆ 13 ಟಿಎಂಸಿ ನೀರು ಬಳಕೆಗೆ ನಿಗದಿಪಡಿಸಲಾಗಿದೆ. ಉಳಿದ 2 ಟಿಎಂಸಿ ನೀರು ಕಳೆದ 2014-15ರಿಂದ ಈವರೆಗೂ ಎಲ್ಲಿ ಹೋಯಿತು ಎಂಬುದು ಯಕ್ಷ ಪ್ರಶ್ನೆಯಾಗಿದೆ.

ತುಂಗಭದ್ರಾ ಕೃಷ್ಣೆ ಲೆಕ್ಕ

ಬಲ್ಲ ಮೂಲಗಳ ಪ್ರಕಾರ ಅಂದಿನ ಪ್ರಭಾವಿ ಸಚಿವರೊಬ್ಬರು ಕರ್ನಾಟಕದ ಒಟ್ಟು ನೀರು ಬಳಕೆ ಪ್ರಮಾಣದಲ್ಲಿ ಸಿಂಗಟಾಲೂರು ನೀರಾವರಿ ಯೋಜನೆಗೆ 2 ಟಿಎಂಸಿ ನೀರು ಕಡಿತಗೊಳಿಸಿ, ಕೃಷ್ಣಾ ನದಿಯಿಂದ ಹೆಚ್ಚುವರಿ 2 ಟಿಎಂಸಿ ನೀರು ಬಳಸಿಕೊಳ್ಳುವ ಮೂಲಕ ಒಟ್ಟು ಬಳಕೆಯನ್ನು ಲೆಕ್ಕದಲ್ಲಿ ಸರಿದೂಗಿಸಿದ್ದಾರೆ. ಅಂದಿನಿಂದ ಇಂದಿನವರೆಗೂ ತುಂಗಭದ್ರೆ, ಅಥವಾ ಸಿಂಗಟಾಲೂರು ಯೋಜನೆಯ 2 ಟಿಎಂಸಿ ನೀರು ಕೃಷ್ಣೆಯ ಪಾಲಾಗುತ್ತಿದೆ.


ಉದಯವಾಹಿನಿ ಚಿತ್ರ

### ನೀರಾವರಿ ಸೌಲಭ್ಯದಿಂದ ವಂಚಿತ

**ಇತ್ತ ಬಲ ಹಾಗೂ ಎಡದಂಡೆಗಳ ಕುಡಿಯುವ ನೀರು, ಕೆರೆ ತುಂಬಿಸುವ ಯೋಜನೆಗಳು ಸಾಕಷ್ಟಿದ್ದು, ಪ್ರತಿ ಬೇಸಿಗೆಯಲ್ಲಿ ತತ್ವಾರ ಬರುತ್ತಿದೆ. ಕೆರೆಗಳು ಭಣಗುಡುತ್ತಿವೆ. ಅಂದಾಜಿನ ಪ್ರಕಾರ ಸರಕಾರದ ನಿಯಮಾನುಸಾರ ಮಳೆಗಾಲದ ಅವಧಿಯಲ್ಲಿ ಮಾತ್ರ ನದಿಯಿಂದ ವ್ಯರ್ಥವಾಗಿ ಸಮುದ್ರ ಸೇರುವ ನೀರನ್ನು ಕೆರೆ ಹಾಗೂ ಜಲಾಶಯಗಳಿಗೆ ತುಂಬಿಸಿಕೊಳ್ಳಲಾಗುತ್ತಿದೆ. ಮತ್ತೊಂದೆಡೆ ಮೈಲಾರ ಜಾತ್ರೆ ವೇಳೆ ಭದ್ರಾ ಜಲಾಶಯದಿಂದ ನದಿಗೆ ನೀರು ಹರಿಸಿಕೊಳ್ಳಲಾಗುತ್ತಿದೆ. ಯೋಜನೆಯ ಪಾಲಿನ 2 ಟಿಎಂಸಿ ನೀರಿದ್ದರೂ ಬೇರೊಂದು ಜಲಾಶಯದಿಂದ ನೀರು ಪಡೆಯಲಾಗುತ್ತಿದೆ. ಇದರಿಂದ ಯೋಜನೆಯ ಅಚ್ಚುಕಟ್ಟು ಪ್ರದೇಶದ ನೀರು ಬಳಕೆದಾರರು ಸಂಪೂರ್ಣ ನೀರಾವರಿ ಸೌಲಭ್ಯದಿಂದ ವಂಚಿತರಾಗುತ್ತಿದ್ದಾರೆ.**

ಪ್ರಸ್ತುತ ಸಿಂಗಟಾಲೂರು ಯೋಜನೆಯ ಬ್ಯಾರೇಜ್‌ನ 3.12 ಟಿಎಂಸಿ ನೀರಿನಲ್ಲಿ0.52 ಟಿಎಂಸಿ ನೀರು ನಿರಂತರ (ಡೆಡ್ ಸ್ಟೋರೇಜ್ )ಸಂಗ್ರಹವಾಗಿರುತ್ತದೆ. ಉಳಿದ 2.60 ಟಿಎಂಸಿ ನೀರನ್ನು ಎರಡೂ ದಂಡೆಗಳ ಅಂದರೆ ಗದಗ, ವಿಜಯನಗರ ಜಿಲ್ಲೆಯ ಕೆಲ ತಾಲ್ಲೂಕುಗಳ ಕುಡಿಯುವ ನೀರಿಗೆ ಮಾತ್ರ ಬಳಸಿಕೊಳ್ಳಬಹುದಾಗಿದೆ. ಜತೆಗೆ ಡಿಸೆಂಬರ್‌ನಲ್ಲಿ ಮಾತ್ರ ಏಕ ಬೆಳೆಗೆ ನೀರು ಪೂರೈಸಲು ಅವಕಾಶವಿದೆ.

ಕಳೆದ ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿರುವ ಹರಪನಹಳ್ಳಿ ತಾಲ್ಲೂಕಿನ ಗರ್ಭಗುಡಿ ಏತ ನೀರಾವರಿ ಯೋಜನೆ, ಕೊಪ್ಪಳ ಜಿಲ್ಲೆಯ ನವಲಿ ಸಮಾನಾಂತರ ಜಲಾಶಯ ಶೀಘ್ರವೇ ನಿರ್ಮಾಣಗೊಳ್ಳಬೇಕಿದೆ. ಜತೆಗೆ ಗದಗ ಮತ್ತು ವಿಜಯನಗರ ಜಿಲ್ಲೆಗಳ ಜನಪ್ರತಿನಿಧಿಗಳು ಸರಕಾರದಿಂದ ಇನ್ನಷ್ಟು ಬ್ಯಾರೇಜ್‌ಗಳನ್ನು ಮಂಜೂರು ಮಾಡಿಸಿಕೊಳ್ಳುವಲ್ಲಿ ಯತ್ನಿಸಬೇಕಿದೆ. ಇದರಿಂದ ನಮ್ಮ ನೀರು ಅನ್ಯರ ಪಾಲಾಗುವುದನ್ನು ತಪ್ಪಿಸಬೇಕೆಂಬ ಒತ್ತಾಸೆಗಳು ವ್ಯಕ್ತವಾಗಿವೆ.

ನಮ್ಮ ಪಾಲಿನ ನೀರನ್ನು ಲೆಕ್ಕದಲ್ಲಿ ಸರಿದೂಗಿಸಿ, ಕೃಷ್ಣೆಯ ಪಾಲಾಗುವುದು ಈ ಭಾಗದ ಜನಪ್ರತಿನಿಧಿಗಳ ನಿರ್ಲಕ್ಷ್ಯ ಮತ್ತು ಅಧಿಕಾರಿಗಳ ಬೇಜವಾಬ್ದಾರಿಯಾಗಿದೆ. ಕೂಡಲೇ ಈ ಕುರಿತು ಪಾರದರ್ಶಕ ತನಿಖೆ ನಡೆಸಿ ಪರಿಷ್ಕೃತ ಯೋಜನೆಯಂತೆ 18 ಟಿಎಂಸಿ ನೀರು ಬಳಕೆಗೆ ಇಚ್ಛಾಶಕ್ತಿ ಪ್ರದರ್ಶಿಸಬೇಕು ಎಂದಿದ್ದಾರೆ ಜೆ.ಎಂ.ವೀರಸಂಗಯ್ಯ, ರಾಜ್ಯ ಪ್ರಧಾನ ಕಾರ್ಯದರ್ಶಿ, ಕರ್ನಾಟಕ ರಾಜ್ಯ ರೈತ ಸಂಘ (ಹಗರಿಬೊಮ್ಮನಹಳ್ಳಿ), ಬೆಂಗಳೂರು.

### ಹೆಚ್ಚುವರಿ ಜಲಾಶಯ

**ಸಿಂಗಟಾಲೂರು ನೀರಾವರಿಯ ಪರಿಷ್ಕೃತ ಯೋಜನೆಯ ಪ್ರಕಾರ 18 ಟಿಎಂಸಿ ನೀರು ಬಳಕೆಗೆ ಎಲ್ಲಾ ರೀತಿಯಲ್ಲಿ ಹಕ್ಕು ಪ್ರತಿಪಾದಿಸಲಾಗುತ್ತದೆ. ಆದರೆ, 2 ಟಿಎಂಸಿ ನೀರನ್ನು ಕೃಷ್ಣೆಯಿಂದ ಲೆಕ್ಕ ಸರಿದೂಗಿಸುವ ಬದಲು ನದಿಗೆ ಅಲ್ಲಲ್ಲಿ ಹೆಚ್ಚುವರಿ ಸಮಾನಾಂತರ ಜಲಾಶಯ ನಿರ್ಮಿಸಿ ನಮ್ಮ ಪಾಲಿನ ನೀರನ್ನು ಬಳಕೆ ಮಾಡಿಕೊಂಡು ಉಳಿಸಿಕೊಳ್ಳುವ ಇಚ್ಛಾಶಕ್ತಿ ಪ್ರದರ್ಶಿಸಬೇಕಿದೆ.**

## ಕೆಂಭಾವಿಯಲ್ಲಿ ದಸಂಸ ನೂತನ ಹೋಬಳಿ ಘಟಕ ಅಸ್ತಿತ್ವಕ್ಕೆ: ಸಂಚಾಲಕರಾಗಿ ತಿಪ್ಪಣ್ಣ ಬಿ. ಅಗ್ನಿ ಆಯ್ಕೆ

• ಉದಯವಾಹಿನಿ ಕೆಂಭಾವಿ

ಸುರಪುರ ತಾಲ್ಲೂಕಿನ ಕೆಂಭಾವಿ ಪಟ್ಟಣದ ಆನಂದ ಬುದ್ಧ ವಿಹಾರದಲ್ಲಿ ಇಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಸುರಪುರ ತಾಲ್ಲೂಕು ಸಮಿತಿ ವತಿಯಿಂದ ಸರ್ವ ಸದಸ್ಯರ ಸಭೆ ಹಾಗೂ ನೂತನ ಹೋಬಳಿ ಶಾಖೆಯ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಯಶಸ್ವಿಯಾಗಿ ಜರುಗಿತು.

ಸಭೆಯ ಅಧ್ಯಕ್ಷತೆಯನ್ನು ಮಾಳಪ್ಪ ಕಿರದಳ್ಳಿ ಅವರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಂಘಟನೆಯ ಬಲವರ್ಧನೆ ಹಾಗೂ ಮುಂದಿನ ಹೋರಾಟಗಳ ಕುರಿತು ಸುದೀರ್ಘ ಚರ್ಚೆ ನಡೆಸಲಾಯಿತು.



ಉದಯವಾಹಿನಿ ಚಿತ್ರ

**ಕಾರ್ಯಕ್ರಮದ ಪ್ರಮುಖರು:** ಈ ಸಂದರ್ಭದಲ್ಲಿ ರಾಜ್ಯ ಸಂಘಟನಾ ಸಂಚಾಲಕರಾದ ರಾಮಣ್ಣ ಕಲದೇವನಹಳ್ಳಿ, ಹಿರಿಯ ಮುಖಂಡರಾದ ಪರಶುರಾಮ ಬಳಬಟ್ಟಿ, ತಾಲ್ಲೂಕು ಸಂಚಾಲಕರಾದ ಶರಣಪ್ಪ ತಳವಾರಗೇರ, ಜಿಲ್ಲಾ ಸಂಘಟನಾ ಸಂಚಾಲಕರಾದ ಭೀಮರಾಯ ಅಗ್ನಿ, ಭೀಮಶಂಕರ ಸೋಮನಾಳಕರ್, ಬಸವರಾಜ ಪೂಜಾರಿ ಹಾಗೂ ಶರಣಬಸು ವಜ್ಜಲ್ ಉಪಸ್ಥಿತರಿದ್ದರು. ಅಲ್ಲದೆ ಸಮಾಜದ ಮುಖಂಡರಾದ ಶಿವಪ್ಪ ಕಂಬಾರ, ಪಾಂಡುರಂಗ ವಕೀಲರು, ಪ್ರಕಾಶ್ ಮುಷ್ಕಳಿ ಮತ್ತು ಪರಶುರಾಮ ಸಾಸನೂರ ಪಾಲ್ಗೊಂಡು ನೂತನ ಪದಾಧಿಕಾರಿಗಳಿಗೆ ಶುಭ ಹಾರೈಸಿದರು.

ಹೋರಾಟಗಳ ಕುರಿತು ಸುದೀರ್ಘ ಚರ್ಚೆ

**ನೂತನ ಪದಾಧಿಕಾರಿಗಳ ಪಟ್ಟಿ:** ಸಭೆಯಲ್ಲಿ ಸರ್ವಾನುಮತದಿಂದ ಕೆಂಭಾವಿ ಹೋಬಳಿ ಶಾಖೆಗೆ ಈ ಕೆಳಗಿನವರನ್ನು ಆಯ್ಕೆ ಮಾಡಲಾಯಿತು.

**ಹೋಬಳಿ ಸಂಚಾಲಕರು:** ತಿಪ್ಪಣ್ಣ ಬಿ. ಅಗ್ನಿ

**ಖಜಾಂಚಿ:** ಹಣಮಂತ ಅಂಬ್ರಖೇಡ

**ಸಂಘಟನಾ ಸಂಚಾಲಕರು:** ರಾಯಪ್ಪ ಎಂ. ಯತ್ನಾಳ್, ಮಹೇಶ್ ಸಿ. ಕಟ್ಟಿಮನಿ, ಸೈದಪ್ಪ ಕೆ. ಅರಳಗುಂಡಗಿ, ಮಾಳಪ್ಪ ಜಿ. ಯತ್ನಾಳ್, ನಿಂಗಪ್ಪ ಬಿ. ನಡಕೂರ್, ಪರಶುರಾಮು ಎಸ್. ಕಡಕೋಳ, ಮಂಜುನಾಥ ಕೊಂಬಿನ ಅವರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿ, ವಂದನಾರ್ಪಣೆ ಮಾಡಿದರು.

ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳು ಸಂಘಟನೆಯ ತತ್ವ ಸಿದ್ಧಾಂತಗಳ ಅಡಿಯಲ್ಲಿ ಸಮಾಜದ ಏಳಿಗೆಗಾಗಿ ಶ್ರಮಿಸುವುದಾಗಿ ಈ ಸಂದರ್ಭದಲ್ಲಿ ಪ್ರಮಾಣ ಮಾಡಿದರು.

## ನಿಜವಾದ ಮನುಷ್ಯನನ್ನಾಗಿ ರೂಪಿಸುವ ಶಕ್ತಿ ಎನ್.ಎಸ್.ಎಸ್‌ಗೆ ಇದೆ: ಡಾ. ಖಾಜಾವಲಿ ಈಚನಾಳ

• ಉದಯವಾಹಿನಿ ಜೇವರ್ಗಿ

ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿ ಗಳಲ್ಲಿ ರಾಷ್ಟ್ರ ಪ್ರೀತಿ, ರಾಷ್ಟ್ರಭಕ್ತಿ ರಾಷ್ಟ್ರಾಭಿಮಾನ, ಸಹಬಾಳ್ವೆ, ಸಹಿಷ್ಣುತೆ, ಸೌಹಾರ್ದತೆಯನ್ನು ಕಲಿಸುತ್ತದೆ. ಎನ್.ಎಸ್.ಎಸ್. ಮನುಷ್ಯನನ್ನು ನಿಜವಾದ ಮನುಷ್ಯನನ್ನಾಗಿ ರೂಪಿಸುವ ಶಕ್ತಿ ಹೊಂದಿದೆ ಎಂದು ಜೇವರ್ಗಿ ಸರ್ಕಾರಿ ಪದವಿ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಡಾ. ಖಾಜಾವಲಿ ಈಚನಾಳ ಹೇಳಿದರು.

ಅವರು ಗುಲಬರ್ಗಾ ವಿಶ್ವವಿದ್ಯಾಲಯ ರಾಸೇಯೋ ಕೋಶ ಹಾಗೂ ಜೇವರ್ಗಿ ಸಪ್ರದ ಕಾಲೇಜಿನ ಮೂರು ಎನ್ನೆಸ್ಸೆಸ್ ಘಟಕಗಳ ವತಿಯಿಂದ ಕೆಲ್ಲೂರು ಗ್ರಾಮದಲ್ಲಿ ಹಮ್ಮಿಕೊಂಡಿದ್ದ ವಾರ್ಷಿಕ ವಿಶೇಷ ಶಿಬಿರದ ನಾಲ್ಕನೇ ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಂಪನ್ಮೂಲವ್ಯಕ್ತಿಯಾಗಿ ಆಗಮಿಸಿದದ್ದ ಜೇವರ್ಗಿಯ ಕ್ಷೇತ್ರ ಆರೋಗ್ಯಾಧಿಕಾರಿಗಳಾದ ಅಂಬಾರಾಯ ತಂಗಾ

ಸಮೂದಾಯ ಆರೋಗ್ಯ ಮತ್ತು ನೈರ್ಮಲ್ಯೀಕರಣದಲ್ಲಿ ಯುವಕರ ಪಾತ್ರ ವಿಷಯದ ಬಗ್ಗೆ ವಿಶೇಷ ಉಪನ್ಯಾಸ ನೀಡಿ, ಆರೋಗ್ಯ ಶಿಕ್ಷಣ, ಪರಿಸರ ರಕ್ಷಣೆ, ಸಾಂಕ್ರಾಮಿಕ ರೋಗಗಳ ಲಕ್ಷಣ, ಚಿಕಿತ್ಸೆ ಮತ್ತು ಪರಿಹಾರೋಪಾಯಗಳ ಕುರಿತು ವಿವರಿಸಿದರು.


ಉದಯವಾಹಿನಿ ಚಿತ್ರ

## ಚುನಾವಣೆಗಳಲ್ಲಿ ಹಣಬಲ ನಿಯಂತ್ರಿಸಿ

• ಉದಯವಾಹಿನಿ ಕಲಬುರಗಿ

ನಗರದ ಜೇವರ್ಗಿ ರಸ್ತೆಯಲ್ಲಿರುವ ಅಕ್ಕಮಹಾದೇವಿ ಮಹಿಳಾ ಪದವಿ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿ ಸಂಯುಕ್ತ ಆಶ್ರಯದಲ್ಲಿ ಚುನಾವಣೆಗಳಲ್ಲಿ ಹಣಬಲ ನಿಯಂತ್ರಿಸಿ- ಪ್ರಜಾಪ್ರಭುತ್ವ ಉಳಿಸಿ ರಾಷ್ಟ್ರೀಯ ವಿಚಾರ ಸಂಕಿರಣ ಆಯೋಜಿಸಲಾಯಿತು. ಕಾರ್ಯಕ್ರಮ ಉದ್ಘಾಟಿಸಿದ ಪ್ರಾಂಶುಪಾಲ ಡಾ. ಮೊರಗೆ ಪ್ರಕಾಶ ಮಾತನಾಡುತ್ತಾ, ಇಂಥ ಕಾರ್ಯಕ್ರಮಗಳು ನಿರಂತರವಾಗಿ ಸಮಾಜದಲ್ಲಿ ನಡೆದಾಗ ಸಮಾಜದಲ್ಲಿ ಜಾಗೃತಿ ಉಂಟಾಗುತ್ತದೆ. ವಿಚಾರ ಸಂಕಿರಣದಲ್ಲಿ ಅತ್ಯದ್ಭುತವಾಗಿ ಮಾತನಾಡಿದ ವಿದ್ಯಾರ್ಥಿಗಳನ್ನು ಉಲ್ಲೇಖಿಸಿ ಮಾತನಾಡುತ್ತಾ ಇಂದಿನ ವಿದ್ಯಾರ್ಥಿಗಳಲ್ಲಿ ಅಗಾಧವಾದ ಪ್ರತಿಭೆ ಇದ್ದು ಅದನ್ನು ಹೊರ ತರುವ ಕೆಲಸ ನಾವು ಮಾಡಬೇಕಾಗಿದೆ ಎಂದರು.

## ಮಕ್ಕಳ ಸರಳ ಕಲಿಕೆಗೆ ದ್ವಿಭಾಷಾ ಮಾಧ್ಯಮ ಅಗತ್ಯ

• ಉದಯವಾಹಿನಿ ವಿಜಯಪುರ

ದ್ವಿಭಾಷಾ ಮಾಧ್ಯಮವು 2026-27 ನೇ ಶೈಕ್ಷಣಿಕ ವರ್ಷದಿಂದ 1ರಿಂದ 5 ನೇ ವರ್ಗದ ವಿಷಯಗಳನ್ನು ಮಾತೃಭಾಷೆ ಮತ್ತು ಇಂಗ್ಲಿಷ್‌ನಲ್ಲಿ ಬೋಧಿಸಲು ಬಳಸುವ ಶಿಕ್ಷಣ ಪದ್ಧತಿಯಾಗಿದ್ದು, ಇದು ಜಾಗತಿಕ ಸ್ಪರ್ಧೆಗೆ ಮಕ್ಕಳನ್ನು ಸಿದ್ಧಗೊಳಿಸುತ್ತದೆ ಎಂದು ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಆರ್. ನಡುಗಡ್ಡಿ ಹೇಳಿದರು.

ಇಂಡಿ ಪಟ್ಟಣದ ಆದರ್ಶ ವಿದ್ಯಾಲಯದಲ್ಲಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ವಿಜಯಪುರ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಇಂಡಿ ಇವರ ಸಹಯೋಗದಲ್ಲಿ ಜರುಗಿದ 1-5 ನೇ ವರ್ಗದ ಶಿಕ್ಷಕರ ದ್ವಿಭಾಷಾ ತರಬೇತಿಯ 2ನೇ ಹಂತದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ದ್ವಿಭಾಷಾ ಮಾಧ್ಯಮವು ವಿದ್ಯಾರ್ಥಿಗಳ ಬೌದ್ಧಿಕ ಬೆಳವಣಿಗೆಗೆ, ವಿಷಯದ ಆಳವಾದ ತಿಳುವಳಿಕೆಗೆ ಮತ್ತು ಉದ್ಯೋಗಾವಕಾಶಗಳನ್ನು ಹೆಚ್ಚಿಸಲು ಅತ್ಯಗತ್ಯ. ಇದು ಶಿಕ್ಷಕರ-ವಿದ್ಯಾರ್ಥಿಗಳ ಸಂವಹನ ಕೌಶಲ್ಯಗಳನ್ನು ಸುಧಾರಿಸಿ ಕಲಿಕಾ ಪ್ರಕ್ರಿಯೆ ಸರಳಗೊಳಿಸುತ್ತದೆ ಎಂದು ಹೇಳಿದರು.

## ನಿಗದಿತ ಅವಧಿಯಲ್ಲಿ ಕಾಮಗಾರಿ ಮುಗಿಸಿ

• ಉದಯವಾಹಿನಿ ಹುಕ್ಕೇರಿ

ಜನರಿಗೆ ಅನುಕೂಲವಾಗುವ ಕಾಮಗಾರಿಯನ್ನು ನಿಗದಿತ ಸಮಯದಲ್ಲಿ ಮುಗಿಸಬೇಕು ಎಂದು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಸೂಚಿಸಿದರು. ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಭವನದಲ್ಲಿ ಶನಿವಾರ ಹಮ್ಮಿಕೊಂಡಿದ್ದ 'ಸಾರ್ವಜನಿಕ ಕುಂದು ಕೊರತೆ ಸಭೆಯಲ್ಲಿ ಮಾತನಾಡಿದರು.

ಸಮಾಜ ಕಲ್ಯಾಣ ಇಲಾಖೆಯು ಸಲ್ಲಿಸಿದ 17 ಕಟ್ಟಡ ಪ್ರಸ್ತಾವ ಮತ್ತು ಪ್ರಗತಿ, ಅಲ್ಪಸಂಖ್ಯಾತರ ಇಲಾಖೆಗೆ ಬೇಕಾದ ಕಟ್ಟಡ ಮತ್ತು ಅನುದಾನ ಕುರಿತು, ಹಿಂದುಳಿದ ವರ್ಗಗಳ ಇಲಾಖೆಗೆ ಮಂಜೂರಾದ ಸಮುದಾಯ ಭವನ ಕುರಿತು ಮಾಹಿತಿ ಪಡೆದರು. ಶಿರಗಾಂವ ಗ್ರಾಮಕ್ಕೆ ಮಂಜೂರಾದ ಸಮುದಾಯ ಭವನವನ್ನು ಮದಿಹಳ್ಳಿಗೆ ವರ್ಗಾಯಿಸುವಂತೆ ವಕೀಲ ಭೀಮಸೇನ ಬಾಗಿ ಮನವಿ ಮಾಡಿದರು. ಅದಕ್ಕೆ ಸಚಿವರು ಸಮ್ಮತಿಸಿ ಅಧಿಕಾರಿಗಳಿಗೆ ಸೂಚಿಸಿದರು.

**ವಿಶೇಷ ಸಭೆ:** ಪಡಿತರ ಚೀಟಿಯ ಮೂಲಕ ವಿತರಿಸುವ ರೇಷನ್ ಅಂಗಡಿಯವರಿಗೆ ವಿಶೇಷ ಸಭೆಯನ್ನು ಕರೆಯುವಂತೆ ಉಪಸ್ಥಿತರಿದ್ದ ತಹಶೀಲ್ದಾರ್ ಬಲರಾಮ ಕಟ್ಟಿಮನಿಗೆ ಸಚಿವರು ಸೂಚಿಸಿದರು.

ಶಾಲೆಗಳಿಗೆ ಬೇಕಾದ ಹೆಚ್ಚುವರಿ ಕೊಠಡಿ ಕುರಿತು ಬಿಇಒ ಪ್ರಭಾವತಿ ಪಾಟೀಲ ಮಾಹಿತಿ ನೀಡಿ ಹೋದ ವರ್ಷದ ಬೇಡಿಕೆ ಜತೆ ಈ ವರ್ಷ ಮತ್ತೆ 129 ಹೆಚ್ಚುವರಿ ಕೊಠಡಿ ಬೇಕಾಗಿವೆ ಎಂದು ಸಭೆಗೆ ಮಾಹಿತಿ ನೀಡಿದರು.

## ಧ್ವನಿ ಇಲ್ಲದವರಿಗೆ ನ್ಯಾಯ ಒದಗಿಸುವ ಪತ್ರಕರ್ತರಿಗೆ ಗೌರವಿಸೋಣ

• ಉದಯವಾಹಿನಿ ಬೀದರ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಬೀದರ ಜಿಲ್ಲಾ ಘಟಕದ 40ನೇ ರಾಜ್ಯ ಸಮ್ಮೇಳನದ ಮೆರವಣಿಗೆಗೆ ಏಪ್ರಿಲ್ 11 ರಂದು ಅದ್ದೂರಿ ಚಾಲನೆ ಸಿಕ್ಕಿತು.

ನಗರದ ಶ್ರೀ ಬಸವೇಶ್ವರ ಸಭಾಂಗಣದಲ್ಲಿ ನಡೆದ ವೇದಿಕೆಯಲ್ಲಿ ನೆರೆದಿದ್ದ ಸ್ವಾಮೀಜಿಗಳು, ಶಾಸಕರು, ಹಿರಿಯ ಪತ್ರಕರ್ತರು ಮತ್ತು ಇನ್ನಿತರ ಗಣ್ಯರು ಶಾಂತಿ ಸಂದೇಶದ 40 ಪರಿವಾಳಗಳನ್ನು ಹಾರಿ ಬಿಡುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು. ವೇದಿಕೆ ಮೇಲಿದ್ದ ಪತ್ರಕರ್ತರು ಮತ್ತು ಗಣ್ಯರು ತಲೆಗೆ ಪೇಟಾಸುತ್ತಿ 40ನೇ ರಾಜ್ಯ ಸಮ್ಮೇಳನದ ಸಾಂಕೇತಿಕವಾಗಿ 40 ಕೊಡಿಗಳನ್ನು ಹಿಡಿದು ಗಮನ ಸೆಳೆದರು. ಪತ್ರಕರ್ತರನ್ನು ಗೌರವಿಸೋಣ: ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿದ್ದ ಬೈಲೂರನ ನಿಷ್ಕಲ ಮಂಟಪದ ಶ್ರೀ ನಿಜಗುಣಾನಂದ ಸ್ವಾಮೀಜಿ ಅವರು ಮಾತನಾಡಿ, ದೇವರು ಕಣ್ಣು ಮುಚ್ಚಿದಾಗ ಸಮಾಜಕ್ಕೆ ನ್ಯಾಯ ಒದಗಿಸುವ ಕೆಲಸವನ್ನು ಪತ್ರಕರ್ತರು ಮಾಡುತ್ತಾರೆ ಎನ್ನುವ ಭಾವನೆ ಸಮಾಜದಲ್ಲಿ ಬೇರೂರಿದೆ. ಒಳ್ಳೆಯ ಪತ್ರಕರ್ತರನ್ನು ಗೌರವಿಸುವ ದೊಡ್ಡ ಕೆಲಸವನ್ನು ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ ಮಾಡುತ್ತಿರುವುದು ಶ್ಲಾಘನೀಯ ಕಾರ್ಯ. ವೇಗವಾಗಿ ಬೆಳೆಯುತ್ತಿರುವ ಕಾಲಕ್ಕೆ ತಕ್ಕಂತೆ ಪತ್ರಿಕಾ ರಂಗವೂ ಬೆಳೆಯುತ್ತಿದೆ. ನ್ಯಾಯ ಇಲ್ಲದವರಿಗೆ ನ್ಯಾಯ ಒದಗಿಸುವ ಪತ್ರಕರ್ತರನ್ನು ನಾವೆಲ್ಲರೂ ಗೌರವಿಸೋಣ ಎಂದರು.


ಉದಯವಾಹಿನಿ ಚಿತ್ರ

**ಎಲ್ಲ ರಂಗದಲ್ಲೂ ನ್ಯಾಯ ಪೀಠವನ್ನು ಪವಿತ್ರ ಎಂದೇ ಭಾವಿಸಿದ್ದೇವೆ. ಅದಕ್ಕೂ ಮಿಗಿಲಾದ ಕಾರ್ಯವನ್ನು ಪತ್ರಿಕಾರಂಗವು ಮಾಡುತ್ತಿದೆ**
**-ಶ್ರೀ ಗುರುಬಸವ ಪಟ್ಟದ್ದೇವರು, ಹಿರೇಮಠ ಸಂಸ್ಥಾನದ**

## ದೇಶದ ಯೋಜನೆಗಳಿಗೆ ಜನಗಣತಿ ಆಧಾರ: ವೀರೇಶ ಹಟ್ಟಿ

• ಉದಯವಾಹಿನಿ ಕೊಲ್ಹಾರ

ಭಾರತದ ಜನಗಣತಿ 2027 ಡಿಜಿಟಲೀಕರಣವಾಗಿದ್ದು. ಅದನ್ನು ಮೊಬೈಲ್ ಮೂಲಕ ಬಹಳ ಸರಳವಾಗಿ ಮಾಡಬಹುದು. ಅದನ್ನು ಯಾರು ಗೊಂದಲ ಮಾಡಿಕೊಳ್ಳದೆ 2026ರ ಮೊದಲನೆ ಹಂತದ ಮನೆಪಟ್ಟಿ ಹಾಗೂ ಮನೆ ಗಣತಿಯನ್ನು ಯಶಸ್ವಿಗೊಳಿಸಬೇಕೆಂದು ತಹಸೀಲ್ದಾರ ಸಂತೋಷ ಮ್ಯಾಗೇರಿ ಹೇಳಿದರು.

ಪಟ್ಟಣದ ಸರ್ಕಾರಿ ಪಾಲ್ ಟೆಕ್ನಿಕ್ ಕಾಲೇಜಿನಲ್ಲಿ ತಾಲ್ಲೂಕು ಆಡಳಿತ ಹಾಗೂ ಪಟ್ಟಣ ಪಂಚಾಯತಿ ಸಹಯೋಗದಲ್ಲಿ ಹಮ್ಮಿಕೊಂಡ ಗಣತಿದಾರರು ಹಾಗೂ ಗಣತಿದಾರರ ಮೇಲ್ವಿಚಾರಕರ 3 ದಿನಗಳ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು. 2021ರಲ್ಲಿ ಆಗಬೇಕಾದ ರಾಷ್ಟ್ರೀಯ ಜನಗಣತಿ ಕೋವಿಡ್ ಕಾರಣದಿಂದ ತೊಂದರೆಯಾಗಿ ಈ ವರ್ಷದಿಂದ ಮತ್ತೆ ಗಣತಿ ಪ್ರಾರಂಭವಾಗಿದೆ. ಗಣತಿಯು ಎ 16 ರಿಂದ ಮೇ 15 ರವರೆಗೆ ನಡೆಯುತ್ತದೆ. ಈ ವೇಳೆ ಯಾರು ಗಣತಿ ಬಗ್ಗೆ ಭಯ ಪಡದೆ ಎಲ್ಲರೂ ಹುರುಪಿನಿಂದ ಗಣತಿ ಮಾಡಿ ಮನೆ ಪಟ್ಟಿ ಹಾಗೂ ಏರಿಯಾ ಮ್ಯಾಪ್‌ನ್ನು ಸಿದ್ಧಪಡಿಸಿಕೊಳ್ಳಬೇಕು. ಇಡೀ ಜಿಲ್ಲೆಯಲ್ಲಿ ಕೊಲ್ಹಾರ ತಾಲ್ಲೂಕಿನ ಗಣತಿ ಕಾರ್ಯ ಮೊದಲು ಬೇಗ ಮುಗಿಬೇಕು


ಉದಯವಾಹಿನಿ ಚಿತ್ರ

ಅದಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ವಿನಂತಿಸಿದರು.

ಗಣತಿದಾರರಿಗೆ ಗಣತಿ ಸಂದರ್ಭದಲ್ಲಿ ಏನಾದರೂ ಸಮಸ್ಯೆ, ತೊಂದರೆಗಳಾದರೆ ಗಣತಿ ಮೇಲ್ವಿಚಾರಕರಿಗೆ, ಚಾರ್ಜ್ ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳಬೇಕು ಎಂದು ಸಲಹೆ ನೀಡಿದರು. ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ವೀರೇಶ ಹಟ್ಟಿ ಮಾತನಾಡಿದರು, ಜನಗಣತಿ 2027 ಸರ್ಕಾರಿ ಕಾರ್ಯಕ್ರಮವಾಗಿದ್ದು ಇದರ ಮೂಲಕ ದೇಶದಲ್ಲಿ ಯೋಜನೆಗಳು, ಸೌಲಭ್ಯಗಳು ಹಾಗೂ ಜನಸಂಖ್ಯೆ ಆಧಾರದ ಮೇಲೆ ವಿಧಾನ ಸಭೆ, ಲೋಕಸಭೆ ಕ್ಷೇತ್ರಗಳು ಮರುವಿಂಗಡಣೆಯಾಗಲಿವೆ ಕಾರಣ ಎಲ್ಲಾ ಗಣತಿದಾರರು ಮನೆ ಮನೆಗೆ ತೆರಳಿ ನಿಖರವಾಗಿ ಮನೆ ಪಟ್ಟಿ ಮಾಡಿ ಸರಿಯಾದ ಮಾಹಿತಿಯನ್ನು ಕೊಡಬೇಕು ಎಂದರು.

## ಕುಡಿಯುವ ನೀರಿನ ಬಿಕ್ಕಟ್ಟು; ಗ್ರಾಮಗಳ ಪಟ್ಟಿ ಸಿದ್ಧ

• ಉದಯವಾಹಿನಿ ಸೊರಬ

ಬಿಸಿಲಿನ ಬೇಗೆ ಹೆಚ್ಚುತ್ತಿದ್ದಂತೆಯೇ ತಾಲ್ಲೂಕಿನ ಹಲವು ಭಾಗಗಳಲ್ಲಿ ಎದುರಾಗುವ ಕುಡಿಯುವ ನೀರಿನ ಬಿಕ್ಕಟ್ಟು ನಿಭಾಯಿಸಲು ತಾಲ್ಲೂಕು ಪಂಚಾಯಿತಿ ಸಮೀಕ್ಷೆ ನಡೆಸಿ, ನೀರಿನ ಕೊರತೆ ಉಂಟಾಗಬಹುದಾದ ಗ್ರಾಮಗಳ ಸಮಗ್ರ ಪಟ್ಟಿ ಸಿದ್ಧಪಡಿಸಿದೆ. ಜತೆಗೆ ನೀರಿನ ಮೂಲ ಗುರುತಿಸುವ ಕಾರ್ಯ ನಡೆಸಿದೆ.

ಏಪ್ರಿಲ್‌ನಲ್ಲಿ ತಾಪಮಾನ ಹೆಚ್ಚಿದ್ದು, ಮೇ ತಿಂಗಳಲ್ಲಿ ಪರಿಸ್ಥಿತಿ ಮತ್ತಷ್ಟು ವಿಕೋಪಕ್ಕೆ ಹೋಗುವ ಸಾಧ್ಯತೆಯಿದೆ. ಕಳೆದ ವರ್ಷ ವಾಡಿಕೆಯಂತೆ ಮಳೆಯಾಗಿದ್ದರಿಂದ ನೀರಿನ ಸಮಸ್ಯೆ ತೀವ್ರವಾಗಿರಲಿಲ್ಲ.

ಈ ಬಾರಿ ತಾಪಮಾನ ಹೆಚ್ಚಿರುವ ಕಾರಣ ದಂಡಾವತಿ ನದಿ ಸಂಪೂರ್ಣ ಬತ್ತಿದೆ. ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ತಾಲ್ಲೂಕಿನ 122 ಕೆರೆಗಳಿವೆ. ಈ ಪೈಕಿ ಶೇ 30 ಕೆರೆಗಳು ಬತ್ತುವ ಹಂತ ತಲುಪಿವೆ. ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಯ 941 ಕೆರೆಗಳ ಪೈಕಿ ಶೇ 40ರಷ್ಟು ಕೆರೆಗಳು ಬತ್ತಲಾರಂಭಿಸಿವೆ.


ಉದಯವಾಹಿನಿ ಚಿತ್ರ

ವಿಶೇಷವಾಗಿ ಮಲೆನಾಡು ಹಾಗೂ ಬಯಲುಸೀಮೆಯನ್ನೂ ಹೊಂದಿರುವ ಆನವಟ್ಟಿ ಭಾಗದ ಹಲವು ಕೆರೆಗಳಲ್ಲಿ ನೀರಿನ ಪಸೆ ಆರುತ್ತಿದೆ. ತೆರೆದ ಬಾವಿಗಳು ಹಾಗೂ ಕೊಳವೆ ಬಾವಿಗಳಲ್ಲೂ ನೀರಿನ ಮಟ್ಟ ತಳ ಸೇರುತ್ತಿದೆ. ಮುನ್ನೆಚ್ಚರಿಕೆ ಕ್ರಮವಾಗಿ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ನೀರಿನ ಕೊರತೆ ಕಾಡುವ ಹಳ್ಳಿಗಳನ್ನು ಗುರುತಿಸಿದ್ದಾರೆ. ಬಿಳವಾಣಿ, ಬೊಮ್ಮನಹಳ್ಳಿ, ಹಿರೇಮಾಗಡಿ ತಾಂಡಾ, ಹೊಸಬಾಳೆ, ಕ್ಯಾಸನೂರು, ಅಮಚಿ, ಚಂದ್ರಗುತ್ತಿ, ಎಣ್ಣೆಕೊಪ್ಪ, ಕುಪ್ಪಗಡ್ಡೆ, ತಲಗುಂದ, ಕೋಡಂಬಿ ಸೇರಿದಂತೆ ಹಲವಾರು ಹಳ್ಳಿಗಳಲ್ಲಿ ಅಂತರ್ಜಲ ಕುಸಿತದ ಮುನ್ಸೂಚನೆ ಲಭ್ಯವಾಗಿದೆ. ಜನರಿಗೆ ತೊಂದರೆಯಾಗದಂತೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ ಎನ್ನುತ್ತಾರೆ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು.

ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಲಾಗಿದ್ದು, ಕುಡಿಯುವ ನೀರಿನ ಬವಣೆ ನೀಗಿಸಲು ಆಯಾ ಭಾಗದಲ್ಲಿ ಕೊಳವೆ ಬಾವಿ ಕೊರೆಯಿಸಲಾಗಿದೆ. ಖಾಸಗಿ ಕೊಳವೆ ಬಾವಿ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಂಡು ಗ್ರಾಮಗಳಿಗೆ ನೀರು ಪೂರೈಸಲು ಕ್ರಮ ಕೈಗೊಳ್ಳಲಾಗಿದೆ. ಒಂದು ವೇಳೆ ಪರಿಸ್ಥಿತಿ ಕೈಮೀರಿದರೆ ಟ್ಯಾಂಕರ್ ಮೂಲಕ ನೀರು ಪೂರೈಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ' ಎಂದು ತಾಲ್ಲೂಕು ಪಂಚಾಯಿತಿ ಇಒ ಶಶಿಧರ್ ಮಾಹಿತಿ ನೀಡಿದರು.

# ಹುಲಿಕಲ್ ಘಾಟ್ ಗುಡ್ಡ ಕುಸಿತ: ಪರ್ಯಾಯ ಮಾರ್ಗಗಳ ಸೂಚನೆ

### ತೀರ್ಥಹಳ್ಳಿ–ರಾವ–ಕಾನುಗೋಡು–ನಗರ ಕೊಲ್ಲೂರು ಕುಂದಾಪುರ ರಸ್ತೆ ಮಾರ್ಗವಾಗಿ ಸಂಚರಿಸಲು ಸೂಚನೆ

• ಉದಯವಾಹಿನಿ ಶಿವಮೊಗ್ಗ

ಜಿಲ್ಲೆಯ ಹೊಸನಗರ ತಾಲ್ಲೂಕು ಹುಲಿಕಲ್ ಘಾಟಿಯಲ್ಲಿ (ಬಾಳೆಬರೆ ಘಾಟ್) ಗುರುವಾರ (ಏ.9) ಸಂಜೆ ತಡೆಗೋಡೆ ಕಾಮಗಾರಿ ವೇಳೆ ಗುಡ್ಡ ಕುಸಿದಿದ್ದು, ಈ ಮಾರ್ಗದಲ್ಲಿ ಸಂಚಾರ ಸಂಪೂರ್ಣ ಸ್ಥಗಿತಗೊಳಿಸಲಾಗಿದೆ. ಪರ್ಯಾಯ ಮಾರ್ಗಗಳನ್ನು ಸೂಚಿಸಲಾಗಿದೆ.

**ಹಾಲಿ ಬಳಕೆಯಲ್ಲಿರುವ ಸಂಚಾರ ಮಾರ್ಗ: ಮಾರ್ಗ-1**

1) ತೀರ್ಥಹಳ್ಳಿ ಕುಂದಾಪುರ ರಾಜ್ಯ ಹೆದ್ದಾರಿ-52 ರಸ್ತೆಯ ತೀರ್ಥಹಳ್ಳಿಯಿಂದ ಕುಂದಾಪುರ ಕಡೆಗೆ ಹೋಗುವ ಭಾರಿ ವಾಹನಗಳು (ತೀರ್ಥಹಳ್ಳಿ- ರಾವೆ ಕಾನುಗೋಡು ಮಾಸ್ತಿಕಟ್ಟೆ-ಹುಲಿಕಲ್ ಘಾಟ್-ಹೊಸಂಗಡಿ-ಸಿದ್ದಾಪುರ-ಮೂಲಕ ಕುಂದಾಪುರ ರಾಜ್ಯ ಹೆದ್ದಾರಿ-52)

**ಪರ್ಯಾಯ ಮಾರ್ಗ:** ತೀರ್ಥಹಳ್ಳಿ-ರಾವ-ಕಾನುಗೋಡು -ನಗರ ಕೊಲ್ಲೂರು ಕುಂದಾಪುರ ರಸ್ತೆ

**ಹಾಲಿ ಇದ್ದ ಮಾರ್ಗ-2**

2) ನಗರ ಸಿದ್ದಾಪುರ ರಾಜ್ಯ ಹೆದ್ದಾರಿ-278 ರಸ್ತೆ ತೀರ್ಥಹಳ್ಳಿಯಿಂದ ಯಡೂರು ಹುಲಿಕಲ್ ಕುಂದಾಪುರ , ಕಡೆ ಹೋಗುವ ಭಾರಿ ವಾಹನಗಳು (ತೀರ್ಥಹಳ್ಳಿ ರಸ್ತೆ ಯಡೂರು- ಸುಳಗೋಡು- ಮಾಸ್ತಿಕಟ್ಟೆ-ಹುಲಿಕಲ್ ಘಾಟ್- ಹೊಸಂಗಡಿ-ಸಿದ್ದಾಪುರ-ಮೂಲಕ ಕುಂದಾಪುರ ಸೇರುವ ರಸ್ತೆ)


ಉದಯವಾಹಿನಿ ಚಿತ್ರ

• **ತೀರ್ಥಹಳ್ಳಿ ಕುಂದಾಪುರ ರಾಜ್ಯ ಹೆದ್ದಾರಿ-52 ರಸ್ತೆಯ ತೀರ್ಥಹಳ್ಳಿಯಿಂದ ಕುಂದಾಪುರ ಕಡೆಗೆ ಹೋಗುವ ಭಾರಿ ವಾಹನಗಳಿಗೆ ಪರ್ಯಾಯ ಮಾರ್ಗ ಸೂಚನೆ**
• **ತೀರ್ಥಹಳ್ಳಿ-ಕುಂದಾಪುರ ರಾಜ್ಯ ಹೆದ್ದಾರಿ-52ರ ಈ ಮಾರ್ಗ ಸಾರ್ವಜನಿಕರ ಬಳಕೆಗೆ ಲಭ್ಯ ಇರುವುದಿಲ್ಲ.**

### ಜಿಲ್ಲಾಡಳಿತ ಸೂಚನೆ

**ಒಟ್ಟಿನಲ್ಲಿ ತೀರ್ಥಹಳ್ಳಿ-ಕುಂದಾಪುರ ರಾಜ್ಯ ಹೆದ್ದಾರಿ-52ರ ಈ ಮಾರ್ಗ ಸಾರ್ವಜನಿಕರ ಬಳಕೆಗೆ ಲಭ್ಯ ಇರುವುದಿಲ್ಲ. ಕುಂದಾಪುರಕ್ಕೆ ತೆರಳುವವರು ತೀರ್ಥಹಳ್ಳಿ -ಮಾಸ್ತಿಕಟ್ಟೆ-ನಗರ-ಕೊಲ್ಲೂರು ಮಾರ್ಗದ ಮೂಲಕ ಅಥವಾ ತೀರ್ಥಹಳ್ಳಿ-ರಾವೆ-ಕಾನುಗೋಡು ಮಾರ್ಗವಾಗಿ ಸಂಚರಿಸಬಹುದು. ಶಿವಮೊಗ್ಗದಿಂದ ಹೊನ್ನಾವರ ರಾಷ್ಟ್ರೀಯ ಹೆದ್ದಾರಿ ಮೂಲಕ ಭಟ್ಕಳ-ಬೈಂದೂರು ಮಾರ್ಗವಾಗಿ ಕುಂದಾಪುರ ತಲುಪುವಂತೆ ಜಿಲ್ಲಾಡಳಿತ ಸೂಚಿಸಿದೆ.**

**ಪರ್ಯಾಯ ಮಾರ್ಗ:** ತೀರ್ಥಹಳ್ಳಿ ಯಡೂರು- ಕಾನುಗೋಡು-ನಗರ-ಕೊಲ್ಲೂರು-ಕುಂದಾಪುರ ರಸ್ತೆ

**ಹಾಲಿ ಇದ್ದ ಮಾರ್ಗ-3**

3) ಶಿವಮೊಗ್ಗ/ ನಾಗರ ಕಡೆಯಿಂದ ಹೊಸನಗರದ ಮೂಲಕ ಕುಂದಾಪುರ ಕಡೆ ಹೋಗುವ ಭಾರಿ ವಾಹನಗಳು (ಶಿವಮೊಗ್ಗ-ಸಾಗರ ಕಡೆಯಿಂದ ಹೊಸನಗರ- ನಗರ-ಮಾಸ್ತಿಕಟ್ಟೆ- ಹುಲಿಕಲ್ ಘಾಟ್- ಹೊಸಂಗಡಿ-ಸಿದ್ದಾಪುರ- ಮೂಲಕ ಕುಂದಾಪುರ ಸೇರುವ ರಸ್ತೆ)

**ಪರ್ಯಾಯ ಮಾರ್ಗ:** ಶಿವಮೊಗ್ಗ ಹೊನ್ನಾವರ ರಾಷ್ಟ್ರೀಯ ಹೆದ್ದಾರಿ ಮೂಲಕ ಹೊನ್ನಾವರ ಅನಂತರ ಹೊನ್ನಾವರದಿಂದ-ಭಟ್ಕಳ -ಬೈಂದೂರು-ಕುಂದಾಪುರ ರಸ್ತೆ. ಈ ಅಧಿಸೂಚನೆಯನ್ನು ಶಿವೊಗ್ಗ ಜಿಲ್ಲೆ ಅಪರ ಜಿಲ್ಲಾಧಿಕಾರಿ ಹೊರಡಿಸಿದ್ದಾರೆ. ಘಾಟಿಯ ಶ್ರೀ ಚಂಡಿಕಾಂಬ ದೇವಸ್ಥಾನ ಬಳಿಯ ಹೇರ್‌ಪಿನ್ ತಿರುವಿನಲ್ಲಿ ಪ್ರತಿ ಮಳೆಗಾಲದಲ್ಲಿ ಧರೆ ಕುಸಿತದಿಂದ ಸಂಚಾರಕ್ಕೆ ತೊಡಕಾಗುತ್ತಿತ್ತು.

ಈ ಹಿನ್ನೆಲೆಯಲ್ಲಿ ರಾಜ್ಯ ಹೆದ್ದಾರಿಯ ವಿಸ್ತರಣೆ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದ್ದು, ಹಲವು ವರ್ಷಗಳಿಂದ ಕುಂಟುತ್ತಲೇ ಸಾಗಿತ್ತು. ಗುಡ್ಡ ಮತ್ತಷ್ಟು ಕುಸಿಯುವ ಸಾಧ್ಯತೆ ಇರುವುದರಿಂದ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ನಿಷೇಧಿಸಲಾಗಿದೆ. ಮಲೆನಾಡು ಮತ್ತು ಕರಾವಳಿ ಸಂಪರ್ಕಕ್ಕೆ ಹುಲಿಕಲ್ ಘಾಟ್ ಮುಖ್ಯ ಸಂಪರ್ಕ ಸೇತುವೆಯಾಗಿದೆ. ರಾತ್ರಿ ವೇಳೆ ಆಗುಂಬೆ ಘಾಟಿಯಲ್ಲಿ ವಾಹನಗಳ ಸಂಚಾರಕ್ಕೆ ಅವಕಾಶ ಇಲ್ಲದ ಕಾರಣ ಎಲ್ಲಾ ರೀತಿಯ ವಾಹನಗಳು ಹುಲಿಕಲ್ ಘಾಟ್‌ನಲ್ಲೇ ಸಂಚರಿಸುತ್ತವೆ. ಗುರುವಾರ ಸಂಜೆಯಿಂದಲೇ ಘಾಟಿ ಮಾರ್ಗ ಬಂದ್ ಮಾಡಿದ್ದರಿಂದ ಈ ರಸ್ತೆಯಲ್ಲಿ ಸಂಚಾರ ಅಸ್ತವ್ಯಸ್ತಗೊಂಡಿತ್ತು.

# ಹಿರಿಯ ಗಾಯಕಿ ಆಶಾ ಭೋಸ್ಲೆ ನಿಧನ



ಪ್ರಧಾನಿ ನರೇಂದ್ರ ಮೋದಿ ಸಂತಾಪ

ಖ್ಯಾತ ಗಾಯಕಿ ಆಶಾ ಭೋಸ್ಲೆ ಅವರ ನಿಧನದಿಂದ ಭಾರತೀಯ ಸಂಗೀತ ಲೋಕಕ್ಕೆ ತುಂಬಲಾರದ ನಷ್ಟವಾಗಿದೆ. ಹಾಡುಗಳ ಮೂಲಕ ಅವರು ಎಂದಿಗೂ ಅಮರವಾಗಿ ಇರಲಿದ್ದಾರೆ. ನರೇಂದ್ರ ಮೋದಿ, ಮಮತಾ ಬ್ಯಾನರ್ಜಿ, ಹೆಚ್.ಡಿ. ಕುಮಾರಸ್ವಾಮಿ ಸೇರಿದಂತೆ ವಿವಿಧ ಕ್ಷೇತ್ರಗಳ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಭಾರತೀಯ ಚಿತ್ರರಂಗದ ಅಪ್ರತಿಮ ಗಾಯಕಿ, ಸಾವಿರಾರು ಗೀತೆಗಳಿಗೆ ಧ್ವನಿಯಾಗಿದ್ದ ಆಶಾ ಭೋಸ್ಲೆ ಅವರು ಮುಂಬೈನಲ್ಲಿ ನಿಧನರಾದರು. ಕಳೆದ ಕೆಲವು ಸಮಯದಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಚಿಕಿತ್ಸೆ ಫಲಕಾರಿಯಾಗದೆ ಭಾನುವಾರ ಕೊನೆಯುಸಿರೆಳೆದಿದ್ದಾರೆ. ಆಶಾ ಭೋಸ್ಲೆ ನಿಧನದ ಬಗ್ಗೆ ಮಾಹಿತಿ ನೀಡಿದ ಡಾ. ಪ್ರತೀತ್, 'ಹಿರಿಯ ಗಾಯಕಿ ಆಶಾ ಭೋಸ್ಲೆ ಅವರು ಇಂದು ನಿಧನರಾಗಿರುವುದು ಅತ್ಯಂತ ದುಃಖದ ಸಂಗತಿ. ಅವರು ಹಲವು ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದರು ಮತ್ತು ಬಹುಅಂಗಾಂಗ ವೈಫಲ್ಯದಿಂದ ಮೃತಪಟ್ಟಿದ್ದಾರೆ' ಎಂದು ಖಚಿತಪಡಿಸಿದ್ದಾರೆ. ಆಶಾ ಭೋಸ್ಲೆ ಅವರ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಎಕ್ಸ್ (ಟ್ವಿಟರ್) ಮೂಲಕ ಸಂತಾಪ ಸೂಚಿಸಿದ್ದಾರೆ. 'ಆಶಾ ಭೋಸ್ಲೆ ಅವರ ನಿಧನದಿಂದ ತೀವ್ರ ದುಃಖವಾಗಿದೆ. ದಶಕಗಳ ಕಾಲ ಸಾಗಿದ ಅವರ ಅಸಾಧಾರಣ ಸಂಗೀತ ಪಯಣವು ನಮ್ಮ ಸಾಂಸ್ಕೃತಿಕ ಪರಂಪರೆಯನ್ನು ಶ್ರೀಮಂತಗೊಳಿಸಿದೆ ಮತ್ತು ಪ್ರಪಂಚದಾದ್ಯಂತ ಅಸಂಖ್ಯಾತ ಹೃದಯಗಳನ್ನು ಸ್ಪರ್ಶಿಸಿದೆ' ಎಂದು ಮೋದಿ ಪೋಸ್ಟ್ ಮಾಡಿದ್ದಾರೆ.

'ಅವರೊಂದಿಗೆ ನಾನು ನಡೆಸಿದ ಸಂವಾದಗಳನ್ನು ನಾನು ಯಾವಾಗಲೂ ನೆನಪಿಸಿಕೊಳ್ಳುತ್ತೇನೆ. ಆಶಾ ಭೋಸ್ಲೆ ಅವರ ಕುಟುಂಬಕ್ಕೆ, ಅಭಿಮಾನಿಗಳಿಗೆ ಮತ್ತು ಸಂಗೀತ ಪ್ರೇಮಿಗಳಿಗೆ ನನ್ನ ತೀವ್ರ ಸಂತಾಪಗಳು. ಅವರು ಮುಂಬರುವ ಪೀಳಿಗೆಗಳಿಗೂ ಸ್ಫೂರ್ತಿಯಾಗಿ ಮುಂದುವರಿಯುತ್ತಾರೆ ಮತ್ತು ಅವರ ಹಾಡುಗಳು ಜನರ ಜೀವನದಲ್ಲಿ ಎಂದೆಂದಿಗೂ ಅನುರಣಿಸುತ್ತಿರುತ್ತವೆ' ಎಂದು ಮೋದಿ ಬರೆದುಕೊಂಡಿದ್ದಾರೆ.

ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಕೂಡ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಆಶಾ ಭೋಸ್ಲೆ ಅವರ ಗಾಯನವು ಭಾಷೆ ಮತ್ತು ಪ್ರಾಂತ್ಯಗಳ ಗಡಿ ಮೀರಿ ಬೆಳೆದಿತ್ತು ಎಂದು ಅವರು ಬಣ್ಣಿಸಿದ್ದಾರೆ. ಹೆಚ್.ಡಿ. ಕುಮಾರಸ್ವಾಮಿ ಕೂಡ ಸಂತಾಪ ಸೂಚಿಸಿದ್ದಾರೆ. 'ಆಶಾ ಭೋಸ್ಲೆ ಅವರು ಭಾರತೀಯ ಸಂಗೀತ ಲೋಕದ ಅಪ್ರತಿಮ ದಂತಕಥೆ. ಅವರ ನಿಧನದ ಸುದ್ದಿ ಕೇಳಿ ತೀವ್ರ ದುಃಖಿತನಾಗಿದ್ದೇನೆ. ಅವರು ಕಲಾವಿದರಿಗೆ ಸದಾ ಸ್ಫೂರ್ತಿ. ಅವರ ಆತ್ಮಕ್ಕೆ ಶಾಂತಿಸಿಗಲೆಂದು ಪ್ರಾರ್ಥಿಸುತ್ತೇನೆ' ಎಂದು ಕುಮಾರಸ್ವಾಮಿ ಹೇಳಿದ್ದಾರೆ.


# ನಾಯಿಗಳ ನಾಪತ್ತೆಗೆ ಕಣ್ಣೀರಿಟ್ಟ ರಮ್ಯಾ



ನಟಿ ರಮ್ಯಾ, ದಿವ್ಯ ಸ್ಪಂದನಾ ಅವರು ಪ್ರಾಣಿಗಳ ಬಗ್ಗೆ ಅಪಾರ ಕಾಳಜಿ ಹೊಂದಿದ್ದಾರೆ. ಬೆಂಗಳೂರಿನಲ್ಲಿ ನಾಯಿಗಳು ನಾಪತ್ತೆ ಆಗಿರುವುದನ್ನು ಅವರು ಖಂಡಿಸಿದ್ದಾರೆ. ಇದಕ್ಕೆ ಸಂಬಂಧಿಸಿದಂತೆ ನಡೆದ ಪ್ರತಿಭಟನೆಯಲ್ಲಿ ಭಾಗಿಯಾದ ರಮ್ಯಾ ಅವರು ಕಣ್ಣೀರು ಹಾಕಿದ್ದಾರೆ. ಆ ಸಂದರ್ಭದ ವಿಡಿಯೋ ವೈರಲ್ ಆಗಿದೆ. ಕಗ್ಗದಾಸಪುರದಲ್ಲಿ ಅಮಾನವೀಯವಾಗಿ ನಾಯಿಗಳನ್ನು ಚೀಲಗಳಲ್ಲಿ ಕಟ್ಟಿ ಸಾಗಿಸಿದ ಆರೋಪ ಕೇಳಿಬಂದಿದೆ. ಡಿಆರ್‌ಡಿಒ ಸಂಕೀರ್ಣದಲ್ಲಿ ಇತ್ತೀಚೆಗೆ ಈ ಘಟನೆ ನಡೆದಿದೆ. ಅದರ ಬೆನ್ನಲ್ಲೇ, ಬೀದಿ ನಾಯಿಗಳ ಮೇಲಿನ ಕ್ರೌರ್ಯ ಖಂಡಿಸಿ ಪ್ರತಿಭಟನೆ ಮಾಡಲಾಗಿದೆ. ಇದರಲ್ಲಿ ನಟಿ ರಮ್ಯಾ ಕೂಡ ಭಾಗಿ ಆಗಿದ್ದಾರೆ. ಏಪ್ರಿಲ್ 11ರಂದು ಶ್ವಾನ ಪ್ರಿಯರು ಫ್ರೀಡಂ ಪಾರ್ಕ್‌ನಲ್ಲಿ ಒಗ್ಗೂಡಿ ತಮ್ಮ ಆಕ್ರೋಶ ಹೊರಹಾಕಿದರು. ಈ ಹೋರಾಟಕ್ಕೆ ಧ್ವನಿಯಾದ ರಮ್ಯಾ ಅವರು ಶ್ವಾನಗಳ ಮೇಲೆ ನಡೆದ ದೌರ್ಜನ್ಯದ ದೃಶ್ಯಗಳನ್ನು ಕಂಡು ಭಾವುಕರಾದರು.

'ನಾಯಿಗಳಿಗೆ ಏನಾಗಿರಬಹುದು ಎಂಬುದನ್ನು ಕಲ್ಪಿಸಿಕೊಂಡರೆ ನೋವಾಗುತ್ತದೆ. ಈ ರೀತಿ ಆಗಿದೆ ಎಂಬುದು ಗೊತ್ತಾಗಾದ ನನಗೆ ಆಘಾತ ಆಯಿತು' ಎಂದು ರಮ್ಯಾ ಅವರು ಪ್ರತಿಭಟನೆ ವೇಳೆ ಕಣ್ಣೀರು ಹಾಕಿದ್ದಾರೆ. ಸಂಸ್ಥೆಯೊಂದು ಇಷ್ಟು ಬೇಜವಾಬ್ದಾರಿಯಾಗಿ ನಡೆದುಕೊಂಡಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. 'ನಾಪತ್ತೆಯಾಗಿರುವ ನಾಯಿಗಳು ಸುರಕ್ಷಿತವಾಗಿದ್ದರೆ ನಮಗೆ ತೋರಿಸಿ, ಇಲ್ಲದಿದ್ದರೆ ಈ ಕೃತ್ಯಕ್ಕೆ ಕಾರಣರಾದವರನ್ನು ಶಿಕ್ಷಿಸಿ' ಎಂದು ರಮ್ಯಾ ಆಗ್ರಹಿಸಿದರು. ಸುಮಾರು 20ಕ್ಕೂ ಹೆಚ್ಚು ನಾಯಿಗಳು ನಾಪತ್ತೆ ಆಗಿವೆ. ನಿಯಮಗಳ ಕಟ್ಟುನಿಟ್ಟಿನ ಅನುಷ್ಠಾನಕ್ಕೆ ಆಗ್ರಹ ಮಾಡಲಾಗಿದೆ. ಸಿ.ವಿ. ರಾಮನ್ ನಗರ ಅನಿಮಲ್ ಸ್ಕ್ವಾಡ್ ಮತ್ತು ಪ್ರಾಣಿ ಕಲ್ಯಾಣ ಹೋರಾಟಗಾರ್ತಿ ಪ್ರಿಯಾ ಚೆಟ್ಟಿ ರಾಜಗೋಪಾಲ್ ನೇತೃತ್ವದಲ್ಲಿ ಪ್ರತಿಭಟನೆ ನಡೆದಿದೆ. ಈ ಪ್ರಕರಣ ಮಹದೇವಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಹೈಕೋರ್ಟ್‌ನಲ್ಲಿ ವಿಚಾರಣೆ ಹಂತದಲ್ಲಿದೆ. ಏಪ್ರಿಲ್ 16ರಂದು ಮುಂದಿನ ವಿಚಾರಣೆ ಇದೆ. ರಮ್ಯಾ ಅವರು ಪ್ರಾಣಿಗಳ ಬಗ್ಗೆ ಕಾಳಜಿ ಹೊಂದಿದ್ದಾರೆ. ಅವರು ನಾಯಿಗಳ ರಕ್ಷಣೆ ಬಗ್ಗೆ ಧ್ವನಿ ಎತ್ತಿರುವುದು ಇದೇ ಮೊದಲೇನಲ್ಲ. ಈ ಹಿಂದೆ ಕೂಡ ಅವರು ಇಂಥ ಘಟನೆಗಳು ನಡೆದಾಗ ಮಾಧ್ಯಮಗಳ ಎದುರು ಬಂದು ಮಾತನಾಡಿದ್ದರು. ಸೋಶಿಯಲ್ ಮೀಡಿಯಾದಲ್ಲಿ ಕೂಡ ಅವರು ಇಂಥ ಕೃತ್ಯಗಳನ್ನು ಖಂಡಿಸಿದ್ದಾರೆ.

# ಲವ್ ಇನ್ಶೂರೆನ್ಸ್ ಕಂಪನಿ ಬಾಕ್ಸ್ ಆಫೀಸ್ ಕಲೆಕ್ಷನ್




ಪ್ರದೀಪ್ ರಂಗನಾಥನ್ ಅಭಿನಯದ 'ಲವ್ ಇನ್ಶೂರೆನ್ಸ್ ಕಂಪನಿ' ಸಿನಿಮಾಗೆ ಪ್ರೇಕ್ಷಕರಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಹಾಗಾಗಿ ಈ ಸಿನಿಮಾದ ಕಲೆಕ್ಷನ್ ಏರಿಕೆ ಕಾಣುತ್ತಿಲ್ಲ. 2040ರ ಕಾಲಘಟ್ಟದಲ್ಲಿ ನಡೆಯುವ ಕಥೆಯನ್ನು ಈ ಸಿನಿಮಾದಲ್ಲಿ ತೋರಿಸಲಾಗಿದೆ. ಕೃತಿ ಶೆಟ್ಟಿ ಅವರು ಈ ಚಿತ್ರದಲ್ಲಿ ನಾಯಕಿಯಾಗಿ ಅಭಿನಯಿಸಿದ್ದಾರೆ. ವಿಘ್ನೇಶ್ ಶಿವನ್ ನಿರ್ದೇಶನದ, ಪ್ರದೀಪ್ ರಂಗನಾಥನ್ ನಟನೆಯ 'ಲವ್ ಇನ್ಶೂರೆನ್ಸ್ ಕಂಪನಿ' ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ಸಾಧಾರಣ ಕಲೆಕ್ಷನ್ ಮಾಡುತ್ತಿದೆ. ವಾರಾಂತ್ಯದ ರಜಾ ದಿನಗಳಿದ್ದರೂ ಸಹ ಚಿತ್ರದ ಕಲೆಕ್ಷನ್‌ನಲ್ಲಿ ದೊಡ್ಡ ಮಟ್ಟದ ಏರಿಕೆ ಕಂಡುಬಂದಿಲ್ಲ. ಸೈನ್ಸ್ ಫಿಕ್ಷನ್ ರೊಮ್ಯಾಂಟಿಕ್ ಕಾಮಿಡಿ ಈ ಸಿನಿಮಾದಲ್ಲಿದೆ. ಈ ಸಿನಿಮಾ ಮೇಲೆ ಪ್ರದೀಪ್ ರಂಗನಾಥನ್ ಫ್ಯಾನ್ಸ್ ಬಹಳ ನಿರೀಕ್ಷೆ ಹೊಂದಿದ್ದರು. ಆದರೆ ಆ ನಿರೀಕ್ಷೆಯ ಮಟ್ಟವನ್ನು ತಲುಪಲು ಈ ಸಿನಿಮಾಗೆ ಸಾಧ್ಯವಾಗಿಲ್ಲ.

ವರದಿಯ ಪ್ರಕಾರ ಮೊದಲ ದಿನ ಈ ಸಿನಿಮಾಗೆ 7.05 ಕೋಟಿ ರೂಪಾಯಿ ಕಲೆಕ್ಷನ್ ಆಯಿತು. ಎರಡನೇ ದಿನ 7.70 ಕೋಟಿ ರೂಪಾಯಿ ಗಳಿಸಿದೆ. 2 ದಿನಗಳಲ್ಲಿ ಒಟ್ಟು ಗಳಿಕೆ 14.75 ಕೋಟಿ ರೂಪಾಯಿ ಆಗಿದೆ. ಪ್ರದೀಪ್ ರಂಗನಾಥನ್ ಅವರ ಈ ಹಿಂದಿನ ಸಿನಿಮಾಗಳಿಗೆ ಹೋಲಿಸಿದರೆ ಇದು ಉತ್ತಮ ಕಲೆಕ್ಷನ್ ಅಲ್ಲ ಎಂಬುದು ತಿಳಿಯುತ್ತದೆ.

ಪ್ರದೀಪ್ ರಂಗನಾಥನ್ ಅವರ ಮೊದಲ ಸಿನಿಮಾ 'ಲವ್ ಟುಡೇ'ಗೆ ಹೋಲಿಸಿದರೆ 'ಲವ್ ಇನ್ಶೂರೆನ್ಸ್ ಕಂಪನಿ' ಉತ್ತಮ ಆರಂಭ ಪಡೆದಿದೆ. 'ಲವ್ ಟುಡೇ' ಮೊದಲ ಎರಡು ದಿನಗಳಲ್ಲಿ ಕೇವಲ 7 ಕೋಟಿ ಗಳಿಸಿತ್ತು. ಆದರೆ, ಪ್ರದೀಪ್ ಅವರ ಇತ್ತೀಚಿನ ಹಿಟ್ ಚಿತ್ರಗಳಾದ 'ಡ್ಯೂಡ್' (20 ಕೋಟಿ) ಮತ್ತು 'ಡ್ರ್ಯಾಗನ್' (17 ಕೋಟಿ) ಸಿನಿಮಾಗಳಿಗೆ ಹೋಲಿಸಿದರೆ ಈ ಸಲ ಕಲೆಕ್ಷನ್ ಕೊಂಚ ಕುಸಿದಿದೆ.


# ರಣಬಾಲಿ ಚಿತ್ರೀಕರಣಕ್ಕೆ ಬಂದ ರಶ್ಮಿಕಾ



ಮದುವೆ ನಂತರ ರಶ್ಮಿಕಾ ಮಂದಣ್ಣ ಮತ್ತು ವಿಜಯ್ ದೇವರಕೊಂಡ ಅವರು ಜೊತೆಯಾಗಿ ಕೆಲಸಕ್ಕೆ ಮರಳಿದ್ದಾರೆ. 'ರಣಬಾಲಿ' ಸಿನಿಮಾದ ಚಿತ್ರೀಕರಣಕ್ಕೆ ಬಂದ ಅವರಿಗೆ ಚಿತ್ರತಂಡದವರಿಂದ ಆತ್ಮೀಯ ಸ್ವಾಗತ ಸಿಕ್ಕಿದೆ. 'ವೈವಾಹಿಕ ಜೀವನಕ್ಕೆ ಶುಭವಾಗಲಿ' ಎಂದು ಶುಭ ಕೋರಿರುವ ಚಿತ್ರತಂಡದವರು ಕೇಕ್ ಕತ್ತರಿಸಿ ಸಂಭ್ರಮಿಸಿದ್ದಾರೆ.

ನಟ ವಿಜಯ್ ದೇವರಕೊಂಡ ಮತ್ತು ನಟಿ ರಶ್ಮಿಕಾ ಮಂದಣ್ಣ ಅವರ ಮದುವೆ ಸಲುವಾಗಿ ಇಷ್ಟು ದಿನ ಬ್ರೇಕ್ ಪಡೆದುಕೊಂಡಿದ್ದರು. ಈಗ ಅವರ 'ರಣಬಾಲಿ' ಸಿನಿಮಾದ ಚಿತ್ರೀಕರಣಕ್ಕೆ ಮರಳಿದ್ದಾರೆ. ಶೂಟಿಂಗ್ ಸೆಟ್‌ನಲ್ಲಿ ಚಿತ್ರತಂಡದ ಜೊತೆ ಅವರು ತೆಗೆದುಕೊಂಡ ಫೋಟೋ ವೈರಲ್ ಆಗಿದೆ. ವಿವಾಹದ ನಂತರ ಮೊದಲ ಬಾರಿಗೆ ಚಿತ್ರೀಕರಣಕ್ಕೆ ಹಾಜರಾದ ರಶ್ಮಿಕಾ ಮಂದಣ್ಣ ಮತ್ತು ವಿಜಯ್ ದೇವರಕೊಂಡ ಅವರಿಗೆ ಚಿತ್ರತಂಡದವರು ಅತ್ಯಂತ ಪ್ರೀತಿಯಿಂದ ಸ್ವಾಗತ ಕೋರಿದ್ದಾರೆ. ಶೂಟಿಂಗ್ ಸೆಟ್‌ನಲ್ಲಿ ವಿಶೇಷವಾಗಿ ಕೇಕ್ ಕತ್ತರಿಸುವ ಮೂಲಕ ಸಂಭ್ರಮಿಸಲಾಗಿದೆ. ಇಡೀ ಚಿತ್ರತಂಡವು ವಿಜಯ್ ಮತ್ತು ರಶ್ಮಿಕಾ ಅವರಿಗೆ ಹೂಗುಚ್ಛ ನೀಡಿ, ಸುಖಿ ದಾಂಪತ್ಯ ಜೀವನಕ್ಕೆ ಶುಭ ಹಾರೈಸಿತು. 'ಹ್ಯಾಪಿ ಮ್ಯಾರೀಡ್ ಲೈಫ್, ಮಿಸ್ಟರ್ ಆ್ಯಂಡ್ ಮಿಸಸ್ ರಣಬಾಲಿ' ಎಂದು ಹಾರೈಸಲಾಗಿದೆ. 'ರಣಬಾಲಿ' ಸಿನಿಮಾ ಮೇಲೆ ಅಭಿಮಾನಿಗಳಿಗೆ ಬಹಳ ನಿರೀಕ್ಷೆ ಇದೆ. ಈ ಚಿತ್ರವನ್ನು ರಾಹುಲ್ ಸಂಕೃತ್ಯನ್ ನಿರ್ದೇಶಿಸುತ್ತಿದ್ದಾರೆ. ಖ್ಯಾತ ನಿರ್ಮಾಣ ಸಂಸ್ಥೆ 'ಮೈತ್ರಿ ಮೂವೀ ಮೇಕರ್ಸ್' ಬೃಹತ್ ಬಜೆಟ್‌ನಲ್ಲಿ ಈ ಚಿತ್ರವನ್ನು ನಿರ್ಮಿಸುತ್ತಿದೆ. 'ರಣಬಾಲಿ' ಕೇವಲ ಪ್ರೇಮಕಥೆಯಲ್ಲ. ಇದು 19ನೇ ಶತಮಾನದ ಬ್ರಿಟಿಷ್ ಆಳ್ವಿಕೆಯ ಹಿನ್ನೆಲೆಯಲ್ಲಿ ನಡೆಯುವ ಕಥೆಯಾಗಿದೆ. ವಿಜಯ್ ದೇವರಕೊಂಡ ಅವರು ವೀರ ಯೋಧನ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಜಯಮ್ಮ ಎಂಬ ಪಾತ್ರದಲ್ಲಿ ರಶ್ಮಿಕಾ ನಟಿಸುತ್ತಿದ್ದಾರೆ. ದಳಪತಿ ವಿಜಯ್ ನಟನೆಯ 'ಜನ ನಾಯಗನ' ಸಿನಿಮಾ ಲೀಕ್ ಆಗಿದ್ದಕ್ಕೆ ವಿಜಯ್ ದೇವರಕೊಂಡ ಆಕ್ರೋಶ ವ್ಯಕ್ತಪಡಿಸಿದ್ದಾರೆ. 'ಜನ ನಾಯಕನ್ ಚಿತ್ರದ ಲೀಕ್ ವಿಚಾರ ನನಗೆ ತುಂಬಾ ಕೋಪ ತರುತ್ತಿದೆ.

# ನನ್ನ ಯಶಸ್ಸಿಗೆ ದಾವುದ್ ಕಾರಣ



ಭೂಗತ ಪಾತಕಿ ದಾವುದ್ ಇಬ್ರಾಹಿಂ ಬಗ್ಗೆ ರಾಮ್ ಗೋಪಾಲ್ ವರ್ಮಾ ಅವರು ಅಚ್ಚರಿಯ ಕೇಳಿಕೆ ನೀಡಿದ್ದಾರೆ. ತಾವು ಬದುಕು ಕಟ್ಟಿಕೊಳ್ಳಲು ದಾವುದ್ ಇಬ್ರಾಹಿಂ ಕಾರಣ ಎಂದು ಅವರು ಹೇಳಿದ್ದಾರೆ.

ಆರ್‌ಜಿವಿ ನೀಡಿದ ಈ ವಿವಾದಾತ್ಮಕ ಹೇಳಿಕೆಯು ಚರ್ಚೆಗೆ ಕಾರಣ ಆಗಿದೆ. ವಿವಾದಾತ್ಮಕ ಮತ್ತು ಪ್ರತಿಭಾವಂತ ನಿರ್ದೇಶಕ ರಾಮ್ ಗೋಪಾಲ್ ವರ್ಮಾ ಮತ್ತೆ ಸುದ್ದಿಯಲ್ಲಿದ್ದಾರೆ. ಭೂಗತ ಜಗತ್ತಿನ ಕಥೆಗಳನ್ನು ತೆರೆಯ ಮೇಲೆ ಅಚ್ಚುಕಟ್ಟಾಗಿ ಚಿತ್ರಿಸುವ ವರ್ಮಾ, ಈಗ ಭೂಗತ ಪಾತಕಿ ದಾವುದ್ ಇಬ್ರಾಹಿಂ ಬಗ್ಗೆ ನೀಡಿರುವ ಹೇಳಿಕೆ ಚಿತ್ರರಂಗದಲ್ಲಿ ಸಂಚಲನ ಮೂಡಿಸಿದೆ.

ಇತ್ತೀಚೆಗೆ ಫಿಲ್ಮ್‌ಫೇರ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಆರ್‌ಜಿವಿ, ತಮ್ಮ ಆತ್ಮಚರಿತ್ರೆಯಾದ 'ಗನ್ಸ್ ಆಯಂಡ್ ಥೈಸ್' ಪುಸ್ತಕವನ್ನು ಭೂಗತ ಪಾತಕಿ ದಾವುದ್ ಇಬ್ರಾಹಿಂಗೆ ಅರ್ಪಿಸಲು ಬಯಸಿದ್ದಾಗಿ ಬಹಿರಂಗಪಡಿಸಿದ್ದಾರೆ.

'ನಾನು ನನ್ನ ಪುಸ್ತಕವನ್ನು ದಾವುದ್ ಇಬ್ರಾಹಿಂಗೆ ಅರ್ಪಿಸಿದ್ದೆ. ಆದರೆ ಪ್ರಕಾಶಕರು ಅವನ ಹೆಸರನ್ನು ತೆಗೆದುಹಾಕಿದರು. ಒಂದು ವೇಳೆ ದಾವುದ್ ಇಬ್ರಾಹಿಂ ಇಲ್ಲದಿದ್ದರೆ, ನಾನು 'ಸತ್ಯ' ಮತ್ತು 'ಕಂಪನಿ' ರೀತಿಯ ಐಕಾನಿಕ್ ಚಿತ್ರಗಳನ್ನು ಮಾಡಲು ಸಾಧ್ಯವಾಗುತ್ತಿರಲಿಲ್ಲ. ಅವನಿಲ್ಲದೇ ನಾನು ಜೀವನೋಪಾಯವನ್ನು ಕಂಡುಕೊಳ್ಳಲು ಸಾಧ್ಯವಿರಲಿಲ್ಲ. ಹಾಗಾಗಿ ನಾನು ಅವನಿಗೆ ಪುಸ್ತಕವನ್ನು ಯಾಕೆ ಅರ್ಪಿಸಬಾರದು' ಎಂದು ಅವರು ಪ್ರಶ್ನಿಸಿದ್ದಾರೆ.

1990ರ ದಶಕದಲ್ಲಿ ಬಾಲಿವುಡ್ ಚಿತ್ರರಂಗದ ಮೇಲೆ ಭೂಗತ ಜಗತ್ತಿನ ಪ್ರಭಾವ ಹೆಚ್ಚಾಗಿತ್ತು. ಅನೇಕ ನಟರು ಮತ್ತು ನಿರ್ದೇಶಕರು ಬೆದರಿಕೆ ಕರೆಗಳನ್ನು ಸ್ವೀಕರಿಸುತ್ತಿದ್ದರು. ಆದರೆ ತಮಗೆ ಎಂದಿಗೂ ಅಂತಹ ಕರೆಗಳು ಬರಲಿಲ್ಲ ಎಂದು ವರ್ಮಾ ಹೇಳಿದ್ದಾರೆ.

ಇದಕ್ಕೆ ಕಾರಣ ಏನು ಎಂಬುದನ್ನೂ ಅವರು ವಿವರಿಸಿದ್ದಾರೆ. 'ಗ್ಯಾಂಗ್‌ಸ್ಟರ್‌ಗಳು ನನ್ನ ನಿರ್ದೇಶನದ 'ಸತ್ಯ' ಮತ್ತು 'ಕಂಪನಿ' ಸಿನಿಮಾಗಳನ್ನು ತುಂಬಾ ಇಷ್ಟಪಟ್ಟಿದ್ದರು. ನಾನು ಅವರ ಜೀವನವನ್ನು ತೆರೆಯ ಮೇಲೆ ತೋರಿಸಿದ ರೀತಿ ಅವರಿಗೆ ಇಷ್ಟವಾಗಿತ್ತು. ಹಾಗಾಗಿ ಅವರು ನನ್ನನ್ನು ಎಂದಿಗೂ ತೊಂದರೆಗೆ ಸಿಲುಕಿಸಲಿಲ್ಲ. ಬದಲಾಗಿ, ನಾನು ಅವರಿಗೆ ಒಬ್ಬ ಆತ್ಮೀಯ ಗೆಳೆಯನಂತೆ ಕಂಡೆ' ಎಂದು ರಾಮ್ ಗೋಪಾಲ್ ವರ್ಮಾ ಹೇಳಿಕೊಂಡಿದ್ದಾರೆ. ರಾಮ್ ಗೋಪಾಲ್ ವರ್ಮಾ ಅವರ ಗ್ಯಾಂಗ್‌ಸ್ಟರ್ ಚಿತ್ರಗಳು ನೈಜ ಘಟನೆಗಳಿಂದ ಪ್ರೇರಿತವಾಗಿದ್ದವು. ಭೂಗತ ಲೋಕದ ಕರಾಳ ಮುಖವನ್ನು ಅತ್ಯಂತ ನೈಜವಾಗಿ ಚಿತ್ರಿಸಿದ್ದರಿಂದ ಪಾತಕಿಗಳೂ ಸಹ ಅವರ ಕಲೆಗೆ ಮಾರುಹೋಗಿದ್ದರು ಎಂಬುದು ಆರ್‌ಜಿವಿ ಅವರ ವಾದ. ಒಟ್ಟಿನಲ್ಲಿ, ದಾವುದ್ ಇಬ್ರಾಹಿಂ ಕುರಿತಾದ ವರ್ಮಾ ಅವರ ಈ ನೇರ ಮತ್ತು ವಿವಾದಾತ್ಮಕ ಮಾತುಗಳು ಈಗ ಸಾಮಾಜಿಕ ಜಾಲತಾಣಗಳಲ್ಲಿ ಪರ-ವಿರೋಧ ಚರ್ಚೆಗೆ ಕಾರಣವಾಗಿವೆ.

# ಪ್ರಸಿದ್ಧ ಕೃಷ್ಣ ಬಿರುಗಾಳಿ ಬೌಲಿಂಗ್ ಬಳಿಕ ಶುಭಮನ್ ಗಿಲ್ ನಾಯಕನಾಟ; ಏಕನಾದಲ್ಲಿ ಲಖನೌ ಪತನ

ಅಂಕಪಟ್ಟಿಯಲ್ಲಿ 5ನೇ ಸ್ಥಾನ

ಕನ್ನಡಿಗ ಪ್ರಸಿದ್ಧ ಕೃಷ್ಣ ಅವರ ಮಾರಕ ಬೌಲಿಂಗ್, ಜಾಸ್ ಬಟ್ಲರ್ ಮತ್ತು ನಾಯಕ ಶುಭಮನ್ ಗಿಲ್ ಅವರ ಆಕರ್ಷಕ ಅರ್ಧಶತಕಗಳ ನೆರವಿನಿಂದ ಗುಜರಾತ್ ಟೈಟಾನ್ಸ್ ತಂಡ ಲಖನೌ ಸೂಪರ್ ಜೈಂಟ್ಸ್ ತಂಡವನ್ನು 7 ವಿಕೆಟ್ ಗಳಿಂದ ಭರ್ಜರಿಯಾಗಿ ಸೋಲಿಸಿದೆ. ಈ ಮೂಲಕ ಗುಜರಾತ್ ತಂಡ ಆಡಿದ 4 ಪಂದ್ಯಗಳಲ್ಲಿ 2 ಜಯಿಸಿ 4 ಅಂಕಗಳನ್ನು ಕಲೆ ಹಾಕಿ ಐಪಿಎಲ್ ಅಂಕಪಟ್ಟಿಯಲ್ಲಿ 5ನೇ ಸ್ಥಾನಕ್ಕೇರಿದೆ. ಇದೇವೇಳೆ ಲಖನೌ ಸೂಪರ್ ಜೈಂಟ್ಸ್ ಅಷ್ಟೇ ಪಂದ್ಯಗಳಲ್ಲಿ 2 ಗೆಲುವು, 2 ಸೋಲುಗಳೊಂದಿಗೆ 4 ಅಂಕಗಳನ್ನು ಗಳಿಸಿರುವ ಲಖನೌ ಸೂಪರ್ ಜೈಂಟ್ಸ್ ತಂಡ 6ನೇ ಸ್ಥಾನಕ್ಕಿಳಿದಿದೆ.

ಏಕನಾ ಕ್ರೀಡಾಂಗಣದಲ್ಲಿ ಏಪ್ರಿಲ್ 12ರ ಭಾನುವಾರದಂದು ನಡೆದ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಲಖನೌ ಸೂಪರ್ ಜೈಂಟ್ಸ್ ತಂಡ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 164 ರನ್ ಗಳಿಸಿತು. ಇದಕ್ಕೆ ಉತ್ತರವಾಗಿ ಗುಜರಾತ್ ಟೈಟಾನ್ಸ್ ತಂಡ ಇನ್ನೂ 8 ಎಸೆತಗಳು ಬಾಕಿ ಉಳಿದಿರುವಂತೆ 3 ವಿಕೆಟ್ ಕಳೆದುಕೊಂಡು ಜಯಭೇರಿ ಬಾರಿಸಿತು.




ಇದಕ್ಕೂ ಮೊದಲು ಕನ್ನಡಿಗ ಪ್ರಸಿದ್ಧ ಕೃಷ್ಣ, ಮೊಹಮ್ಮದ್ ಸಿರಾಜ್ ಮತ್ತು ಅಶೋಕ್ ಶರ್ಮಾ ಅವರ ಮಾರಕ ಬೌಲಿಂಗ್ ದಾಳಿಗೆ ಲಖನೌ ತಂಡ ರನ್ ಗಳಿಸಲು ಒದ್ದಾಡಿತು. ಐಡನ್ ಮಾರ್ಕ್‌ರಂ ಅವರು 21 ಎಸೆತಗಳಿಂದ 30 ರನ್ ಗಳಿಸಿದ್ದು ಬಿಟ್ಟರೆ ಬೇರಾವ ಬ್ಯಾಟರ್ ಸಹ 20 ರನ್ ಗಳಿಸಲು ಸಹ ಸಾಧ್ಯವಾಗಲಿಲ್ಲ. ಮಧ್ಯಮ ಕ್ರಮಾಂಕದಲ್ಲಂತೂ ಯಾವ ಬ್ಯಾಟರ್‌ಗಳಿಂದಲೂ ಉತ್ತಮ ಪ್ರದರ್ಶನ ಬರಲಿಲ್ಲ. ಪ್ರಸಿದ್ಧ ಕೃಷ್ಣ ಅವರು 4 ವಿಕೆಟ್ ಗಳಿಸಿದರು. ಇದೇವೇಳೆ ಅವರು ಆಡಿದ 4 ಪಂದ್ಯಗಳಿಂದ 10 ವಿಕೆಟ್ ಗಳಿಸಿದ್ದು ಪರ್ಪಲ್ ಕ್ಯಾಪ್ ತಮ್ಮದಾಗಿಸಿಕೊಂಡಿದ್ದಾರೆ.

ಸಂಕ್ಷಿಪ್ತ ಸ್ಕೋರ್

ಲಖನೌ ಸೂಪರ್ ಜೈಂಟ್ಸ್ 20 ಓವರ್ ಗಳಲ್ಲಿ 164/8, ಮಾರ್ಕ್‌ರಂ 30(21), ಪಂತ್ 18(11), ಮುಕುಲ್ ಚೌಧರಿ 18(14), ಪ್ರಸಿದ್ಧ ಕೃಷ್ಣ 28ಕ್ಕೆ 4, ಅಶೋಕ್ ಶರ್ಮಾ 32ಕ್ಕೆ2.

ಗುಜರಾತ್ ಟೈಟಾನ್ಸ್ 18.4 ಓವರ್ ಗಳಲ್ಲಿ 165/3, ಜೋಸ್ ಬಟ್ಲರ್ 60(37), ಶುಭಮನ್ ಗಿಲ್ 56(40), ವಾಶಿಂಗ್ಟನ್ ಸುಂದರ್ ಅಜೇಯ 21(13), ದಿಗ್ವೇಶ್ ರಾಠಿ 31ಕ್ಕೆ 1, ಪ್ರಿನ್ಸ್ ಯಾದವ್ 31ಕ್ಕೆ 1.

# ಮುಂಬೈಗೆ ಮಣ್ಣು ಮುಕ್ಕಿಸಿದ ಆರ್‌ಸಿಬಿ

ಮುಂಬೈನ ವಾಂಖೆಡೆ ಮೈದಾನದಲ್ಲಿ ನಡೆದ ಐಪಿಎಲ್ 2026 ರ 20ನೇ ಪಂದ್ಯದಲ್ಲಿ ಐದು ಬಾರಿಯ ಚಾಂಪಿಯನ್ ಮುಂಬೈ ಇಂಡಿಯನ್ಸ್, ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಿತ್ತು. ಈ ಲೀಗ್‌ನಲ್ಲಿ ಉಭಯ ತಂಡಗಳಿಗೆ ಇದು ನಾಲ್ಕನೇ ಪಂದ್ಯವಾಗಿತ್ತು. ಅದರಂತೆ ತವರು ಮೈದಾನದಲ್ಲಿ ಆರ್‌ಸಿಬಿಯನ್ನು ಮಣಿಸುವ ಇರಾದೆಯಲ್ಲಿದ್ದ ಮುಂಬೈಗೆ ಮತ್ತೆ ನಿರಾಸೆ ಎದುರಾಗಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ಮೂವರ ಅರ್ಧಶತಕದ ನೆರವಿನಿಂದ 241 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಮುಂಬೈ 222 ರನ್ ಕಲೆಹಾಕಲಷ್ಟೇ ಶಕ್ತವಾಗಿ 19 ರನ್‌ಗಳಿಂದ ಸೋಲೊಪ್ಪಿಕೊಂಡಿತು. ಇದು ಮುಂಬೈಗೆ ಸತತ ಎರಡನೇ ಸೋಲಾದರೆ, ಇತ್ತ ಕಳೆದ ಪಂದ್ಯದಲ್ಲಿ ಸೋಲುಕಂಡಿದ್ದ ಆರ್‌ಸಿಬಿ ಮತ್ತೆ ಗೆಲುವಿನ ಲಯಕ್ಕೆ ಮರಳಿದೆ.

**ಚರಿತ್ರೆ ಸೃಷ್ಟಿಸಿದ ವಿರಾಟ್ ಕೊಹ್ಲಿ!**

ಗೆದ್ದು ಬೀಗಿದ ಬೆಂಗಳೂರು




ಮುಂಬೈ ಇಂಡಿಯನ್ಸ್ ವಿರುದ್ಧ ಅರ್ಧಶತಕ ಸಿಡಿಸಿದ ಕೊಹ್ಲಿ ಆರ್‌ಸಿಬಿ 240 ರನ್‌ಗಳಿಸಲು ಪ್ರಮುಖ ಪಾತ್ರವಹಿಸಿದ್ದರು. ಜೊತೆಗೆ 5 ಬಾರಿಯ ಚಾಂಪಿಯನ್ಸ್ ವಿರುದ್ಧ ಹೆಚ್ಚು ರನ್‌ಗಳಿಸಿದ ದಾಖಲೆಯನ್ನ ತಮ್ಮದಾಗಿಸಿಕೊಂಡರು.

ವಾಂಖೆಡೆಯಲ್ಲಿ ನಡೆಯುತ್ತಿರುವ ಮುಂಬೈ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಖಅಃ) ತಂಡದ ಸ್ಟಾರ್ ಓಪನರ್ ವಿರಾಟ್ ಕೊಹ್ಲಿ ಐಪಿಎಲ್‌ನಲ್ಲಿ ಇತಿಹಾಸ ಸೃಷ್ಟಿಸಿದ್ದಾರೆ. ಮುಂಬೈ ಇಂಡಿಯನ್ಸ್ ವಿರುದ್ಧ ಅರ್ಧಶತಕ ಸಿಡಿಸಿದ ಕೊಹ್ಲಿ ಆರ್‌ಸಿಬಿ 240 ರನ್‌ಗಳಿಸಲು ಪ್ರಮುಖ ಪಾತ್ರವಹಿಸಿದ್ದರು.

ಈ 50 ರನ್‌ಗಳ ಮೂಲಕ ಐಪಿಎಲ್ ಇತಿಹಾಸದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ 1,000 ರನ್ ಗಳಿಸಿದ ಮೊದಲ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೆ ವಿರಾಟ್ ಪಾತ್ರರಾಗಿದ್ದಾರೆ. ಐಪಿಎಲ್ 2026 ರ ಋತುವಿನ ಭಾಗವಾಗಿ ಭಾನುವಾರ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ ಹೈ-ವೋಲ್ಟೇಜ್ ಪಂದ್ಯದಲ್ಲಿ ವಿರಾಟ್ ಕೊಹ್ಲಿ 38 ಎಸೆತಗಳಲ್ಲಿ 5 ಬೌಂಡರಿ ಮತ್ತು ಒಂದು ಸಿಕ್ಸರ್ ಸೇರಿದಂತೆ 50 ರನ್ ಗಳಿಸಿದರು.

ಮುಂಬೈ ವಿರುದ್ಧ ಕೇವಲ 36 ಇನ್ನಿಂಗ್ಸ್‌ಗಳಲ್ಲಿ ಕೊಹ್ಲಿ ಈ ಗಮನಾರ್ಹ ಸಾಧನೆ ಮಾಡಿದ್ದಾರೆ. ಈ ಪ್ರಕ್ರಿಯೆಯಲ್ಲಿ, ಅವರು ಹಿಂದೆ ಕೆಎಲ್ ರಾಹುಲ್ ಹೊಂದಿದ್ದ ದಾಖಲೆಯನ್ನು ಮುರಿದರು. ಕೆಎಲ್ ರಾಹುಲ್ 21 ಇನ್ನಿಂಗ್ಸ್‌ಗಳಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ 977 ರನ್ ಗಳಿಸಿದ್ದರು.

ಈ ಇಬ್ಬರು ಆಟಗಾರರನ್ನು ಹೊರತುಪಡಿಸಿದರೆ ಶಿಖರ್ ಧವನ್ (28 ಇನ್ನಿಂಗ್ಸ್‌ಗಳಲ್ಲಿ 901 ರನ್), ಅಜಿಂಕ್ಯ ರಹಾನೆ (29 ಇನ್ನಿಂಗ್ಸ್‌ಗಳಲ್ಲಿ 888 ರನ್), ಮತ್ತು ಸುರೇಶ್ ರೈನಾ (36 ಇನ್ನಿಂಗ್ಸ್‌ಗಳಲ್ಲಿ 850 ರನ್) ಇದ್ದಾರೆ. ಟಿ20 ಸ್ವರೂಪದಲ್ಲಿ ಒಂದೇ ತಂಡದ ವಿರುದ್ಧ ಅತಿ ಹೆಚ್ಚು ರನ್ ಗಳಿಸಿದ ಬ್ಯಾಟ್ಸ್‌ಮನ್ ಎಂಬ ದಾಖಲೆಯನ್ನು ಕೊಹ್ಲಿ ಹಲವು ತಂಡಗಳ ವಿರುದ್ಧ ಸಾಧಿಸಿದ್ದಾರೆ. ಇದೇ ವರ್ಷ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ 1,188 ರನ್ ಗಳಿಸುವ ಮೂಲಕ ಅವರು ಈ ಸಾಧನೆ ಮಾಡಿದ್ದಾರೆ. ಈ ಪ್ರಕ್ರಿಯೆಯಲ್ಲಿ, ಅವರು ರೋಹಿತ್ ಶರ್ಮಾ ಅವರ ದಾಖಲೆಯನ್ನು (ಕೆಕೆಆರ್ ವಿರುದ್ಧ 1,161 ರನ್) ಹಿಂದಿಕ್ಕಿದ್ದಾರೆ. ವಿರಾಟ್ ಮುಂಬೈ, ಸಿಎಸ್‌ಕೆ ಅಲ್ಲದೆ, ಪಂಜಾಬ್ ಕಿಂಗ್ಸ್ ವಿರುದ್ಧ 1159 ರನ್, ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ 1130 ರನ್, ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ 1021 ರನ್‌ಗಳಿಸಿದ್ದಾರೆ. ರಾಜಸ್ಥಾನ್ ವಿರುದ್ಧ (928) ರನ್‌ಗಳಿಸಿ 1000 ರನ್‌ಗಳ ಹೊಸ್ತಿಲಲ್ಲಿದ್ದಾರೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ನಿಗದಿತ 20 ಓವರ್‌ಗಳಲ್ಲಿ 4 ವಿಕೆಟ್‌ಗಳ ನಷ್ಟಕ್ಕೆ ಒಟ್ಟು 240 ರನ್ ಗಳಿಸಿತು. ಫಿಲ್ ಸಾಲ್ಟ್ 36 ಎಸೆತಗಳಲ್ಲಿ 78, ವಿರಾಟ್ ಕೊಹ್ಲಿ 38 ಎಸೆತಗಳಲ್ಲಿ 50, ರಜತ್ ಪಾಟೀದಾರ್ 20 ಎಸೆತಗಳಲ್ಲಿ 53 ಮತ್ತು ಟಿಮ್ ಡೇವಿಡ್ 16 ಎಸೆತಗಳಲ್ಲಿ ಅಜೇಯ 34 ರನ್‌ಗಳಿಸಿ ಬೃಹತ್ ಮೊತ್ತಕ್ಕೆ ಕಾರಣರಾದರು.

# ನಮ್ಮ ಬೌಲಿಂಗ್ ಚೆನ್ನಾಗಿತ್ತು

## ಸೋಲಿಗೆ ಈ ತಪ್ಪುಗಳೇ ಕಾರಣ..!




ಐಪಿಎಲ್ 2026ರ 18ನೇ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ 23 ರನ್‌ಗಳ ಸೋಲು ಕಂಡ ನಂತರ ಡೆಲ್ಲಿ ಕ್ಯಾಪಿಟಲ್ಸ್ ನಾಯಕ ಅಕ್ಷರ್ ಪಟೇಲ್ ತಮ್ಮ ತಂಡದ ಪ್ರದರ್ಶನದ ಬಗ್ಗೆ ಮುಕ್ತವಾಗಿ ಮಾತನಾಡಿದ್ದಾರೆ. ಚೆನ್ನೈನಲ್ಲಿ ನಡೆದ ಈ ಪಂದ್ಯದ ನಂತರದ ಮಾತನಾಡಿದ ಅವರು, ಸೋಲಿಗೆ ಮುಖ್ಯ ಕಾರಣಗಳನ್ನು ವಿಶ್ಲೇಷಿಸಿದ್ದಾರೆ.

**ಫೀಲ್ಡಿಂಗ್ ವೈಫಲ್ಯವೇ ಪಂದ್ಯದ ತಿರುವು:** ಅಕ್ಷರ್ ಪಟೇಲ್ ಅವರ ಪ್ರಕಾರ, ಈ ಪಂದ್ಯದ ಫಲಿತಾಂಶವನ್ನು ಬದಲಿಸಿದ್ದು ತಂಡದ ಕಳಪೆ ಫೀಲ್ಡಿಂಗ್. ''ನನ್ನ ಪ್ರಕಾರ ಫೀಲ್ಡಿಂಗ್‌ನಲ್ಲಿನ ವ್ಯತ್ಯಾಸವೇ ಪಂದ್ಯದ ಹಣೆಬರಹ ನಿರ್ಧರಿಸಿತು. ನಾವು ಒಂದು ಅಥವಾ ಎರಡು ಪ್ರಮುಖ ಕ್ಯಾಚ್‌ಗಳನ್ನು ಕೈಬಿಟ್ಟೆವು. ಆ ತಪ್ಪುಗಳನ್ನು ಮಾಡದಿದ್ದರೆ ಪಂದ್ಯದ ಫಲಿತಾಂಶವೇ ಬೇರೆಯಾಗಿರುತ್ತಿತ್ತು,'' ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**ದಿಢೀರ್ ಕುಸಿತವೇ ಹಿನ್ನಡೆ:** ಚೇಸಿಂಗ್ ಬಗ್ಗೆ ಮಾತನಾಡಿದ ಅಕ್ಷರ್ ಪಟೇಲ್, ತಂಡಕ್ಕೆ ಉತ್ತಮ ಆರಂಭ ಸಿಕ್ಕರೂ ಅದನ್ನು ಉಳಿಸಿಕೊಳ್ಳಲು ಸಾಧ್ಯವಾಗಲಿಲ್ಲ ಎಂದಿದ್ದಾರೆ. ''ಪವರ್‌ಪ್ಲೇ ನಂತರ ನಾವು ಸತತವಾಗಿ ಎರಡು-ಮೂರು ವಿಕೆಟ್ ಕಳೆದುಕೊಂಡೆವು. ಇದು ನಮ್ಮ ಬ್ಯಾಟಿಂಗ್ ಲಯವನ್ನು ಪೂರ್ತಿ ಹಾಳುಮಾಡಿತು. ಬ್ಯಾಟರ್‌ಗಳು ಶ್ರಮವಹಿಸಿದರೂ, ಬ್ಯಾಕ್ ಟು ಬ್ಯಾಕ್ ವಿಕೆಟ್ ಕಳೆದುಕೊಂಡಿದ್ದು ನಮಗೆ ಹಿನ್ನಡೆಯಾಯಿತು,'' ಎಂದಿದ್ದಾರೆ.

**ಬೌಲರ್‌ಗಳಿಗೆ ಪ್ರಶಂಸೆ:** ಸೋಲಿನ ನಡುವೆಯೂ ಅಕ್ಷರ್ ತಮ್ಮ ಬೌಲರ್‌ಗಳ ಕಾರ್ಯವೈಖರಿಯನ್ನು ಶ್ಲಾಘಿಸಿದ್ದಾರೆ. ''ಸಿಎಸ್‌ಕೆ ಬ್ಯಾಟರ್‌ಗಳು ಕ್ರೀಸ್‌ಗೆ ಭದ್ರವಾಗಿ ಅಂಟಿಕೊಂಡಿದ್ದರೂ, ಅವರನ್ನು 212 ರನ್‌ಗಳಿಗೆ ನಿಯಂತ್ರಿಸಿದ್ದು ದೊಡ್ಡ ವಿಷಯ. ಬೌಲರ್‌ಗಳು ತಮ್ಮ ಕೆಲಸವನ್ನು ಅಚ್ಚುಕಟ್ಟಾಗಿ ಮಾಡಿದ್ದಾರೆ. ಇದೊಂದು ಅತ್ಯುತ್ತಮ ಬ್ಯಾಟಿಂಗ್ ಪಿಚ್ ಆಗಿತ್ತು. ಇದಾಗ್ಯೂ ನಮ್ಮ ಬೌಲರ್‌ಗಳನ್ನು ಎದುರಾಳಿಗಳನ್ನು 212 ರನ್‌ಗಳಿಗೆ ನಿಯಂತ್ರಿಸಿರುವುದು ಶ್ಲಾಘನೀಯ '' ಎಂದು ತಿಳಿಸಿದ್ದಾರೆ. ಇನ್ನು ಪಿಚ್ ಬಗ್ಗೆ ಮಾತನಾಡುತ್ತಾ, ''ಪಿಚ್ ನಿಧಾನಗತಿಯಾಯಿತು ಎಂದು ನನಗನ್ನಿಸುವುದಿಲ್ಲ. ಇಬ್ಬನಿ ಇದ್ದ ಕಾರಣ ಬೌಲಿಂಗ್ ಮಾಡುವುದು ಸಿಎಸ್‌ಕೆ ತಂಡಕ್ಕೆ ಸವಾಲಾಗಿತ್ತು. ಆದರೆ ಅವರು ಆ ಪರಿಸ್ಥಿತಿಯಲ್ಲೂ ಅತ್ಯುತ್ತಮವಾಗಿ ಬೌಲಿಂಗ್ ಮಾಡಿದರು,'' ಎಂದು ಎದುರಾಳಿ ತಂಡದ ಬೌಲಿಂಗ್ ಅನ್ನು ಕೂಡ ಅಕ್ಷರ್ ಪಟೇಲ್ ಹೊಗಳಿದ್ದಾರೆ. ಒಟ್ಟಾರೆಯಾಗಿ, ಬ್ಯಾಟಿಂಗ್ ಮತ್ತು ಬೌಲಿಂಗ್‌ನಲ್ಲಿ ನಮ್ಮ ಆಟಗಾರರು ಉತ್ತಮ ಪ್ರದರ್ಶನ ನೀಡಿದ್ದಾರೆ. ಇದಾಗ್ಯೂ ಫೀಲ್ಡಿಂಗ್‌ನಲ್ಲಿನ ತಪ್ಪುಗಳೇ ಸೋಲಿಗೆ ಮೂಲ ಕಾರಣ ಎಂದು ಡೆಲ್ಲಿ ಕ್ಯಾಪಿಟಲ್ಸ್ ತಂಡದ ನಾಯಕ ಅಕ್ಷರ್ ಪಟೇಲ್ ಅಭಿಪ್ರಾಯಪಟ್ಟಿದ್ದಾರೆ.

# ಫೋನ್ ಎತ್ಕೊಂಡು ಹೋಗ್ಬಿಡು




ಐಪಿಎಲ್ ಎಂದರೆ ಕೇವಲ ಸಿಕ್ಸರ್-ಬೌಂಡರಿಗಳ ಅಬ್ಬರವಲ್ಲ, ಅಲ್ಲಿ ಆಟಗಾರರ ನಡವಳಿಕೆಯೂ ಅಷ್ಟೇ ಮುಖ್ಯವಾಗುತ್ತದೆ. ಪ್ರಸಕ್ತ 2026ರ ಐಪಿಎಲ್ ಆವೃತ್ತಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಪರ ಆಡುತ್ತಿರುವ ಸ್ಫೋಟಕ ಬ್ಯಾಟರ್ ಟಿಮ್ ಡೇವಿಡ್, ತಮ್ಮ ಬ್ಯಾಟಿಂಗ್ ಮಾತ್ರವಲ್ಲದೆ ತಮ್ಮ ಸಮಾಧಾನದ ಗುಣದಿಂದಲೂ ಅಭಿಮಾನಿಗಳ ಮನ ಗೆದ್ದಿದ್ದಾರೆ.

ಇತ್ತೀಚಿನ ಪಂದ್ಯವೊಂದರ ಮುಕ್ತಾಯದ ನಂತರ, ಟಿಮ್ ಡೇವಿಡ್ ಮೈದಾನದಿಂದ ಹೊರಹೋಗುತ್ತಿದ್ದಾಗ ಅಭಿಮಾನಿಯೊಬ್ಬರು ಅತೀ ಉತ್ಸಾಹದಿಂದ ಅವರ ಬಳಿ ಬಂದು ಸೆಲ್ಫಿಗಾಗಿ ವಿನಂತಿಸಿದರು. ಈ ವೇಳೆ ಆ ಅಭಿಮಾನಿ ಡೇವಿಡ್ ಅವರಿಗೆ ತೀರಾ ಹತ್ತಿರ ಬಂದಿದ್ದರೂ, ಅವರು ಕಿರಿಕಿರಿ ಮಾಡಿಕೊಳ್ಳದೆ ಬಹಳ ಶಾಂತವಾಗಿ ಆತನ ಮೊಬೈಲ್ ಫೋನ್ ಪಡೆದು, ಅದನ್ನು ಹಿಂತಿರುಗಿಸಿದ್ದಾರೆ. ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ವೈರಲ್ ಆಗಿದ್ದು, ''ನಿಜವಾದ ಕ್ರೀಡಾ ಮನೋಭಾವ'' ಎಂದು ನೆಟ್ಟಿಗರು ಶ್ಲಾಘಿಸುತ್ತಿದ್ದಾರೆ. ಮೈದಾನದಲ್ಲಿ ದೈತ್ಯ ಸಿಕ್ಸರ್‌ಗಳನ್ನು ಹೊಡೆಯುವ ಈ ಆಟಗಾರ, ಮೈದಾನದ ಹೊರಗೆ ಕಿರಿ ಕಿರಿ ಅನುಭವಿಸಿದರೂ ಎಷ್ಟೊಂದು ವಿನಯವಾಗಿ ವರ್ತಿಸಿದ್ದಾರೆ ಎಂದು ಅಭಿಮಾನಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಸದ್ಯ ಮುಂಬೈನಲ್ಲಿರುವ ಟಿಮ್ ಡೇವಿಡ್ ಆ್ಯಂಡ್ ಆರ್‌ಸಿಬಿ ಪಡೆ ನಡೆಯಲಿರುವ ಮುಂಬೈ ಇಂಡಿಯನ್ಸ್ ವಿರುದ್ಧದ ಪಂದ್ಯದಲ್ಲಿ ಕಣಕ್ಕಿಳಿಯಲಿದೆ. ವಾಂಖೆಡೆ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯದ ಮೂಲಕ ಆರ್‌ಸಿಬಿ ಗೆಲುವಿನ ಲಯಕ್ಕೆ ಮರಳುವ ವಿಶ್ವಾಸದಲ್ಲಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966